24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 140 | ನವದೆಹಲಿ | ಬೆಲೆ ₹ 10 | ನವಂಬರ್ 17, 2026, ಮಂಗಳವಾರ

CWP COMMONWEALTH WOMEN PARLIAMENTARIANS

ಕರ್ನಾಟಕ ವಿಧಾನಮಂಡಲ



ಶ್ರೀ ಸಲೀಂ ಅಹ್ಮದ್
ಮಾನ್ಯ ಸಭಾಪತಿಗಳು,
ಕರ್ನಾಟಕ ವಿಧಾನ ಪರಿಷತ್ತು



ಡಾ. ಡಿ. ಪುರಂದೇಶ್ವರಿ
ಮಾನ್ಯ ಅಧ್ಯಕ್ಷರು,
ಕಾಮನ್ವೆಲ್ತ್ ಮಹಿಳಾ ಸಂಸದೀಯರು - ಭಾರತ ಪ್ರಾದೇಶಿಕ ಘಟಕ



ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಶ್ರೀ ಓಂ ಬಿರ್ಲಾ
ಮಾನ್ಯ ಸಭಾಧ್ಯಕ್ಷರು
ಲೋಕ ಸಭೆ



ಶ್ರೀ ಹರಿವಂಶ್
ಮಾನ್ಯ ಉಪ ಸಭಾಪತಿಗಳು,
ರಾಜ್ಯಸಭೆ



ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಶ್ರೀ ಜಿ. ಎಸ್. ಪಾಟೀಲ
ಮಾನ್ಯ ಸಭಾಧ್ಯಕ್ಷರು,
ಕರ್ನಾಟಕ ವಿಧಾನಸಭೆ



ಡಾ. ಉಮಾಶ್ರೀ
ಮಾನ್ಯ ಉಪ ಸಭಾಪತಿಗಳು,
ಕರ್ನಾಟಕ ವಿಧಾನ ಪರಿಷತ್ತು

CWP INDIA REGION
COMMONWEALTH WOMEN PARLIAMENTARIANS



ಶ್ರೀ ಮಂಕಾಳ ಎಸ್. ವೈದ್ಯ
ಮಾನ್ಯ ಉಪ ಸಭಾಧ್ಯಕ್ಷರು,
ಕರ್ನಾಟಕ ವಿಧಾನಸಭೆ

ಭಾರತದಲ್ಲಿ ಮೊದಲ ಬಾರಿಗೆ ನಡೆಯುತ್ತಿರುವ ಕಾಮನ್ವೆಲ್ತ್ ಮಹಿಳಾ ಸಂಸದೀಯರ (CWP) ಸಮ್ಮೇಳನ

ದಿನಾಂಕ
17-18
ನವೆಂಬರ್ 2026



ಸ್ಥಳ
ವಿಧಾನ ಸೌಧ
ಬೆಂಗಳೂರು

ಮಹಿಳಾ ಶಕ್ತಿಯ ಸಂಗಮ, ಉಜ್ವಲ ಭವಿಷ್ಯದ ಸಂಕಲ್ಪ

ಭಾರತ ಸಂಸತ್ತು ಹಾಗೂ ಕರ್ನಾಟಕ ವಿಧಾನಮಂಡಲದ ಸಹಯೋಗದಲ್ಲಿ ನವೆಂಬರ್ 17 ಮತ್ತು 18ರಂದು ಬೆಂಗಳೂರಿನಲ್ಲಿ ಕಾಮನ್ವೆಲ್ತ್ ಮಹಿಳಾ ಸಂಸದೀಯರ (CWP) ಭಾರತ ಪ್ರಾದೇಶಿಕ ಸಮ್ಮೇಳನವನ್ನು ಆಯೋಜಿಸಲಾಗುತ್ತಿದೆ. ಈ ಸ್ವರೂಪದ ಸಮ್ಮೇಳನ ಭಾರತದಲ್ಲಿ ಮೊದಲ ಬಾರಿಗೆ ನಡೆಯುತ್ತಿದ್ದು , ದೇಶದ ವಿವಿಧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಮಹಿಳಾ ಜನಪ್ರತಿನಿಧಿಗಳನ್ನು ಒಂದೇ ವೇದಿಕೆಗೆ ತರಲಿದೆ.

ಭದ್ರ ಬುನಾದಿ, ಸಶಕ್ತ ಧ್ವನಿಗಳು: ನೂತನ ಮಹಿಳಾ ಜನಪ್ರತಿನಿಧಿಗಳಿಗಾಗಿ ಸೈಬರ್ ಸುರಕ್ಷತೆ ಮತ್ತು ಮಾರ್ಗದರ್ಶನದ ಹಾದಿಗಳು ಎಂಬ ಆಶಯದಡಿ ಎರಡು ದಿನಗಳ ಸಮ್ಮೇಳನ ನಡೆಯಲಿದೆ. ಸಾರ್ವಜನಿಕ ಜೀವನದಲ್ಲಿರುವ ಮಹಿಳಾ ಜನಪ್ರತಿನಿಧಿಗಳ ಸೈಬರ್ ಸುರಕ್ಷತೆ, ಡಿಜಿಟಲ್ ಜಗತ್ತಿನ ಸವಾಲುಗಳು ಹಾಗೂ ನೂತನ ಮಹಿಳಾ ಜನಪ್ರತಿನಿಧಿಗಳಿಗೆ ಅನುಭವಿಗಳ ಮಾರ್ಗದರ್ಶನ ಒದಗಿಸುವ ಕುರಿತು ಸಮ್ಮೇಳನದಲ್ಲಿ ಚರ್ಚಿಸಲಾಗುವುದು. ಶಾಸನಾತ್ಮಕ ತಿಳುವಳಿಕೆ, ನಾಯಕತ್ವ ಸಾಮರ್ಥ್ಯ ಮತ್ತು ಪ್ರಜಾಪ್ರಭುತ್ವದ ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆಯಲ್ಲಿ ಮಹಿಳೆಯರ ಪರಿಣಾಮಕಾರಿ ಪಾಲ್ಗೊಳ್ಳುವಿಕೆಯನ್ನು ಬಲಪಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಸುರಕ್ಷಿತ ಡಿಜಿಟಲ್ ವಾತಾವರಣ, ಸಶಕ್ತ ಮಹಿಳಾ ನಾಯಕತ್ವ ಹಾಗೂ ಸದೃಢ ಪ್ರಜಾಪ್ರಭುತ್ವದತ್ತ ಮಹತ್ವದ ಹೆಜ್ಜೆ.



"ನಮ್ಮ ಅದ್ಭುತ ಸಂಸ್ಕೃತಿ ಮತ್ತು ಪರಂಪರೆಯನ್ನು ರಕ್ಷಿಸುವುದು ಮತ್ತು ಗೌರವಿಸುವುದು ಪ್ರತಿಯೊಬ್ಬ ನಾಗರಿಕನ ಮೂಲಭೂತ ಕರ್ತವ್ಯವಾಗಿದೆ. ಇದನ್ನು ನಮ್ಮ ಸಂವಿಧಾನವು ದೃಢಪಡಿಸುತ್ತದೆ"

ನಿತ್ಯ ಪಂಚಾಂಗ 17.11.2026 ಮಂಗಳವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ವೃಶ್ಚಿಕ ಸಂಕ್ರಮಣ, ಗೋಪಷ್ಟಮಿ, ಶೃಂಗೇರಿ ವಿದ್ಯಶಂಕರ ರಥ, ಅಷ್ಟಹಗನಿಕ ಪರ್ವರಂಭ, ಮೇಲುಕೋಟೆ ರಾಜಮುಡೀ ಉತ್ಸವ

ದಿನ	ರಾಹುಕಾಲ	ಯಮಗಂಡ	ಗುಳಕಕಾಲ
ಭಾನು	ಸ. 5.04– 6.33	12.00– 1.30	3.00– 4.00
ಸೋಮ	ಬೆ. 7.20– 9.04	10.30–12.00	1.30– 3.00
ಮಂಗಳ	ಮ. 3.25– 4.59	9.00–10.30	12.00– 1.30
ಬುಧ	ಮ.12.16– 1.50	7.30– 9.00	10.30– 12.00
ಗುರು	ಮ. 1.50– 3.29	6.00– 7.30	9.00– 10.30
ಶುಕ್ರ	ಬೆ.10.42–12.16	3.00– 4.30	7.30– 9.00
ಶನಿ	ಬೆ. 9.07–10.41	1.30– 3.00	6.00– 7.30

ಕರ್ನಾಟಕ ನೀರಾವರಿ ಹಿತಾಸಕ್ತಿ ರಕ್ಷಿಸಿ: ಮೋದಿಗೆ ಮಾಜಿ ಪ್ರಧಾನಿ ದೇವೇಗೌಡರ ಪತ್ರ

ಬೆಂಗಳೂರು, ನ.16: ಕರ್ನಾಟಕದ ದೀರ್ಘಕಾಲೀನ ಜಲ ಮತ್ತು ನೀರಾವರಿ ಹಿತಾಸಕ್ತಿಗಳಿಗೆ ಸಂಬಂಧಿಸಿದಂತೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಗೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಪತ್ರ ಬರೆದಿದ್ದಾರೆ. ಶೀಘ್ರದಲ್ಲೇ ಪ್ರಧಾನಮಂತ್ರಿಗಳನ್ನು ಭೇಟಿಯಾಗಿ, ಪತ್ರದಲ್ಲಿ ಪ್ರಸ್ತಾಪಿಸಿರುವ ಪ್ರಮುಖ ಅಂಶಗಳ ಬಗ್ಗೆ ಮನವರಿಕೆ ಮಾಡಿಕೊಡುವುದಾಗಿಯೂ ತಿಳಿಸಿದ್ದಾರೆ.

ಕಾವೇರಿ ಜಲಾನಯನ ಪ್ರದೇಶದಲ್ಲಿ ಕುಡಿಯುವ ನೀರು ಮತ್ತು ನೀರಾವರಿಗಾಗಿ ಎದುರಾಗಿರುವ ನೀರಿನ ಕೊರತೆಯಿಂದ ಕರ್ನಾಟಕ ಎದುರಿಸುತ್ತಿರುವ ಗಂಭೀರ ಸಮಸ್ಯೆಗಳನ್ನು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಪ್ರಸಕ್ತ ವರ್ಷ ಕರ್ನಾಟಕಕ್ಕೆ ನೀರಿನ ಅಭಾವದ ವರ್ಷವಾಗಿದೆ. ರಾಜ್ಯದಲ್ಲಿ ವಾಡಿಕೆಗಿಂತ ಶೇ.35ರಿಂದ 40ರಷ್ಟು ಮಳೆ ಕೊರತೆಯಿಂದಾಗಿ ಕರ್ನಾಟಕದ ಜಲಾಶಯಗಳು ಶೇ.50ರಿಂದ 55ರಷ್ಟು ಮಾತ್ರ ಭರ್ತಿಯಾಗಿವೆ. ಪರಿಣಾಮವಾಗಿ



ನೀರಾವರಿಗೆ ಮಾತ್ರವಲ್ಲದೆ ಕುಡಿಯುವ ನೀರಿಗೂ ಕೊರತೆ ಎದುರಾಗಿದೆ. ಕರ್ನಾಟಕದ ಜಲಾಶಯಗಳಲ್ಲಿ ಅತ್ಯಂತ ಕಡಿಮೆ ಪ್ರಮಾಣದ ನೀರು ಸಂಗ್ರಹವಾಗಿದ್ದರೂ, ತಮಿಳುನಾಡಿನ ಬೇಡಿಕೆಗೆ ಮಣಿದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರವು ಕರ್ನಾಟಕಕ್ಕೆ ಪದೇಪದೇ ತಮಿಳುನಾಡಿಗೆ ನೀರು ಬಿಡುಗಡೆ ಮಾಡುವಂತೆ ನಿರ್ದೇಶನ ನೀಡುತ್ತಿದೆ. ಮುಂಬರುವ ಬೇಸಿಗೆಯಲ್ಲಿ ಬೆಂಗಳೂರು ಮತ್ತು ನೆರೆಹೊರೆಯ ಪ್ರದೇಶಗಳ ಕುಡಿಯುವ ನೀರಿನ ಅಗತ್ಯಗಳನ್ನು ಪೂರೈಸಲು ಜಲಾಶಯಗಳಲ್ಲಿ ಲಭ್ಯವಿರುವ ಅಲ್ಪ ಪ್ರಮಾಣದ ನೀರನ್ನು ಕಾಯ್ದಿರಿಸಬೇಕೆಂದು ಕರ್ನಾಟಕವು ಪ್ರಾಧಿಕಾರದ ಮುಂದೆ ಮಾಡಿದ ಎಲ್ಲಾ ಮನವಿಗಳನ್ನು ನಿರ್ಲಕ್ಷಿಸಲಾಗುತ್ತಿದೆ. ಸಿಡಬ್ಲ್ಯುಎಂಎ ನಿರ್ದೇಶನ ಸಂಪೂರ್ಣವಾಗಿ ಪಾಲಿಸಿದರೆ, ಕರ್ನಾಟಕದ ಜಲಾಶಯಗಳು ಶೀಘ್ರದಲ್ಲೇ ಖಾಲಿಯಾಗಲಿವೆ. ಇಂತಹ ಪರಿಸ್ಥಿತಿಯಲ್ಲಿ ಕುಡಿಯುವ ನೀರಿನ ಕೊರತೆ ಆತಂಕಕಾರಿ ಮಟ್ಟಕ್ಕೆ ತಲುಪುವುದರಲ್ಲಿ ಯಾವುದೇ ಸಂದೇಹವಿಲ್ಲ ಎಂಬುದನ್ನು ಪತ್ರದ ಆರಂಭದಲ್ಲಿಯೇ ದೇವೇಗೌಡರು ಉಲ್ಲೇಖಿಸಿದ್ದಾರೆ. ರಾಷ್ಟ್ರೀಯ ಜಲನೀತಿಯ ಪ್ರಕಾರ ಕುಡಿಯುವ ನೀರಿಗೆ ಅತ್ಯುನ್ನತ ಆದ್ಯತೆ ನೀಡಲಾಗಿದೆ. ಹೀಗಿರುವಾಗ ಪ್ರಾಧಿಕಾರ ಕರ್ನಾಟಕದ ಅಹವಾಲುಗಳನ್ನು ಆಲಿಸಿ, ಕರ್ನಾಟಕದ ಜಲಾಶಯಗಳಿಂದ ತಮಿಳುನಾಡಿಗೆ ನೀರು ಬಿಡುಗಡೆ ಮಾಡುವ ಬೇಡಿಕೆಯನ್ನು ತಿರಸ್ಕರಿಸಬೇಕಿತ್ತು ಎಂದು ದೇವೇಗೌಡರು ಅಭಿಪ್ರಾಯಪಟ್ಟಿದ್ದಾರೆ.

ಮೇಕೆದಾಟು ಯೋಜನೆಗೆ ಅನುಮೋದನೆಗೆ ಆಗ್ರಹ

ಬೆಂಗಳೂರಿನ ವೇಗವಾಗಿ ಬೆಳೆಯುತ್ತಿರುವ ಜಾಗತಿಕ ನಗರದ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸುವ ಉದ್ದೇಶದಿಂದ, ತಮಿಳುನಾಡು ಗಡಿಯ ಸಮೀಪ ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟು ಕುಡಿಯುವ ನೀರು ಪೂರೈಕೆ ಯೋಜನೆ (ಸಮತೋಲನ ಜಲಾಶಯ) ನಿರ್ಮಿಸಲು ಕರ್ನಾಟಕ ಪ್ರಸ್ತಾಪಿಸಿದೆ. ಈ ಸಂಬಂಧ ಸಿಡಬ್ಲ್ಯುಸಿಗೆ ಕರ್ನಾಟಕವು 2026ರ ಆಗಸ್ಟ್ 13ರಂದು ಪರಿಷ್ಕೃತ ಡಿಪಿಆರ್ ಸಲ್ಲಿಸಿದೆ. ಬೆಂಗಳೂರಿನ ಕುಡಿಯುವ ನೀರಿನ ಸಮಸ್ಯೆಯ ತೀವ್ರತೆಯನ್ನು ಪರಿಗಣಿಸಿ, ಮೇಕೆದಾಟು ಯೋಜನೆಯ ಡಿಪಿಆರ್‌ಗೆ ಕೇಂದ್ರ ಜಲ ಆಯೋಗವು ಅತ್ಯಂತ ಆದ್ಯತೆಯ ಮೇರೆಗೆ ಅನುಮೋದನೆ ನೀಡಬೇಕು ಎಂದು ದೇವೇಗೌಡ ಆಗ್ರಹಿಸಿದ್ದಾರೆ.

ಗೋದಾವರಿ-ಕೃಷ್ಣಾ-ಕಾವೇರಿ ಜೋಡಣೆ ಬಗ್ಗೆಯೂ ಪ್ರಸ್ತಾಪ

ಗೋದಾವರಿ-ಕೃಷ್ಣಾ-ಕಾವೇರಿ ನದಿ ಜೋಡಣೆ ಯೋಜನೆ ವಿಚಾರವಾಗಿಯೂ ಪ್ರಸ್ತಾಪಿಸಿರುವ ಅವರು, ರಾಷ್ಟ್ರೀಯ ಜಲ ಅಭಿವೃದ್ಧಿ ಸಂಸ್ಥೆ (ಯೋಜಿಸುತ್ತಿರುವ ಮಹತ್ವದ ರಾಷ್ಟ್ರೀಯ ಯೋಜನೆ ಇದಾಗಿದೆ. ಈ ಯೋಜನೆಯ ಪ್ರಸ್ತಾಪದ ಪ್ರಕಾರ ಗೋದಾವರಿ ನದಿಯಿಂದ 147 ಟಿಎಂಸಿ ನೀರನ್ನು ಕಾವೇರಿ ನದಿಗೆ ಹರಿಸುವ ಉದ್ದೇಶವಿದೆ. ಎನ್‌ಡಬ್ಲ್ಯುಡಿಎ ಈಗಾಗಲೇ ಯೋಜನೆಯ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಿದೆ. ಕಾವೇರಿ ನದಿಗೆ ವರ್ಗಾಯಿಸುವ ನೀರಿನ ಹಂಚಿಕೆಯನ್ನೂ ಬಹುತೇಕ ಅಂತಿಮಗೊಳಿಸಲಾಗಿದೆ ಎಂದು ಎಚ್.ಡಿ ದೇವೇಗೌಡರು ತಿಳಿಸಿದ್ದಾರೆ.

ರಾಜ್ಯಮಟ್ಟದ ಸಹಕಾರ ಸಪ್ತಾಹ ಗೌರವ ಪ್ರಶಸ್ತಿಗೆ ಪತ್ರಕರ್ತ ಪಿ.ಬಿ.ಹರೀಶ್ ರೈ ಆಯ್ಕೆ



ಮುಂಬಯಿ, ನ.16: ಕರ್ನಾಟಕ ರಾಜ್ಯ ಸಹಕಾರ ಮಹಾ ಮಂಡಳ ಬೆಂಗಳೂರು ಹಾಗೂ ದ.ಕ.ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ವತಿಯಿಂದ ನಡೆಯುವ 73ನೇ ಸಹಕಾರ ಸಪ್ತಾಹದ ರಾಜ್ಯಮಟ್ಟದ ಕಾರ್ಯಕ್ರಮದಲ್ಲಿ ಪತ್ರಿಕಾ ರಂಗದ ಸೇವೆಗಾಗಿ ನೀಡಲಾಗುವ ಗೌರವ ಪ್ರಶಸ್ತಿಗೆ ಹಿರಿಯ ಪತ್ರಕರ್ತ, ಮಂಗಳೂರು ಪ್ರೆಸ್‌ಕ್ಲಬ್ ಅಧ್ಯಕ್ಷ ಪಿ.ಬಿ.ಹರೀಶ್ ರೈ ಆಯ್ಕೆಯಾಗಿದ್ದಾರೆ ಎಂದು ದ.ಕ.ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷ ಡಾ.ಎಂ. ಎನ್.ರಾಜೇಂದ್ರ ಕುಮಾರ್ ತಿಳಿಸಿದ್ದಾರೆ. ಪತ್ರಿಕೋದ್ಯಮದಲ್ಲಿ 3 ದಶಗಳ ಅನುಭವ ಇರುವ ಪಿ.ಬಿ.ಹರೀಶ್ ರೈ ದ.ಕ.ಜಿಲ್ಲಾ ಕಾರ್ಯನಿರತ ಪತ್ರಕರ್ತ ಸಂಘದ ಅಧ್ಯಕ್ಷರಾಗಿ, ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಮಂಡಳಿ ಸದಸ್ಯರಾಗಿ, ಐನೆಕಿದು-ಸುಬ್ರಹ್ಮಣ್ಯ ಸೇವಾ ಸಹಕಾರಿ ಬ್ಯಾಂಕಿನ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ವಿಜಯವಾಣಿ ದಿನಪತ್ರಿಕೆಯ ಮುಖ್ಯ ವರದಿಗಾರರಾಗಿದ್ದಾರೆ. 73ನೇ ಸಹಕಾರ ಸಪ್ತಾಹದ ರಾಜ್ಯಮಟ್ಟದ ಕಾರ್ಯಕ್ರಮ ನ.20ರಂದು ಬೆಳಗ್ಗೆ 10ಕ್ಕೆ ಮಂಗಳೂರಿನ ಕರಾವಳಿ ಉತ್ಸವ ಮೈದಾನದಲ್ಲಿ ನಡೆಯಲಿದೆ.

ಕುಟುಂಬ ಸದಸ್ಯರ ಜತೆ ಎಚ್‌ಡಿಕೆ ಧರ್ಮಸ್ಥಳಕ್ಕೆ ಭೇಟಿ



ಮುಂಬಯಿ, ನ.16: ಕೇಂದ್ರ ಕೈಗಾರಿಕಾ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಕುಟುಂಬ ಸಮೇತ ಸೋಮವಾರ ಶ್ರೀಕ್ಷೇತ್ರ ಧರ್ಮಸ್ಥಳ ಭೇಟಿ ನೀಡಿದ್ದರು. ಈ ವೇಳೆ ಉಜಿರೆಯಲ್ಲಿ ಎಚ್‌ಡಿಕೆ ಕುಟುಂಬದವರನ್ನು ಪೂರ್ಣಕುಂಭದೊಂದಿಗೆ ಭವ್ಯ ಮೆರವಣಿಗೆಯಲ್ಲಿ ಸ್ವಾಗತಿಸಲಾಯಿತು.

ಬಳಿಕ ಅವರು ಮಂಜುನಾಥನ ದರ್ಶನ ಪಡೆದು, ರಂಗಪೂಜೆ ಸೇವೆಯನ್ನು ಸಲ್ಲಿಸಿದರು. ಸಚಿವರ ಪತ್ನಿ ಅನಿತಾ ಕುಮಾರಸ್ವಾಮಿ, ಮಗ ನಿಖಿಲ್ ಮತ್ತು ಸೊಸೆ ರೇವತಿ ನಿಖಿಲ್ ಜೊತೆಗಿದ್ದರು. ವಿಧಾನಪರಿಷತ್ ಸದಸ್ಯ ಎಸ್.ಎಲ್. ಭೋಜೇಗೌಡ ಹಾಜರಿದ್ದರು. ಶ್ರೀಸನ್ನಿಧಿ ಅತಿಥಿಗೃಹದಲ್ಲಿ ತಂಗಿದ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತು ಕಟುಂಬದವರು ಮಂಗಳವಾರ ಸುಬ್ರಹ್ಮಣ್ಯಕ್ಕೆ ತೆರಳಲಿದ್ದಾರೆ..

ಗಂಗಾ ಆಗಿ ಬದಲಾದ ಕುಮಾರಕೃಪ: ಸಿಎಂ ಅಧಿಕೃತ ನಿವಾಸವಾಗಿ ರೂಪಾಂತರ

ಬೆಂಗಳೂರು, ನ.16: ಸರ್ಕಾರಿ ಅತಿಥಿಗೃಹ ಕುಮಾರಕೃಪವನ್ನು ಗಂಗಾ ಎಂದು ಮರುನಾಮಕರಣ ಮಾಡಿದ್ದು, ಅಧಿಕೃತ ನಿವಾಸವಾಗಿ ಪರಿವರ್ತಿಸಲಾಗಿದೆ. ಈ ಕಟ್ಟಡದ ಪರಂಪರೆಯನ್ನು ಉಳಿಸಿಕೊಂಡು ಶೇ.10ರಷ್ಟು ಮರುವಿನ್ಯಾಸ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಸರ್ಕಾರಿ ಅಧಿಕೃತ ನಿವಾಸ ಗಂಗಾ ಬಳಿ ಶಿವಕುಮಾರ್ ಸುದ್ದಿಗಾರರೊಂದಿಗೆ ಮಾತನಾಡಿ, ನಾನು ತೆಗೆದುಕೊಂಡಿದ್ದ ಸರ್ಕಾರಿ ನಿವಾಸ ಚಿಕ್ಕದಾಗಿತ್ತು, ಈ ಮಧ್ಯೆ ಕುಮಾರಕೃಪ ಅತಿಥಿ ಗೃಹ ಉಪಯೋಗವಾಗದ ಕಾರಣ ನಾನು ಇದನ್ನು ಅಧಿಕೃತ ನಿವಾಸವಾಗಿ ಪರಿವರ್ತಿಸಿ ಖಾಸಗಿ ಪೂಜೆ ನೆರವೇರಿಸಿದ್ದೇನೆ. ಗುರುವಾರ ರಾಜ್ಯದ 224 ಶಾಸಕರು, ರಾಜ್ಯದ ಸಂಸದರು, ವಿಧಾನ ಪರಿಷತ್ ಸದಸ್ಯರನ್ನು ಆಹ್ವಾನಿಸುವೆ. ಆ ನಂತರ ನಾನು ಈ ಮನೆಯಲ್ಲಿ ಎಲ್ಲರನ್ನು ಭೇಟಿ ಮಾಡುವೆ. ಈ ನಿವಾಸಕ್ಕೆ ಗಂಗಾ ಎಂದು ನಾಮಕರಣ ಮಾಡಿರುವೆ ಎಂದು ತಿಳಿಸಿದರು.

ಕೆಲವರು ಇದಕ್ಕೆ ಆಗಿರುವ ಖರ್ಚಿನ ಬಗ್ಗೆ



ಪ್ರಶ್ನೆ ಮಾಡಬಹುದು. ಭದ್ರತೆ ಹಾಗೂ ರಸ್ತೆ ಸೌಕರ್ಯಕ್ಕೆ ಹೆಚ್ಚು ವೆಚ್ಚವಾಗಿದೆ. ಉಳಿದಂತೆ 90% ಪೀಠೋಪಕರಣಗಳು ನನ್ನ ಖಾಸಗಿಯಾಗಿವೆ. ನಾನು ಕಡಿಮೆ (60– 80 ರೂ.) ಮೌಲ್ಯದ ಗ್ರಾನೈಟ್ ಕಲ್ಲನ್ನು ಬಳಸಿದ್ದೇನೆ. ವೆಚ್ಚದ ಬಗ್ಗೆ ಟೀಕೆ ಮಾಡುತ್ತಾರೆ ಎಂಬ ಕಾರಣಕ್ಕೇ ನಾನು ನನ್ನ ಮನೆ, ಕುಮಾರಕೃಪದಲ್ಲಿ ಇದ್ದ ಹಳೇ ಪೀಠೋಪಕರಣಗಳನ್ನೇ ಇಟ್ಟುಕೊಂಡಿದ್ದೇನೆ. ಕೆಲವರು ಆರ್‌ಟಿಐ ಹಾಕಿದ್ದಾರೆ ಎಂದರು. ಪಾರಂಪರಿಕ ಕಟ್ಟಡವನ್ನು ಬದಲಿಸಿದ್ದಾರೆ ಎಂದು ವಿರೋಧ ಪಕ್ಷಗಳು ಟೀಕೆ ಮಾಡಿದ್ದಾರೆ ಎಂದು ಕೇಳಿದಾಗ, ಅವರು ಇರುವುದೇ ಟೀಕೆ ಮಾಡಲು.

ಸಾರ್ವಜನಿಕರ ಭೇಟಿಗೆ ಪ್ರತ್ಯೇಕ ಹಾಲ್

ಸಾರ್ವಜನಿಕರ ಭೇಟಿಗೆ ಅವಕಾಶವಿದೆಯೇ ಎಂದು ಕೇಳಿದಾಗ, ಶಾಸಕರು, ಅಧಿಕಾರಿಗಳ ಭೇಟಿ, ಚರ್ಚೆಗೆ ಇಲ್ಲಿ ಅವಕಾಶ ಕಲ್ಪಿಸಲಾಗುವುದು, ಸಾರ್ವಜನಿಕ ಭೇಟಿಗೆ ಪಕ್ಕದ ಕೃಷ್ಣದಲ್ಲಿ, ಇಲ್ಲಿ ಸಾರ್ವಜನಿಕ ಭೇಟಿಗಾಗಿ ಪ್ರತ್ಯೇಕ ಹಾಲ್ ನಿರ್ಮಿಸಲಾಗುತ್ತಿದೆ. ಇದಕ್ಕೆ ಒಂದೆರಡು ತಿಂಗಳು ಕಾಲಾವಕಾಶ ಬೇಕಾಗುತ್ತದೆ. ನಾವು ಯಾರು ಇಲ್ಲಿ ಶಾಶ್ವತವಲ್ಲ. ರಾಜ್ಯದ ಮುಖ್ಯಮಂತ್ರಿಯಾದವರಿಗೆ ಇದು ಅನುಕೂಲವಾಗಲಿ, ಈ ಅತಿಥಿ ಗೃಹ ಜಾಗ ಉಪಯೋಗವಾಗಲಿ ವ್ಯರ್ಥವಾಗುವುದು ಬೇಡ ಎಂದು ಈ ತೀರ್ಮಾನಕ್ಕೆ ಬರಲಾಗಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

ಅದು ಅವರ ಕರ್ತವ್ಯ. ಅವರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸುವೆ ಅವರು ಬಂದು ನೋಡಲಿ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಶಾಸಕ ಹರೀಶ್ ಪೂಂಜಾ ವಿರುದ್ಧ ಕ್ರಮಕ್ಕೆ ಸಚಿವ ಮಧು ಬಂಗಾರಪ್ಪ ಸೂಚನೆ

ಬೆಂಗಳೂರು, ನ.16: ಜನಪ್ರತಿನಿಧಿಯಾಗಿ ಹೇಗೆ ಮಾತನಾಡಬೇಕು ಎಂಬ ಕನಿಷ್ಠ ಪರಿಜ್ಞಾನವೂ ಇಲ್ಲದೆ ಶಾಲಾ ಮಕ್ಕಳ ಮುಂದೆ ದ್ವೇಷಪೂರಿತ ಹಾಗೂ ಅಸಂವಿಧಾನಿಕ ಮಾತುಗಳನ್ನಾಡಿರುವುದು ಸರಿಯಲ್ಲ. ಮಕ್ಕಳಲ್ಲಿ ಕೆಟ್ಟ ವಿಚಾರಗಳನ್ನು ಬಿತ್ತುವುದೇ ಬಿಜೆಪಿ ನಾಯಕರ ಚಾಳಿಯಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಬಿಜೆಪಿ ಶಾಸಕ ಹರೀಶ್ ಪೂಂಜಾ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾ ಪುಂಜಾಲಕಟ್ಟೆಯ ಕರ್ನಾಟಕ ಪಬ್ಲಿಕ್ ಶಾಲೆ (ಕೆಪಿಎಸ್)ಯ ನೂತನ ಸಭಾಭವನ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡುತ್ತಾ, ಕಾಂಗ್ರೆಸ್ ಪಕ್ಷದ ಬಗ್ಗೆ ಅವಾಚ್ಯ ಶಬ್ದಗಳನ್ನು ಬಳಸಿದ್ದರಲ್ಲದೆ, ದ್ವೇಷದ ಭಾಷಣ ಮಾಡಿದ್ದರು. ಈ ಬಗ್ಗೆ ಸಚಿವ ಮಧು ಬಂಗಾರಪ್ಪ ತೀಕ್ಷ್ಣ ಪ್ರತಿಕ್ರಿಯೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರನ್ನು ಅವರ ಗೃಹ ಕಚೇರಿಯಲ್ಲಿ ಭೇಟಿಯಾದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಲಾ ಮಕ್ಕಳ ಮುಂದೆ ರಾಜಕೀಯ ಭಾಷಣ ಮಾಡಿದ ಶಾಸಕ ಹರೀಶ್ ಪೂಂಜಾ ವಿರುದ್ಧ ಕ್ರಮ ಕೈಗೊಳ್ಳುವಂತೆ ಈಗಾಗಲೇ ಇಲಾಖೆ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ತಿಳಿಸಿದರು.

ರಾಜಕಾರಣವನ್ನು ರಾಜಕೀಯ ವೇದಿಕೆಗಳಿಗೆ ಸೀಮಿತಗೊಳಿಸಬೇಕು. ಶಾಲೆಗಳಲ್ಲಿ ಈ ರೀತಿ ಮಾತನಾಡುವುದು ಸರಿಯಲ್ಲ. ಶಾಸಕರಿಗೆ ಕನಿಷ್ಠ ಸಾಮಾನ್ಯ ತಿಳುವಳಿಕೆ ಇರಬೇಕಲ್ಲವೇ. ಅವರ ಮನಸ್ಸಿನಲ್ಲಿ ವಿಷವಿದ್ದರೆ ಅದನ್ನೇ ಹೊರಹಾಕುತ್ತಾರೆ. ಈ ವಿಚಾರವನ್ನು ಸುಮ್ಮನೆ ಬಿಡುವುದಿಲ್ಲ. ಶಾಸಕರು ಏನು ಮಾತನಾಡಿದ್ದಾರೆ ಎಂಬ ಬಗ್ಗೆ ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದು, ವರದಿ ಆಧಾರದ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು. ಎಂದು ಮಧು ಬಂಗಾರಪ್ಪ ತಿಳಿಸಿದರು.

ಕಾರ್ಮಿಕರ ಕಲ್ಯಾಣಕ್ಕಾಗಿ ಮೀಸಲಿಟ್ಟಿದ್ದ 40 ಸಾವಿರ ಕೋಟಿ ಅನ್ಯ ಉದ್ದೇಶಕ್ಕೆ ಬಳಕೆ: ಎಚ್‌ಡಿಕೆ ಆರೋಪ

ಉಡುಪಿ, ನ.16: ರಾಜ್ಯ ಕಾಂಗ್ರೆಸ್ ಸರ್ಕಾರ ಅಭಿವೃದ್ಧಿಯನ್ನು ಬಿಟ್ಟು ವ್ಯಾಪಕ ಭ್ರಷ್ಟಾಚಾರದಲ್ಲಿ ನಿರತವಾಗಿದೆ. ಪ್ರತಿದಿನವೂ ಸರ್ಕಾರದ ಅಕ್ರಮಗಳ ಬಗ್ಗೆ ವರದಿಗಳು ಬರುತ್ತವೆ. ಜನರ ನಿರೀಕ್ಷೆಯನ್ನು ಸುಳ್ಳು ಮಾಡಿರುವುದರಿಂದ ಈ ಸರ್ಕಾರದ ವಿರುದ್ಧ ಈಗಾಗಲೇ ಜನ ವಿರೋಧಿ ಅಲೆ, ದೊಡ್ಡ ಮಟ್ಟದಲ್ಲಿ ಎದ್ದಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದರು.ಶ್ರೀಕ್ಷೇತ್ರ ಕೊಲ್ಲೂರಿನಲ್ಲಿ ಮೂಕಾಂಬಿಕೆ ದರ್ಶನ ಪಡೆದ ನಂತರ ಮಾಧ್ಯಮಗಳ ಜತೆ ಮಾತನಾಡಿದ ಅವರು, ಕೇವಲ ಗ್ಯಾರಂಟಿಗಳನ್ನು ಕೊಟ್ಟು ಅಭಿವೃದ್ಧಿ ಮಾಡಿದ್ದೇವೆ ಎಂದು ಜನರನ್ನು ದಿಕ್ಕು ತಪ್ಪಿಸುತ್ತಿದ್ದಾರೆ. ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ರಾಜ್ಯದ ಅಭಿವೃದ್ಧಿಯನ್ನು ಸಂಪೂರ್ಣವಾಗಿ ಕಡೆಗಣಿಸಲಾಗಿದೆ ಹಾಗೂ ಕೇಂದ್ರದ ಸರ್ಕಾರದ ಮೇಲೆ ವಿನಾಕಾರಣ ಗೂಬೆ ಕೂರಿಸಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.ಬರಗಾಲದ ನಿರ್ವಹಣೆ ಹಾಗೂ ರೈತರಿಗೆ ಪರಿಹಾರ ಒದಗಿಸುವ ವಿಚಾರದಲ್ಲಿ ಕೇಂದ್ರ ಸರ್ಕಾರದ ಬಗ್ಗೆ ರಾಜ್ಯ



ಸರ್ಕಾರ ದ್ವಂದ್ವ ನಿಲುವು ಹೊಂದಿದೆ. ಕೇಂದ್ರದ ಮುಂದೆ ಎನ್‌ಡಿಆರ್‌ಎಫ್ ನಿಯಮಗಳ ಅಡಿಯಲ್ಲಿ ಪರಿಹಾರದ ಬೇಡಿಕೆಯನ್ನು ರಾಜ್ಯ ಸರ್ಕಾರ ಸರಿಯಾದ ರೀತಿಯಲ್ಲಿ ಕೇಳುತ್ತಿಲ್ಲ. ಪದೇಪದೇ ಅಭಿಪ್ರಾಯ ಬದಲಿಸುತ್ತಿದೆ. ರೈತರು ಎಕರೆಗೆ 15,000–20,000 ರೂ. ಖರ್ಚು ಮಾಡಿದ್ದರೆ, ರಾಜ್ಯ ಸರ್ಕಾರ ಕೇವಲ 2,000 ರೂ. ಅಲ್ಪ ಪರಿಹಾರ ನೀಡಿ ಕೇಂದ್ರದತ್ತ ಬೊಟ್ಟು ಮಾಡುತ್ತಿದೆ. ಅಲ್ಲದೇ, ಕಾರ್ಮಿಕರ ಕಲ್ಯಾಣಕ್ಕಾಗಿ ಮೀಸಲಿಟ್ಟಿದ್ದ 40,000 ಕೋಟಿ ರೂ. ಸೆಸ್ ಹಣವನ್ನು ಬೇರೆ ಉದ್ದೇಶಗಳಿಗೆ ಬಳಸಲಾಗುತ್ತಿದೆ. ಇಷ್ಟು ಬೃಹತ್ ಮೊತ್ತದ ಹಣವನ್ನು ರಾಜ್ಯ ಸರ್ಕಾರ ಅನ್ಯ ಉದ್ದೇಶಕ್ಕೆ ಬಳಕೆ ಮಾಡುತ್ತಿದೆಯಾ ಅಥವಾ ಲೂಟಿ ಮಾಡಲಾಗುತ್ತಿದೆಯಾ ಎಂದು ಪ್ರಶ್ನಿಸಿದರು.

ಶಾಲೆಗಳ ಅಭಿವೃದ್ಧಿಗೂ ಸಾಲ, ಸಿಎಸ್‌ಆರ್ ನಿಧಿಯನ್ನು ಅವಲಂಬಿಸುವ ದುಸ್ಥಿತಿ

ಸರ್ಕಾರಿ ಶಾಲೆಗಳ ನಿರ್ವಹಣೆಗೂ ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕ್ ಸಾಲ ಹಾಗೂ ಸಿಎಸ್‌ಆರ್ ನಿಧಿಯನ್ನು ನೆಚ್ಚಿಕ

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ನವೆಂಬರ್ 17, 2026, ಮಂಗಳವಾರ

ಒಳಪುಟಗಳಲ್ಲಿ

ಇಂದಿನಿಂದ ಬೆಂಗಳೂರು ತಂತ್ರಜ್ಞಾನ ಶೃಂಗಸಭೆ: ಸಿಎಂ ಚಾಲನೆ- ಪು.4

ಮಧ್ಯಪ್ರಾಚ್ಯಕ್ಕೆ ಅಮೆರಿಕದ ಮೂರನೇ ವಿಮಾನವಾಹಕ ನೌಕೆ ಆಗಮನ- ಪು.8

ಕರ್ನಾಟಕ, ಮೇಘಾಲಯದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಗೆ ಆಯೋಗ ಆದೇಶ

ಎರಡೂ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಪತ್ರ

ನವದೆಹಲಿ, ನ.16: ಕರ್ನಾಟಕ ಮತ್ತು ಮೇಘಾಲಯ ರಾಜ್ಯಗಳಲ್ಲಿ 2027ರ ಜನವರಿ 1 ಅನ್ನು ಅರ್ಹತಾ ದಿನಾಂಕವಾಗಿ ಪರಿಗಣಿಸಿ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ (ಎಸ್ಎಸ್ಆರ್) ನಡೆಸುವಂತೆ ಕೇಂದ್ರ ಚುನಾವಣಾ ಆಯೋಗ ಆದೇಶಿಸಿದೆ.



ಈ ಸಂಬಂಧ ಎರಡೂ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಆಯೋಗ ಪತ್ರ ಬರೆದಿದ್ದು, ಅರ್ಹ ಮತದಾರರ ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ಮತದಾರರ ಪಟ್ಟಿಯಲ್ಲಿನ ಲೋಪಗಳನ್ನು ಸರಿಪಡಿಸಲು ಸೂಚಿಸಿದೆ. ಯುವ ಮತದಾರರು ಹಾಗೂ ಮೊದಲ ಬಾರಿಗೆ ಮತದಾನಕ್ಕೆ ಅರ್ಹರಾಗುವವರ ಹೆಸರು ನೋಂದಣಿಗೆ ವಿಶೇಷ ಆದ್ಯತೆ ನೀಡುವಂತೆ ತಿಳಿಸಿದೆ.

ಡಿ.1ರಂದು ಕರಡು ಪಟ್ಟಿ, ಜ.20ರಂದು ಅಂತಿಮಪಟ್ಟಿ ಪ್ರಕಟ

ಆಯೋಗ ಪ್ರಕಟಿಸಿರುವ ವೇಳಾಪಟ್ಟಿಯ ಪ್ರಕಾರ, ನವೆಂಬರ್ 23ರೊಳಗೆ ಮತಗಟ್ಟೆಗಳ ತರ್ಕಬದ್ಧ ಮರುಹೊಂದಾಣಿಕೆ ಕಾರ್ಯ ಪೂರ್ಣಗೊಳಿಸಬೇಕು. ಡಿಸೆಂಬರ್ 1ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗಲಿದ್ದು, ಅಂದಿನಿಂದ ಡಿಸೆಂಬರ್ 31ರವರೆಗೆ ಹೆಸರು ಸೇರ್ಪಡೆ, ತಿದ್ದುಪಡಿ ಮತ್ತು ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಸ್ವೀಕೃತ ಅರ್ಜಿಗಳು ಹಾಗೂ ಆಕ್ಷೇಪಣೆಗಳನ್ನು 2027ರ ಜನವರಿ 14ರೊಳಗೆ ವಿಲೇವಾರಿ ಮಾಡಬೇಕು. ಜನವರಿ 20ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ. ಇದಲ್ಲದೆ, 2027ರ ಏಪ್ರಿಲ್ 1, ಜುಲೈ 1 ಮತ್ತು ಅಕ್ಟೋಬರ್ 1ರ ಅರ್ಹತಾ ದಿನಾಂಕಗಳನ್ನು ಆಧರಿಸಿಯೂ ಮುಂಗಡ ಅರ್ಜಿಗಳನ್ನು ಸ್ವೀಕರಿಸಲು ಚುನಾವಣಾ ಆಯೋಗ ಅವಕಾಶ ನೀಡಿದೆ. ಈ ಅರ್ಜಿಗಳನ್ನು ಸಂಬಂಧಿತ ತ್ರೈಮಾಸಿಕ ಅವಧಿಯಲ್ಲಿ ವಿಲೇವಾರಿ ಮಾಡಲಾಗುತ್ತದೆ.

ಸಹಾಯಕೇಂದ್ರ ಸ್ಥಾಪನೆಗೂ ಸೂಚನೆ

ಮತದಾರರ ಅನುಕೂಲಕ್ಕಾಗಿ ಜಿಲ್ಲಾ ಮತ್ತು ವಿಧಾನಸಭಾ ಕ್ಷೇತ್ರಗಳ ಮಟ್ಟದಲ್ಲಿ ಸಹಾಯ ಕೇಂದ್ರಗಳನ್ನು ಸ್ಥಾಪಿಸುವಂತೆಯೂ ಆಯೋಗ ಸೂಚಿಸಿದೆ. ವಲಸೆ ಕಾರ್ಮಿಕರು, ನಿರಾಶ್ರಿತರು, ಮಹಿಳೆಯರು, ಹಿರಿಯ ನಾಗರಿಕರು, ಅಂಗವಿಕಲರು ಹಾಗೂ ದುರ್ಬಲ ವರ್ಗಗಳ ಮತದಾರರ ನೋಂದಣಿಗೆ ವಿಶೇಷ ಅಭಿಯಾನ ನಡೆಸುವಂತೆ ನಿರ್ದೇಶನ ನೀಡಿದೆ. ಮತದಾರರು ಆನ್ಲೈನ್ನಲ್ಲಿ ವೋಟರ್ ಸರ್ವಿಸ್ ಪೋರ್ಟಲ್ ಅಥವಾ ಇಸಿಐನೆಟ್ ಆಪ್ ಮೂಲಕವೂ ಅರ್ಜಿ ಸಲ್ಲಿಸಬಹುದಾಗಿದೆ.

ಹೆಸರು ಸೇರ್ಪಡೆ, ವಿಳಾಸ ಬದಲಾವಣೆ, ತಿದ್ದುಪಡಿಗೆ ಅವಕಾಶ

ಮತದಾರರ ಪಟ್ಟಿಗೆ ಹೊಸದಾಗಿ ಹೆಸರು ಸೇರ್ಪಡೆಗೊಳಿಸಲು ನಮೂನೆ–6, ಹೆಸರು ಸೇರ್ಪಡೆ ಅಥವಾ ಅಳಿಸುವಿಕೆಗೆ ಆಕ್ಷೇಪಣೆ ಸಲ್ಲಿಸಲು ನಮೂನೆ–7 ಹಾಗೂ ವಿಳಾಸ ಬದಲಾವಣೆ, ವಿವರಗಳ ತಿದ್ದುಪಡಿ ಮತ್ತು ಮತದಾರರ ಗುರುತಿನ ಚೀಟಿ ಬದಲಾವಣೆಗೆ ನಮೂನೆ–8 ಬಳಸುವಂತೆ ಸೂಚಿಸಲಾಗಿದೆ. ಆಧಾರ್ ಸಂಖ್ಯೆ ನೀಡುವುದು ಸ್ವಯಂಪ್ರೇರಿತವಾಗಿದ್ದು, ಆಧಾರ್ ನೀಡದ ಕಾರಣಕ್ಕೆ ಹೆಸರು ಸೇರ್ಪಡೆ ಅರ್ಜಿಯನ್ನು ತಿರಸ್ಕರಿಸುವಂತಿಲ್ಲ ಅಥವಾ ಪಟ್ಟಿಯಲ್ಲಿರುವ ಹೆಸರನ್ನು ಅಳಿಸುವಂತಿಲ್ಲ ಎಂದು ಸ್ಪಷ್ಟಪಡಿಸಿದೆ.ಮತದಾರರ ಪಟ್ಟಿಯಲ್ಲಿ ಮೃತಪಟ್ಟವರು, ಶಾಶ್ವತವಾಗಿ ಸ್ಥಳಾಂತರಗೊಂಡವರು ಹಾಗೂ ಒಂದಕ್ಕಿಂತ ಹೆಚ್ಚು ಬಾರಿ ನೋಂದಣಿಯಾದವರ ಹೆಸರುಗಳನ್ನು ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ಯಾವುದೇ ಅರ್ಹ ಮತದಾರರ ಹೆಸರು ಕೈಬಿಡದಂತೆ ಹಾಗೂ ಅನರ್ಹರ ಹೆಸರು ಸೇರ್ಪಡೆಯಾಗದಂತೆ ಎಚ್ಚರಿಕೆ ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ತಪ್ಪಾಗಿ ಹೆಸರು ಅಳಿಸುವುದನ್ನು ತಡೆಯಲು ವಿಶೇಷ ಪರಿಶೀಲನಾ ಕ್ರಮಗಳನ್ನೂ ಜಾರಿಗೊಳಿಸಲಾಗಿದೆ. ಒಂದು ಮತಗಟ್ಟೆಯ ಒಟ್ಟು ಮತದಾರರ ಪೈಕಿ ಶೇ.2ಕ್ಕಿಂತ ಹೆಚ್ಚು ಹೆಸರುಗಳನ್ನು ಅಳಿಸುವ ಪ್ರಸ್ತಾವನೆ ಇದ್ದರೆ ಅಥವಾ ಒಬ್ಬರೇ ಐದಕ್ಕಿಂತ ಹೆಚ್ಚು ಹೆಸರುಗಳ ಅಳಿಸುವಿಕೆಗೆ ಆಕ್ಷೇಪಣೆ ಸಲ್ಲಿಸಿದ್ದರೆ, ಸಂಬಂಧಪಟ್ಟ ಚುನಾವಣಾ ನೋಂದಣಾಧಿಕಾರಿ ಖುದ್ದಾಗಿ ಪರಿಶೀಲನೆ ನಡೆಸಬೇಕು.

5 ರಾಜ್ಯಗಳ ಚುನಾವಣೆಗೆ ಕಾಂಗ್ರೆಸ್ ನಿಂದ ಸ್ಕ್ರೀನಿಂಗ್ ಸಮಿತಿ ರಚನೆ


ಕೆ.ಜೆ. ಜಾರ್ಜ್


ಬಿ.ವಿ.ಶ್ರೀನಿವಾಸ್


ಬಿ.ಎಂ. ಸಂದೀಪ್


ನಿವೇದಿತ್ ಆಳ್ವ

ನವದೆಹಲಿ, ನ.16: ಮುಂಬರುವ ಐದು ರಾಜ್ಯಗಳವಿಧಾನಸಭೆಚುನಾವಣೆಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷವು ಉತ್ತರ ಪ್ರದೇಶ, ಪಂಜಾಬ್, ಉತ್ತರಾಖಂಡ, ಗೋವಾ ಮತ್ತು ಮಣಿಪುರ ರಾಜ್ಯಗಳಿಗೆ ಸ್ಕ್ರೀನಿಂಗ್ ಸಮಿತಿಗಳನ್ನು ರಚಿಸಿದೆ. ಕಾಂಗ್ರೆಸ್ ಅಧ್ಯಕ್ಷರ ಅನುಮೋದನೆಯೊಂದಿಗೆ ಸಮಿತಿಗಳನ್ನು ರಚಿಸಲಾಗಿದ್ದು, ತಕ್ಷಣದಿಂದಲೇ ಜಾರಿಗೆ ಬರಲಿವೆ. ಉತ್ತರ ಪ್ರದೇಶ ಸಮಿತಿ ಅಧ್ಯಕ್ಷರಾಗಿ ಅಜಯ್ ಮಾಕನ್ ಹಾಗೂ ಸದಸ್ಯರಾಗಿ ಬಿ.ವಿ. ಶ್ರೀನಿವಾಸ್ ನೇಮಕಗೊಂಡಿದ್ದಾರೆ. ಪಂಜಾಬ್ ಸಮಿತಿ ಅಧ್ಯಕ್ಷರಾಗಿ ಸಿರಿವೆಲ್ಲ ಪ್ರಸಾದ್ ಮತ್ತು ಸದಸ್ಯೆಯಾಗಿ ನಿವೇದಿತ್ ಆಳ್ವ ನೇಮಕವಾಗಿದ್ದಾರೆ. ಉತ್ತರಾಖಂಡ ಸಮಿತಿಗೆ ದೀಪಾ ದಾಸ್ ಮುನ್ಷಿ, ಗೋವಾ ಸಮಿತಿಗೆ ಕೆ.ಜೆ. ಜಾರ್ಜ್ ಹಾಗೂ ಮಣಿಪುರ ಸಮಿತಿಗೆ ಬಿ.ಎಂ. ಸಂದೀಪ್ ಅವರನ್ನು ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ.

ಲಷ್ಕರ್ ಕಮಾಂಡರ್ ಸೇರಿ ಇಬ್ಬರು ಉಗ್ರರ ಹತ್ಯೆ

ಶ್ರೀನಗರ, ನ.16: ಜಮ್ಮು–ಕಾಶ್ಮೀರದ ಕುಲ್ಗಾಂ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ನಡೆಸಿದ ಎನ್ಕೌಂಟರ್ನಲ್ಲಿ ಲಷ್ಕರ್–ಎ–ತೊಯ್ಬಾ ಸಂಘಟನೆಯ ಮೋಸ್ಟ್ ವಾಂಟೆಡ್ ಉಗ್ರ ಕಮಾಂಡರ್ ಲತೀಫ್ ಭಟ್ ಸೇರಿದಂತೆ ಇಬ್ಬರು ಉಗ್ರರು ಹತರಾಗಿದ್ದಾರೆ. ಕುಲ್ಗಾಂ ಜಿಲ್ಲೆಯ ಲರೂ ಪ್ರದೇಶದಲ್ಲಿ ಭದ್ರತಾ ಪಡೆಗಳು ಉಗ್ರರ ವಿರುದ್ಧ ಕಾರ್ಯಾಚರಣೆ ನಡೆಸಿದ್ದು, ಈ ವೇಳೆ ಗುಂಡಿನ ಚಕಮಕಿ ನಡೆದಿದೆ. ಕಾರ್ಯಾಚರಣೆಯಲ್ಲಿ ಲಷ್ಕರ್ ಕಮಾಂಡರ್ ಲತೀಫ್ ಭಟ್ ಹಾಗೂ ಮತ್ತೊಬ್ಬ ಉಗ್ರನನ್ನು ಹತ್ಯೆ ಮಾಡಲಾಗಿದೆ.ನವೆಂಬರ್ 11ರಂದು ಕುಲ್ಗಾಂನ ಮಿರ್ ಬಜಾರ್ ಸಮೀಪದ ಅಖ್ರಾನ್ ಪ್ರದೇಶದಲ್ಲಿ ಸಿಆರ್ಪಿಎಫ್ ಯೋಧರ ಮೇಲೆ ಉಗ್ರರು ದಾಳಿ ನಡೆಸಿದ್ದರು. ಈ ವೇಳೆ ಮೂವರು ಸಿಆರ್ಪಿಎಫ್ ಸಿಬ್ಬಂದಿ ಗುಂಡೇಟಿನಿಂದ ಗಾಯಗೊಂಡಿದ್ದರು. ದಾಳಿಯ ಬಳಿಕ ಉಗ್ರರ ಪತ್ತೆಗಾಗಿ ಭದ್ರತಾ ಪಡೆಗಳು ವ್ಯಾಪಕ ಶೋಧ ಕಾರ್ಯಾಚರಣೆ ಆರಂಭಿಸಿದ್ದವು. ಮತ್ತೊಬ್ಬ ಉಗ್ರನ ಗುರುತು ಹಾಗೂ ಕಾರ್ಯಾಚರಣೆಗೆ ಸಂಬಂಧಿಸಿದ ಹೆಚ್ಚಿನ ವಿವರಗಳು ಲಭ್ಯವಾಗಬೇಕಿದೆ.

ಬಿಲಾಂಗಿಂಗ್: ಎ ಜರ್ನಿ ಆಫ್ ಲವ್ ಕೃತಿ ಬಿಡುಗಡೆ





ನವದೆಹಲಿ, ನ.16: ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರ ಬಿಲಾಂಗಿಂಗ್: ಎ ಜರ್ನಿ ಆಫ್ ಲವ್ ಪುಸ್ತಕದ ಅಧಿಕೃತವಾಗಿ ಬಿಡುಗಡೆಯಾಗಿದೆ. ಈಗಾಗಲೇ ನವೆಂಬರ್ 10ರಂದು ಪುಸ್ತಕ ಮಾರುಕಟ್ಟೆಗೆ ಬಂದಿದ್ದರೂ, ದೆಹಲಿಯ ಖಾಗಿ ಹೋಟೆಲ್ನಲ್ಲಿ ಸೋಮವಾರ ನಡೆದ ಕಾರ್ಯಕ್ರಮದಲ್ಲಿ ಪುಸ್ತಕವನ್ನು ಅಧಿಕೃತವಾಗಿ ಬಿಡುಗಡೆ ಮಾಡಲಾಯಿತು.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ, ತಮಿಳುನಾಡು ಮುಖ್ಯಮಂತ್ರಿ ವಿಜಯ್, ಸಿಎಂ ಡಿಕೆ, ಸಿದ್ದರಾಮಯ್ಯ ಸೇರಿದಂತೆ ಹಲವು ರಾಜ್ಯಗಳ ಮುಖ್ಯಮಂತ್ರಿಗಳು, ಇಂಡಿಯಾ ಮೈತ್ರಿಕೂಟದ ನಾಯಕರು ಮತ್ತು ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಮನದಾಳದ ಮಾತುಗಳನ್ನು ಕೃತಿಗಿಳಿಸಿದ ಸೋನಿಯಾ ಗಾಂಧಿ

ಇದು ಸೋನಿಯಾ ಗಾಂಧಿ ಬರೆದ ಮೊದಲ ಪುಸ್ತಕವಾಗಿದೆ. ಇಟಲಿಯಿಂದ ಭಾರತಕ್ಕೆ ಬಂದ ತಮ್ಮ ಬದುಕು, ರಾಜೀವ್ ಗಾಂಧಿ ಅವರೊಂದಿಗಿನ ಪ್ರೀತಿ ಮತ್ತು ಕುಟುಂಬ ಜೀವನ, ರಾಜಕೀಯಕ್ಕೆ ಅನಿವಾರ್ಯವಾಗಿ ಬಂದ ಸಂದರ್ಭ, 2004ರಲ್ಲಿ ಪ್ರಧಾನಿ ಹುದ್ದೆಯನ್ನು ಏಕೆ ನಿರಾಕರಿಸಿದೆ, ಕ್ಯಾನ್ಸರ್ ವಿರುದ್ಧದ ಹೋರಾಟದಂತಹ ವೈಯಕ್ತಿಕ ಮತ್ತು ರಾಜಕೀಯ ಘಟನೆಗಳನ್ನು ಅವರು ಈ ಕೃತಿಯಲ್ಲಿ ತೆರೆದಿಟ್ಟಿದ್ದಾರೆ.

ತಮ್ಮ ಬಗ್ಗೆ ಬರೆಯಲಾದ ಅನೇಕ ವಿಷಯಗಳು ಸರಿಯಾಗಿರಲಿಲ್ಲ, ಅದಕ್ಕಾಗಿಯೇ ತಮ್ಮ ಕಥೆಯನ್ನು ತಾವೇ ಹೇಳಬೇಕೆಂದು ನಿರ್ಧರಿಸಿದೆ ಎಂದು ಈ ಸಂದರ್ಭದಲ್ಲಿ ಸೋನಿಯಾ ಗಾಂಧಿ ಹೇಳಿದ್ದಾರೆ.

ಈ ಪುಸ್ತಕದಲ್ಲಿ ತುರ್ತು ಪರಿಸ್ಥಿತಿಯನ್ನು ತಪ್ಪು ಎಂದು ಕರೆದಿರುವುದು, ಪ್ರಣಬ್ ಮುಖರ್ಜಿ ಅವರ ಪ್ರಧಾನಿ ಆಕಾಂಕ್ಷೆಯ ಬಗೆಗಿನ ಉಲ್ಲೇಖ ಸೇರಿ ಹಲವು ವಿಷಯಗಳು ಈಗಾಗಲೇ ಚರ್ಚೆಗೆ ಗ್ರಾಸವಾಗಿವೆ. ಬಿಜೆಪಿ ಈ ಪುಸ್ತಕವನ್ನು ವೈಟ್ವಾಷಿಂಗ್ ಎಂದು ಟೀಕಿಸಿದರೆ, ಕಾಂಗ್ರೆಸ್ ಇದನ್ನು ಪ್ರೀತಿ, ತ್ಯಾಗ ಮತ್ತು ಸೇರುವಿಕೆಯ ಕಥೆ ಎಂದು ಬಣ್ಣಿಸಿದೆ. ಪುಸ್ತಕ ಬಿಡುಗಡೆ ಕೇವಲ ಸಾಹಿತ್ಯಿಕ ಕಾರ್ಯಕ್ರಮವಾಗಿರದೆ, ವಿರೋಧ ಪಕ್ಷಗಳ ನಾಯಕರ ಒಟ್ಟುಗೂಡುವಿಕೆಯಿಂದಾಗಿ ರಾಜಕೀಯವಾಗಿಯೂ ಗಮನ ಸೆಳೆದಿದೆ.


ಆಸಿಯಾನ್ ಸಭೆಯಲ್ಲಿ ಭಾಗವಹಿಸಲು ಸೋಮವಾರ ಫಿಲಿಪ್ಪೀನ್ಸ್ಗೆ ಭೇಟಿ ನೀಡಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಮನಿಲಾದ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಗೌರವದ ಸ್ವಾಗತ ನೀಡಲಾಯಿತು.

ನಿರ್ದಿಷ್ಟ ಕ್ಷೇತ್ರವನ್ನು ಮೀಸಲಿಡುವ ಹಕ್ಕು ಯಾರಿಗೂ ಇಲ್ಲ

ನವದೆಹಲಿ, ನ.16: ಪರಿಶಿಷ್ಟ ಜಾತಿ (ಎಸ್ಸಿ) ಮತ್ತು ಪರಿಶಿಷ್ಟ ಪಂಗಡಗಳ (ಎಸ್ಟಿ) ಅಭ್ಯರ್ಥಿಗಳಿಗೆ ಯಾವುದೇ ನಿರ್ದಿಷ್ಟ ಕ್ಷೇತ್ರವನ್ನು ಮೀಸಲಿಡಬೇಕೆಂದು ಮತದಾರರು ಅಥವಾ ಅಭ್ಯರ್ಥಿಗಳು ಹಕ್ಕು ಮಂಡಿಸಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಮಹತ್ವದ ಅಭಿಪ್ರಾಯ ವ್ಯಕ್ತಪಡಿಸಿದೆ.

ಮಹಾರಾಷ್ಟ್ರದ ಜಿಲ್ಲಾ ಪಂಚಾಯಿತಿ ಮತ್ತು ಪಂಚಾಯಿತಿ ಸಮಿತಿ ಚುನಾವಣೆಗಳಲ್ಲಿ ಎಸ್ಸಿ, ಎಸ್ಟಿ ಮೀಸಲು ಕ್ಷೇತ್ರಗಳ ಆವರ್ತನ ಪದ್ಧತಿಯನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯನ್ನು ವಜಾಗೊಳಿಸುವ ಸಂದರ್ಭದಲ್ಲಿ ನ್ಯಾಯಮೂರ್ತಿಗಳಾದ ಸೂರ್ಯಕಾಂತ್, ಜಾಯ್ಮಲ್ಯ ಬಾಗ್ಚಿ ಮತ್ತು ವಿ. ಮೊಹನಾ ಅವರನ್ನೊಳಗೊಂಡ ಪೀಠ ಈ ಅಭಿಪ್ರಾಯ ತಿಳಿಸಿದೆ.

ಮೀಸಲು ಕ್ಷೇತ್ರಗಳ ಆವರ್ತನಕ್ಕೆ ಸಂಬಂಧಿಸಿದ 2025ರ ಮಹಾರಾಷ್ಟ್ರ ಜಿಲ್ಲಾ ಪಂಚಾಯಿತಿ ಮತ್ತು ಪಂಚಾಯಿತಿ ಸಮಿತಿ ನಿಯಮಗಳ 12ನೇ ನಿಯಮವನ್ನು ಪ್ರಶ್ನಿಸಿ ಅರ್ಜಿ ಸಲ್ಲಿಸಲಾಗಿತ್ತು. ಈ ನಿಯಮದಿಂದ ಮೀಸಲು ಕ್ಷೇತ್ರಗಳ ಆವರ್ತನ ಪ್ರಕ್ರಿಯೆಯ ಆರಂಭಿಕ ದಿನಾಂಕ ಬದಲಾಗಿದ್ದು, ಕೆಲವು ಕ್ಷೇತ್ರಗಳು ಎಂದಿಗೂ ಮೀಸಲಾತಿಗೆ ಒಳಪಡದ ಪರಿಸ್ಥಿತಿ ನಿರ್ಮಾಣವಾಗಬಹುದು ಎಂದು ಅರ್ಜಿದಾರರು ವಾದಿಸಿದ್ದರು.



ಮೀಸಲಾತಿ ಕ್ಷೇತ್ರಗಳ ಬದಲಾವಣೆ ಸರ್ಕಾರದ ವಿವೇಚನೆಗೆ ಬಿಟ್ಟ ವಿಚಾರ: ಸುಪ್ರೀಂ ಕೋರ್ಟ್

ವಾದ ಆಲಿಸಿದ ನ್ಯಾಯಮೂರ್ತಿ ಜಾಯ್ಮಲ್ಯ ಬಾಗ್ಚಿ, ಎಸ್ಸಿ ಮತ್ತು ಎಸ್ಟಿ ಜನಸಂಖ್ಯೆಯ ಪ್ರಮಾಣಕ್ಕೆ ಅನುಗುಣವಾಗಿ ಕ್ಷೇತ್ರಗಳನ್ನು ಮೀಸಲಿಡುವುದು ಕಾನೂನಿನ ಉದ್ದೇಶವಾಗಿದೆ. ಆದರೆ ನಿರ್ದಿಷ್ಟ ಕ್ಷೇತ್ರವೊಂದನ್ನೇ ಮೀಸಲಿಡಬೇಕು ಎಂದು ಯಾವುದೇ ಮತದಾರ ಅಥವಾ ಅಭ್ಯರ್ಥಿ ಹಕ್ಕು ಮಂಡಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು.

ಮೀಸಲು ಕ್ಷೇತ್ರಗಳ ಆವರ್ತನವನ್ನು ಎಸ್ಸಿ ಮತ್ತು ಎಸ್ಟಿ ಜನಸಂಖ್ಯೆಯ ಪ್ರಮಾಣಕ್ಕೆ ಅನುಗುಣವಾಗಿ ನಿರ್ಧರಿಸುವ ವ್ಯವಸ್ಥೆಯಿದೆ. ಆದರೆ ಆವರ್ತನವನ್ನು ಯಾವ ರೀತಿಯಲ್ಲಿ ಮತ್ತು ಯಾವ ಕಾಲಮಿತಿಯಲ್ಲಿ ಜಾರಿಗೊಳಿಸಬೇಕು ಎಂಬುದು ಸರ್ಕಾರದ ವಿವೇಚನೆಗೆ ಒಳಪಟ್ಟಿರುತ್ತದೆ ಎಂದು ಪೀಠ ಹೇಳಿದೆ.

2025ರ ತಿದ್ದುಪಡಿಯ ನಂತರ ನಡೆಯುವ ಮುಂದಿನ ಸಾರ್ವತ್ರಿಕ ಚುನಾವಣೆಯನ್ನು ಮೀಸಲು ಕ್ಷೇತ್ರಗಳ ಆವರ್ತನಕ್ಕೆ ಆರಂಭಿಕ ಹಂತವಾಗಿ ಪರಿಗಣಿಸುವ ನಿಯಮದಲ್ಲಿ ತಪ್ಪಿಲ್ಲ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿತು.

ಮೀಸಲಾತಿ ಅಥವಾ ಕ್ಷೇತ್ರಗಳ ಆವರ್ತನದ ಪರಿಕಲ್ಪನೆಗೆ ಈ ನಿಯಮ ವಿರುದ್ಧವಾಗಿದೆ ಎಂದು ಹೇಳಲು ಯಾವುದೇ ಕಾರಣವಿಲ್ಲ ಎಂದು ತಿಳಿಸಿದ ಸುಪ್ರೀಂಕೋರ್ಟ್, ಅರ್ಜಿಯನ್ನು ವಜಾಗೊಳಿಸಿತು.

ಎಸ್ಐಆರ್ ಅಕ್ರಮ: ಸುಪ್ರೀಂಕೋರ್ಟ್ ಮೊರೆಹೋದ ಇಂಡಿಯಾ ಒಕ್ಕೂಟ

ನವದೆಹಲಿ, ನ.16: ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿನ ಅಕ್ರಮಗಳ ಆರೋಪಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸೇರಿ ಪ್ರತಿಪಕ್ಷ ನಾಯಕರು ಸುಪ್ರೀಂಕೋರ್ಟ್ ಮೊರೆ ಹೋಗಿದ್ದಾರೆ. ಚುನಾವಣಾ ಆಯೋಗಕ್ಕೆ 48 ಪ್ರಶ್ನೆಗಳನ್ನು (ಇಂಟರೊಗೇಟರೀಸ್) ಕೇಳಲು ಅನುಮತಿ ನೀಡುವಂತೆ ಅರ್ಜಿ ಸಲ್ಲಿಸಿದ್ದಾರೆ.



ಚುನಾವಣಾ ಆಯೋಗಕ್ಕೆ 48 ಪ್ರಶ್ನೆಗಳನ್ನು ಉತ್ತರಿಸುವಂತೆ ಕೋರಲು ಅರ್ಜಿ ಸಲ್ಲಿಕೆ

ಚುನಾವಣಾ ಆಯೋಗದ ಪ್ರತಿ ಅಫಿಡವಿಟ್ ಸಲ್ಲಿಕೆಗೆ ಆಯುಕ್ತರು ಅನುಮೋದನೆ ನೀಡಿದ ದಿನಾಂಕ, ಎಸ್ಐಆರ್ ಆದೇಶಗಳಿಗೆ ಅನುಮೋದನೆ ನೀಡಿದ ದಿನಾಂಕ ಹಾಗೂ ಆಯುಕ್ತರಾದ ಸುಖ್ಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಎಸ್ಐಆರ್ ವಿಚಾರದಲ್ಲಿ ಎಷ್ಟು ಬಾರಿ ಆಕ್ಷೇಪ ಅಥವಾ ಭಿನ್ನಾಭಿಪ್ರಾಯ ದಾಖಲಿಸಿದ್ದಾರೆ ಎಂಬ ಮಾಹಿತಿ ಕೋರಲಾಗಿದೆ.

ಬಹುಮತದ ಆಧಾರದಲ್ಲಿ ಕೈಗೊಂಡ ನಿರ್ಧಾರಗಳು ಮತ್ತು ಭಿನ್ನಾಭಿಪ್ರಾಯ ವ್ಯಕ್ತಪಡಿಸಿದ ಸದಸ್ಯರ ವಿವರ, ಪಶ್ಚಿಮ ಬಂಗಾಳದಲ್ಲಿ ಮೇಲ್ಮನವಿ ನ್ಯಾಯಮಂಡಳಿಗಳಿಗೆ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಹಾಗೂ ಇಸಿಐನೆಟ್ ವ್ಯವಸ್ಥೆಯ ವಿನ್ಯಾಸ, ತಾಂತ್ರಿಕ ರಚನೆ ಮತ್ತು ಅನುಷ್ಠಾನಕ್ಕೆ ಅನುಮೋದನೆ ನೀಡಿದ ನಿರ್ಧಾರಗಳ ವಿವರಗಳನ್ನೂ ಪ್ರಶ್ನೆಗಳ ಮೂಲಕ ಕೇಳಲು ಪ್ರತಿಪಕ್ಷ ನಾಯಕರು ಬಯಸಿದ್ದಾರೆ.

ಕೆ.ಎಸ್ ಈಶ್ವರಪ್ಪ ವಿರುದ್ಧ ಅಕ್ರಮ ಆಸ್ತಿ ಗಳಿಕೆ ಪ್ರಕರಣ

ಲೋಕಾಯುಕ್ತಕ್ಕೆ ಸುಪ್ರೀಂ ನೋಟಿಸ್



ನವದೆಹಲಿ, ನ.16: ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ವಿರುದ್ಧದ ಅಕ್ರಮ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಲೋ

ಇಂದಿನಿಂದ ಬೆಂಗಳೂರು ತಂತ್ರಜ್ಞಾನ ಶೃಂಗಸಭೆ: ಸಿಎಂ ಚಾಲನೆ

ಬೆಂಗಳೂರು, ನ.16: ಈ ವರ್ಷದ ಟೆಕ್ ಶೃಂಗಸಭೆಯು ನ. 17, 18 ಮತ್ತು 19 ರಂದು ಬೆಂಗಳೂರು ಅಂತರರಾಷ್ಟ್ರೀಯ ಪ್ರದರ್ಶನ ಕೇಂದ್ರ (ಬಿಐಇಸಿ) ದಲ್ಲಿ ನಡೆಯಲಿದೆ. "ಎಐ ಅಂಡ್ ಬಿಯಾಂಡ್" ಎಂಬ ಥೀಮ್ ನೊಂದಿಗೆ ನಡೆಯಲಿರುವ ಈ ಸಮ್ಮಿಟ್‌ನಲ್ಲಿ 10 ಸಾವಿರ ಪ್ರತಿನಿಧಿಗಳು ನೋಂದಾಯಿಸಿಕೊಂಡಿದ್ದು, 50 ಸಾವಿರಕ್ಕೂ ಹೆಚ್ಚು ಮಂದಿ ಆಗಮಿಸುವ ನಿರೀಕ್ಷೆ ಇದೆ. ಇಂದು ರಾಜ್ಯದ ಗೃಹ ಹಾಗೂ ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು

ವಿಕಾಸಸೌಧದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಗೃಹ ಹಾಗೂ ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು, ಬೆಂಗಳೂರು ಟೆಕ್ ಸಮ್ಮಿಟ್ 2026 ಕುರಿತು ವಿವರಣೆ ನೀಡಿ ಪ್ರತಿ ವರ್ಷ ನವೆಂಬರ್ ತಿಂಗಳಲ್ಲಿ ವಿಶ್ವಮಟ್ಟದ ಶೃಂಗಸಭೆಯನ್ನು ಆಯೋಜಿಸಲಾಗುತ್ತಿದ್ದು, ಕಳೆದ ಕೆಲವು ವರ್ಷಗಳಿಂದ ಇದು ಏಷ್ಯಾದ ಅತಿದೊಡ್ಡ ಶೃಂಗಸಭೆಯಾಗಿ ಬೆಳೆದು ನಿಂತಿದೆ ಎಂದು ಅವರು ತಿಳಿಸಿದರು.



ಇಂದು (ನ.17) ಬೆಳಿಗ್ಗೆ 9 ಗಂಟೆಗೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಈ ಟೆಕ್ ಶೃಂಗಸಭೆಯನ್ನು ಉದ್ಘಾಟಿಸಲಿದ್ದಾರೆ. ಸಮಾರಂಭದಲ್ಲಿ ಹಲವು ಗಣ್ಯರು ಉಪಸ್ಥಿತರಿರುತ್ತಾರೆ. ಒಟ್ಟು 65 ದೇಶಗಳು ಈ ಶೃಂಗಸಭೆಯಲ್ಲಿ ಭಾಗವಹಿಸುತ್ತಿವೆ ಎಂದು ಸಚಿವರು ಮಾಹಿತಿ ನೀಡಿದರು.

ನವೋದ್ಯಮಗಳಿಗೆ ಬೆಂಬಲ:

ರಾಜ್ಯದಲ್ಲಿ ನವದ್ಯೋಮಗಳಿಗೆ ಹೆಚ್ಚಿನ ಬೆಂಬಲ ನೀಡಲಾಗುತ್ತಿದ್ದು ಸ್ಟಾರ್ಟಪ್‌ಗಳಿಗೆ 50 ಲಕ್ಷ ರೂಪಾಯಿಗಳವರೆಗೆ ಸಾಲ ನೀಡಲಾಗುವುದು ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದರು. ರಾಜ್ಯದಲ್ಲಿ ಈಗಾಗಲೇ 1500 ಸ್ಟಾರ್ಟಪ್‌ಗಳು ಸ್ಥಾಪನೆಯಾಗಿವೆ. ಇಡೀ ದೇಶದಲ್ಲಿಯೇ ಬೇರೆಲ್ಲೂ ಇಷ್ಟು ಸಂಖ್ಯೆಯ ಸ್ಟಾರ್ಟಪ್‌ಗಳಿಲ್ಲ ಎಂದು ಹೆಮ್ಮೆ ವ್ಯಕ್ತಪಡಿಸಿದರು. ಜಸ್ಟ್ ಪೇ ಸಂಸ್ಥೆಗೆ ಸನ್ಮಾನ ಮಾಡಲು ನಿರ್ಧರಿಸಲಾಗಿದೆ ಎಂದೂ ತಿಳಿಸಿದರು. ಹಾಗೆಯೇ, ಕೃತಕ ಬುದ್ಧಿಮತ್ತೆ (ಆರ್ಟಿಫಿಶಿಯಲ್ ಇಂಟೆಲಿಜೆನ್ಸ್) ಸ್ಪರ್ಧೆಗೆ ಬಹುಮಾನವೂ ಇರಲಿದೆ ಎಂದರು.

ಸಮ್ಮಿಟ್‌ನ ವಿಶೇಷಗಳು

- *00 ಗಣ್ಯರು ಭಾಗಿ
- 40 ನಾಲೆಡ್ಜ್ ಸೆಷನ್‌ಗಳ ಆಯೋಜನೆ
- 1000ಕ್ಕೂ ಹೆಚ್ಚು ನವೋದ್ಯಮಗಳು (ಸ್ಟಾರ್ಟ್‌ಅಪ್) ನೋಂದಣಿ
- 175 ವಿದೇಶಿ ಪ್ರದರ್ಶಕರು ಭಾಗಿ
- ದೇಶದ ಅತಿದೊಡ್ಡ ಎಐ ಗ್ಯಾಲರಿ ಸ್ಥಾಪನೆ, ಎಐ ಬಗ್ಗೆ ಭೌತಿಕವಾಗಿ ಪ್ರಾತ್ಯಕ್ಷಿಕೆ
- ಡೀಪ್ ಟೆಕ್ ತಂತ್ರಜ್ಞಾನ ಮೇಲೆ ಹೆಚ್ಚಿನ ಗಮನ

ಜಿಪಂ, ತಾಪಂ ಚುನಾವಣೆಯಲ್ಲೂ ಬಿಜೆಪಿಗೆ ಗೆಲುವು: ಅಶೋಕ್ ವಿಶ್ವಾಸ

ಬೆಂಗಳೂರು, ನ.16: ಮುಂಬರುವ ಜಿಲ್ಲಾ ಪಂಚಾಯಿತಿ ಹಾಗೂ ಜಿಬಿಎ ಚುನಾವಣೆಯಲ್ಲಿಯೂ ಬಿಜೆಪಿಗೆ ಗೆಲುವು ಸಿಗಲಿದೆ. ಮುಂದಿನ ಎಲ್ಲಾ ಚುನಾವಣೆಗಳಲ್ಲೂ ಬಿಜೆಪಿಗೆ ಉತ್ತಮ ಫಲಿತಾಂಶ ಸಿಗುತ್ತದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ವಿಶ್ವಾಸ ವ್ಯಕ್ತಪಡಿಸಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿರಿಯೂರು ಉಪಚುನಾವಣೆ ಟಿಕೆಟ್ ಹಂಚಿಕೆ ವಿಚಾರವಾಗಿಯೂ ಆರ್. ಅಶೋಕ್ ಪ್ರತಿಕ್ರಿಯಿಸಿದರು. ಜೆಡಿಎಸ್‌ನವರಿಗೆ ಟಿಕೆಟ್ ಕೇಳುವ ಅಧಿಕಾರವಿರುವಂತೆ ಬಿಜೆಪಿಗೂ ಟಿಕೆಟ್ ಕೇಳುವ ಅಧಿಕಾರವಿದೆ. ಬಿಜೆಪಿ ಈಗಾಗಲೇ ಹಿರಿಯೂರು ಕ್ಷೇತ್ರವನ್ನು ಗೆದ್ದಿದೆ. ಆದರೆ ಟಿಕೆಟ್‌ಗಾಗಿ ಎರಡೂ ಪಕ್ಷಗಳು ಹೊಡೆದಾಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಒಂದು ರೂಂನಲ್ಲಿ ಕೂತು ಚರ್ಚೆ ಮಾಡುತ್ತೇವೆ. ನಾವು ಟಿಕೆಟ್ ಕೇಳುತ್ತಿರುವುದು ನಿಜ. ನಮ್ಮ ಮಿತ್ರ ಪಕ್ಷವನ್ನು ಮನವೊಲಿಸುತ್ತೇವೆ. ಟಿಕೆಟ್‌ಗಾಗಿ ಹೊಡೆದಾಟ ಮಾಡುವುದಿಲ್ಲ, ಇದನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡಿಲ್ಲ. ಹಿರಿಯೂರು ಕ್ಷೇತ್ರದ ಕಳೆದ 15 ವರ್ಷಗಳ ಸಮೀಕ್ಷೆ ಮಾಡೋಣ. ಯಾವ ಪಕ್ಷಕ್ಕೆ ಎಷ್ಟು ಮತ ಬಂದಿದೆ ಎಂಬುದನ್ನು ನೋಡೋಣ. ಅಂತಿಮವಾಗಿ ಹೈಕಮಾಂಡ್ ತೀರ್ಮಾನ ಮಾಡಲಿದೆ ಎಂದರು. ನಾವು ಹಠ ಹಿಡಿಯಲ್ಲ, ಚಂಡಿ ಹಿಡಿಯಲ್ಲ. ಸಮನ್ವಯ ಸಮಿತಿ ಶೀಘ್ರದಲ್ಲೇ ರಚನೆಯಾಗಲಿದೆ. ಸಮನ್ವಯ ಸಮಿತಿಯಲ್ಲಿ ಜೆಡಿಎಸ್‌ನಿಂದ ಯಾರಿರಬೇಕು ಎಂಬ ಲಿಸ್ಟ್ ಕೇಳಿದ್ದೇವೆ. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಒಟ್ಟಾಗಿ ಹೋರಾಟ ಮಾಡುತ್ತೇವೆ ಎಂದು ಅಶೋಕ್ ಹೇಳಿದರು.

ನೂತನ ವಿಧಾನ ಪರಿಷತ್ ಸದಸ್ಯರ ಪ್ರಮಾಣ ವಚನ ಸ್ವೀಕಾರದ ವಿಚಾರವಾಗಿ ಮಾತನಾಡಿದ ಅವರು, ಪರಿಷತ್ ಚುನಾವಣೆಯ ಫಲಿತಾಂಶವನ್ನು ಬಿಜೆಪಿ ಪಾಲಿನ ದಿಗ್ವಿಜಯ ಎಂದು ಬಣ್ಣಿಸಿದರು. ಯಾವುದೇ ಚುನಾವಣೆ ನಡೆದರೂ ಆಡಳಿತ ಪಕ್ಷ ಕನಿಷ್ಠ ಒಂದು ಸ್ಥಾನವನ್ನಾ ದರೂ ಗೆಲ್ಲಬೇಕಿತ್ತು. ಆದರೆ ನಮಗೆ ನಾಲ್ಕು ಸ್ಥಾನಗಳಲ್ಲಿ ಗೆಲುವಾಗಿದೆ. ಈಗ ಮುಖ್ಯಮಂತ್ರಿ ಹಾಗೂ ಮಾಜಿ ಮುಖ್ಯಮಂತ್ರಿ ಇಬ್ಬರೂ ದೆಹಲಿಗೆ ಹೋಗುತ್ತಿದ್ದಾರೆ. ಜೀರೋ ಮಾರ್ಕ್ಸ್ ತೆಗೆದುಕೊಂಡು ದೆಹಲಿಗೆ ಹೋಗುತ್ತಿದ್ದಾರೆ. ಅಲ್ಲಿ ಅವರ ಪೋಷಕರಿಂದ ಕಪಾಳಮೋಕ್ಷ ಆಗುತ್ತದೆ ಎಂದು ವ್ಯಂಗ್ಯವಾಡಿದರು.

ಕರ್ನಾಟಕ ಬಿಜೆಪಿಯಲ್ಲಿ ಭಾರಿ ಬದಲಾವಣೆ ಸಾಧ್ಯತೆ

ಬೆಂಗಳೂರು, ನ.16: ರಾಜ್ಯ ಬಿಜೆಪಿ ಘಟಕದಲ್ಲಿ ಶೀಘ್ರದಲ್ಲೇ ದೊಡ್ಡಮಟ್ಟದ ಬದಲಾವಣೆಯಾಗುವ ಸಾಧ್ಯತೆ ದಟ್ಟವಾಗಿದೆ. ಪಕ್ಷ ಸಂಘಟನೆಗೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ಬಿಜೆಪಿ ಹೈಕಮಾಂಡ್ ಮುಂದಾಗಿದ್ದು, ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿಗಳು, ಉಪಾಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ವಿವಿಧ ಮೋರ್ಚಾಗಳ ಅಧ್ಯಕ್ಷರ ಹಂತದಲ್ಲಿ ಮಹತ್ವದ ಬದಲಾವಣೆ ಮಾಡಲು ಸಿದ್ಧತೆ ನಡೆಸಿದೆ.ಪ್ರಮುಖವಾಗಿ ಪ್ರಧಾನ ಕಾರ್ಯದರ್ಶಿಗಳ ಪೈಕಿ ಎರಡರಿಂದ ಮೂರು ಸ್ಥಾನಗಳಲ್ಲಿ ಬದಲಾವಣೆಯಾಗಲಿದ್ದು, ಮಹಿಳಾ ಮೋರ್ಚಾ ಮತ್ತು ಯುವಮೋರ್ಚಾ ಸೇರಿದಂತೆ ಹಲವು ಮೋರ್ಚಾಗಳಿಗೆ ಹೊಸ ಅಧ್ಯಕ್ಷರನ್ನು ನೇಮಿಸುವ ಸಾಧ್ಯತೆಯಿದೆ.

ರಾಜ್ಯದಲ್ಲಿ ಕೆಲವು ಮೋರ್ಚಾಗಳು ನಿರೀಕ್ಷಿತ ಮಟ್ಟದಲ್ಲಿ ಸಕ್ರಿಯವಾಗಿಲ್ಲ ಎಂಬ ಮಾಹಿತಿ ಹೈಕಮಾಂಡ್‌ಗೆ ತಲುಪಿದೆ. ಈ ಕುರಿತು ರಾಜ್ಯ ಬಿಜೆಪಿ ಉಸ್ತುವಾರಿ ಹರೀಶ್ ದ್ವಿವೇದಿ ಅವರು ಈಗಾಗಲೇ ಸಮಗ್ರ ಮಾಹಿತಿ ಪಡೆದುಕೊಂಡಿದ್ದು, ರಾಜ್ಯ ಘಟಕದಲ್ಲಿ ಬದಲಾವಣೆ ತರುವ ಕುರಿತು ಸ್ಪಷ್ಟ ಸೂಚನೆ ನೀಡಿದ್ದಾರೆ. ಅಲ್ಲದೆ, ಸದ್ಯ ಖಾಲಿ ಇರುವ ಸಂಘಟನಾ ಪ್ರಧಾನ ಕಾರ್ಯದರ್ಶಿ ಹುದ್ದೆಯನ್ನೂ ಸಹ ಶೀಘ್ರದಲ್ಲೇ ಭರ್ತಿ ಮಾಡುವ ಸಾಧ್ಯತೆಯಿದೆ.

ಈ ಬೆಳವಣಿಗೆಗಳ ಬೆನ್ನಲ್ಲೇ ರಾಜ್ಯದ 7 ರಿಂದ 8 ಪ್ರಮುಖ ನಾಯಕರನ್ನು ದೆಹಲಿಗೆ ಕರೆಸಿಕೊಂಡಿರುವ ಬಿಜೆಪಿ ವರಿಷ್ಠರು, ಪದಾಧಿಕಾರಿಗಳ ಬದಲಾವಣೆ ಕುರಿತು ಮಹತ್ವದ ಸಮಾಲೋಚನೆ ನಡೆಸಿದ್ದಾರೆ ಎಂದು ತಿಳಿದುಬಂದಿದೆ.

ನ.10ರ ಅಂತ್ಯದ ವೇಳೆಗೆ ನೂತನ ಪದಾಧಿಕಾರಿಗಳ ಪಟ್ಟಿ ಘೋಷಣೆಯಾಗುವ ನಿರೀಕ್ಷೆಯಿತ್ತು; ಆದರೆ& ಕೆಲವು ಕಾರಣಗಳಿಂದ ವಿಳಂಬವಾಗಿದ್ದು, ಇದೀಗ ಯಾವುದೇ ಕ್ಷಣದಲ್ಲಾದರೂ ಅಧಿಕೃತ ಘೋಷಣೆ ಹೊರಬೀಳುವ ನಿರೀಕ್ಷೆಯಿದೆ.

ಡೀಮ್ಡ್ ಫಾರೆಸ್ಟ್ ವ್ಯಾಪ್ತಿಯ ರೈತರ ಗೊಂದಲ ನಿವಾರಣೆಗೆ ಜಂಟಿ ಸರ್ವೇ

ಮಂಗಳೂರು, ನ.16: ರಾಜ್ಯದ ಡೀಮ್ಡ್ ಫಾರೆಸ್ಟ್ ವ್ಯಾಪ್ತಿಯಲ್ಲಿ ವಾಸವಿರುವ ಸಾರ್ವಜನಿಕರು ಹಾಗೂ ರೈತರ ಗೊಂದಲ ನಿವಾರಿಸಲು ಕಂದಾಯ ಮತ್ತು ಅರಣ್ಯ ಇಲಾಖೆಗಳ ಜಂಟಿ ಸರ್ವೇ ಕಾರ್ಯ ನಡೆಯುತ್ತಿದ್ದು, ಮುಂದಿನ ಮೂರು ತಿಂಗಳೊಳಗೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಈ ಸಮೀಕ್ಷೆ ಪೂರ್ಣಗೊಳ್ಳಲಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ರಾಮಲಿಂಗಾರೆಡ್ಡಿ ಸ್ಪಷ್ಟಪಡಿಸಿದ್ದಾರೆ.

ಮಂಗಳೂರಿನ ಪಿಲಿಕುಳ ನಿಸರ್ಗಧಾಮದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಂಟಿ ಸರ್ವೇ ವರದಿ ಸಲ್ಲಿಕೆಯಾದ ಬಳಿಕ ಅರಣ್ಯ ಇಲಾಖೆಗೆ ಸೇರಬೇಕಾದ ಭೂಮಿ ಯಾವುದು ಮತ್ತು ಕಂದಾಯ ಇಲಾಖೆ ಅಥವಾ ಸಾರ್ವಜನಿಕರ ಬಳಕೆಗೆ ಬಿಡಬೇಕಾದ ಜಾಗ ಯಾವುದು ಎಂಬ ಸ್ಪಷ್ಟ ಚಿತ್ರಣ ದೊರೆಯಲಿದೆ. ಸರ್ವೇ ಮುಗಿದ ಬಳಿಕ ಅಲ್ಲಿನ ನಿವಾಸಿಗಳು ಮತ್ತು ರೈತರಿಗೆ



ಯಾವುದೇ ತೊಂದರೆಯಾಗದಂತೆ ಕಾನೂನು ಚೌಕಟ್ಟಿನಲ್ಲಿ ಸೂಕ್ತ ಪರಿಹಾರ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಕಸ್ತೂರಿರಂಗನ್ ವರದಿ ಜಾರಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ಪ್ರಸ್ತಾವನೆಯನ್ನು ರಾಜ್ಯ ಸರ್ಕಾರ ಈಗಾಗಲೇ ಆರು ಬಾರಿ ತಿರಸ್ಕರಿಸಿದ್ದು, ಇದೀಗ 7ನೇ ಬಾರಿಗೆ ಬಂದಿರುವ ಪ್ರಸ್ತಾವನೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ವೈಜ್ಞಾನಿಕ ಹಾಗೂ ನಿಖರವಾದ ಭೌತಿಕ ಸಮೀಕ್ಷೆ ನಡೆಸಲು ತೀರ್ಮಾನಿಸಲಾಗಿದೆ ಎಂದು ಸಚಿವರು ತಿಳಿಸಿದರು. ಹಿಂದಿನ ಸರ್ಕಾರಗಳ ಅವಧಿಯಲ್ಲಿ ನಡೆಸಿದ ಸಮೀಕ್ಷಾ ವರದಿಗಳನ್ನು ಕೇಂದ್ರಕ್ಕೆ ಸಮರ್ಪಕವಾಗಿ ಸಲ್ಲಿಸಿರಲಿಲ್ಲ. ಆ ಲೋಪಗಳನ್ನು ಸರಿಪಡಿಸಿ ಈ ಬಾರಿ ಅತ್ಯಂತ ಪಾರದರ್ಶಕವಾಗಿ ಸಮೀಕ್ಷೆ ನಡೆಸಲು ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿ ಹಾಗೂ ರಾಜ್ಯ ಮಟ್ಟದಲ್ಲಿ ನಿವೃತ್ತ ನ್ಯಾಯಾಧೀಶರು ಅಥವಾ ತಾಂತ್ರಿಕ ಮತ್ತು ಪರಿಸರ ತಜ್ಞರನ್ನೊಳಗೊಂಡ ಉನ್ನತ ಮಟ್ಟದ ಮೇಲ್ವಿಚಾರಣಾ ಸಮಿತಿ ರಚಿಸಲಾಗುವುದು. ಈ ಕಡತವನ್ನು ಅನುಮೋದನೆಗಾಗಿ ಮುಖ್ಯಮಂತ್ರಿಗಳಿಗೆ ಕಳುಹಿಸಲಾಗಿದೆ ಎಂದು ತಿಳಿಸಿದರು.

೩೩೯ ಎಕರೆ ವಿಜ್ಞಾನ, ತಂತ್ರಜ್ಞಾನ ಇಲಾಖೆಗೆ ಹಸ್ತಾಂತರ

ಪಿಲಿಕುಳ ನಿಸರ್ಗಧಾಮದ ಒಟ್ಟು 356 ಎಕರೆ ಪ್ರದೇಶದಲ್ಲಿ ಸಾರ್ವಜನಿಕ ರಸ್ತೆ ಮತ್ತು ನ್ಯಾಯಾಲಯದ ವ್ಯಾಜ್ಯಗಳಲ್ಲಿರುವ ಜಾಗವನ್ನು ಹೊರತುಪಡಿಸಿ, ಉಳಿದ 339.90 ಎಕರೆ ಸ್ಪಷ್ಟ ಭೂಮಿಯನ್ನು ಈಗಾಗಲೇ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಹಸ್ತಾಂತರಿಸಲಾಗಿದೆ.

ರಾಜ್ಯದಲ್ಲಿ ಪ್ರಸ್ತುತ 8 ಮೃಗಾಲಯಗಳು 'ಮೃಗಾಲಯ ಪ್ರಾಧಿಕಾರದ' ಅಡಿ ಕಾರ್ಯನಿರ್ವಹಿಸುತ್ತಿವೆ. ಪಿಲಿಕುಳ ಸೇರಿದಂತೆ ಇತರ ಮೃಗಾಲಯಗಳ ನಿರ್ವಹಣೆಯನ್ನು ಪ್ರಾಧಿಕಾರದ ವ್ಯಾಪ್ತಿಗೆ ತರಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಒಡಂಬಡಿಕೆ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ. ಮೃಗಾಲಯಗಳ ಮಾಲೀಕತ್ವ ಅರಣ್ಯ ಇಲಾಖೆಯ ಬಳಿಯೇ ಉಳಿಯಲಿದ್ದು, ದೈನಂದಿನ ನಿರ್ವಹಣೆ ಮತ್ತು ಉಸ್ತುವಾರಿಯನ್ನು ಪ್ರಾಧಿಕಾರ ವಹಿಸಿಕೊಳ್ಳಲಿದೆ ಎಂದು ರಾಮಲಿಂಗಾರೆಡ್ಡಿ ವಿವರಿಸಿದರು.

ಸಾರಿಗೆ ನೌಕರರಿಗೆ ಸಿಹಿಸುದ್ದಿ: 280 ಕೋಟಿ ರೂ. ವೇತನ ಹಿಂಬಾಕಿ ಬಿಡುಗಡೆ

ಬೆಂಗಳೂರು, ನ.16: ರಾಜ್ಯ ಸರ್ಕಾರಿ ಸ್ವಾಮ್ಯದ 4 ಸಾರಿಗೆ ನಿಗಮಗಳ ನೌಕರರಿಗೆ ರಾಜ್ಯ ಸರ್ಕಾರ ಸಿಹಿ ಸುದ್ದಿ ನೀಡಿದೆ. ಬಾಕಿ ಇರುವ ವೇತನದ ಹಿಂಬಾಕಿ ಪೈಕಿ 280 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರಿಗೆ ನಿಗಮಗಳ ನೌಕರರಿಗೆ ಒಟ್ಟು 1200 ಕೋಟಿ ರೂಪಾಯಿಗಳ ವೇತನ ಬಾಕಿ ಇತ್ತು. ಈ ಪೈಕಿ ನಮ್ಮ ಸರ್ಕಾರ ಮೊದಲ ಕಂತಿನಲ್ಲಿ 450 ಕೋಟಿ ರೂಪಾಯಿಗಳನ್ನು ಮತ್ತು ಎರಡನೇ ಕಂತಿನಲ್ಲಿ 170 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿತ್ತು. ಇದೀಗ ಮೂರನೇ ಕಂತಿನಲ್ಲಿ 280 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ. ಬಾಕಿ ಉಳಿಯುವ ಮುನ್ನೂರು ಕೋಟಿ ರೂಪಾಯಿಗಳನ್ನು ಹಣದ ಲಭ್ಯತೆ ನೋಡಿಕೊಂಡು ಶೀಘ್ರದಲ್ಲೇ



ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

ಗ್ರೀನ್ ಎಸ್‌ಎಂ ಟ್ಯಾಕ್ಸಿಗೆ ನಿರ್ಬಂಧ


ವಿಯಟ್ನಾಂ ಮೂಲದ 100 ಗ್ರೀನ್ ಎಸ್‌ಎಂ ಟ್ಯಾಕ್ಸಿಗಳಿಗೆ ಈಗಾಗಲೇ ನೋಂದಣಿ ಮಾಡಲಾಗಿದೆ. ಆದರೆ, ಮುಂದಿನ ಆದೇಶದವರೆಗೆ ಹೊಸದಾಗಿ ಯಾವುದೇ ಗ್ರೀನ್ ಎಸ್‌ಎಂ ಟ್ಯಾಕ್ಸಿಗಳನ್ನು ನೋಂದಣಿ ಮಾಡದಂತೆ ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಲಾಗಿದೆ ಎಂದು ಬೈರತಿ ಸುರೇಶ್ ತಿಳಿಸಿದರು. ರಾಜ್ಯದ ಚಾಲಕರ ಹಿತವನ್ನು ಕಾಪಾಡುವ ನಿಟ್ಟಿನಲ್ಲಿ ನಮ್ಮ ಸರ್ಕಾರ ನಿರ್ಧಾರ ಕೈಗೊಳ್ಳಲಿದೆ. ಇನ್ನು ಮುಂದೆ ಈ ಟ್ಯಾಕ್ಸಿಗೆ ಅನುಮತಿ ನೀಡಬೇಕೋ ಬೇಡವೋ ಎಂಬುದರ ಬಗ್ಗೆ ಮುಖ್ಯಮಂತ್ರಿಗಳ ಜೊತೆ ಚರ್ಚಿಸಿ, ನಂತರ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ ಎಂದು ತಿಳಿಸಿದರು.

ಓಲಾ, ಉಬರ್ ಸೇರಿ ಎಲ್ಲಾ ಟ್ಯಾಕ್ಸಿಗಳಿಗೂ ಮೀಟರ್ ಕಡ್ಡಾಯ

ಇನ್ನು ಮುಂದೆ ಆಟೋರಿಕ್ಷಾಗಳಲ್ಲಿ ಅಳವಡಿಸಿರುವ ರೀತಿಯಲ್ಲಿ ಓಲಾ, ಉಬರ್ ಸೇರಿ ಎಲ್ಲಾ ಮಾದರಿಯ ಟ್ಯಾಕ್ಸಿಗಳಿಗೆ ಮೀಟರ್ ಅಳವಡಿಕೆ ಕಡ್ಡಾಯ ಮಾಡಲಾಗುತ್ತದೆ. ಸರ್ಕಾರ ನಿಗದಿಪಡಿಸುವ ದರವನ್ನೇ ಟ್ಯಾಕ್ಸಿ ಸಂಸ್ಥೆಗಳು ಪ್ರಯಾಣಿಕರಿಂದ ವಸೂಲಿ ಮಾಡಬೇಕು. ಒಂದು ವೇಳೆ ಸರ್ಕಾರದ ನೀತಿಯನ್ನು ಉಲ್ಲಂಘಿಸಿ ಸಂಚರಿಸುವ ಟ್ಯಾಕ್ಸಿಗಳನ್ನು ಸೀಜ್ ಮಾಡಲಾಗುತ್ತದೆ. ಮೀಟರ್ ಅಳವಡಿಕೆ ಕಡ್ಡಾಯ ಮಾಡುವ ರೂಪುರೇಷೆಗಳು ಮತ್ತು



ಕಾನೂನುಗಳನ್ನು ಸಿದ್ಧಪಡಿಸಲಾಗುತ್ತಿದೆ. ಸದ್ಯದಲ್ಲಿಯೇ ಈ ಕಾನೂನನ್ನು ಜಾರಿಗೆ ತರಲಾಗುತ್ತದೆ. ವಾಹನ ಮಾಲೀಕರು ಮತ್ತು ಚಾಲಕರಿಗೆ ಟ್ಯಾಕ್ಸಿ ಆಪ್ ಹೊಂದಿರುವ ಕಂಪನಿಗಳಿಂದ ಆಗುತ್ತಿರುವ ಶೋಷಣೆಯನ್ನು ತಪ್ಪಿಸಲು ಈ ಕಾನೂನು ಜಾರಿಗೊಳಿಸಲಾಗುತ್ತಿದೆ. ಈ ಬಗ್ಗೆ ನೆರವಿಗೆ ಬರಬೇಕೆಂದು ಟ್ಯಾಕ್ಸಿ ಮಾಲೀಕರು ಮತ್ತು ಚಾಲಕರು ಸರ್ಕಾರಕ್ಕೆ ಬೇಡಿಕೆ ಸಲ್ಲಿಸಿದ್ದರು ಎಂದು ಬೈರತಿ ಸುರೇಶ್ ತಿಳಿಸಿದರು.



ಬೆಂಗಳೂರಿನ ಜಿಕೆವಿಕೆ ಆವರಣದಲ್ಲಿ ನಡೆದ ಕೃಷಿಮೇಳವನ್ನು ಸಚಿವ ನರೇಂದ್ರ ಸ್ವಾಮಿ ಸೋಮವಾರ ಉದ್ಘಾಟಿಸಿದರು. ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಸಚಿವ ಕೃಷ್ಣ ಬೈರೇಗೌಡ, ಶಾಸಕ ವಿಶ್ವನಾಥ್ ಇದ್ದರು.

ಶಿವಮೊಗ್ಗ ವಿಮಾನ ನಿಲ್ದಾಣ ಖಾಸಗೀಕರಣಕ್ಕೆ ಬಿಡುವುದಿಲ್ಲ: ಸಚಿವ ಮಧು ಬಂಗಾರಪ್ಪ

ಬೆಂಗಳೂರು, ನ.16: ಶಿವಮೊಗ್ಗ ವಿಮಾನ ನಿಲ್ದಾಣವನ್ನು ರಾಜ್ಯ ಸರ್ಕಾರ ಸ್ಥಗಿತಗೊಳಿಸುತ್ತಿದೆ ಎಂಬ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಆರೋಪಕ್ಕೆ ಪ್ರತಿಕ್ರಿಯಿಸಿದ ಸಚಿವ ಮಧು ಬಂಗಾರಪ್ಪ, ವಿಮಾನ ನಿಲ್ದಾಣದ ಅಭಿವೃದ್ಧಿಗೆ ರಾಜ್ಯ ಸರ್ಕಾರ ತನ್ನಿಂದ ಸಾಧ್ಯವಾದ ಎಲ್ಲ ಸಹಕಾರವನ್ನೂ ನೀಡುತ್ತಿದೆ

ಮಾನವ – ಆನೆ ಸಂಘರ್ಷ: ವಿವಿಧ ಇಲಾಖೆಗಳಿಗೆ ಜವಾಬ್ದಾರಿ ಹಂಚಿಕೆ

ವನ್ಯಪ್ರಾಣಿ ರಕ್ಷಣೆ ಮತ್ತು ಪುನರ್ವಸತಿ ಕಾರ್ಯಾಚರಣೆಯಲ್ಲಿ ಸಮನ್ವಯತೆ ಕಾಯ್ದುಕೊಳ್ಳುವಂತೆ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೂಚನೆ

ಬೆಂಗಳೂರು, ನ.16: ರಾಜ್ಯದಲ್ಲಿ ಹೆಚ್ಚುತ್ತಿರುವ ಮಾನವ–ವನ್ಯಜೀವಿ ಸಂಘರ್ಷ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ರಾಜ್ಯ ಸರ್ಕಾರ ವಿವಿಧ ಇಲಾಖೆಗಳ ಜವಾಬ್ದಾರಿಗಳನ್ನು ಸ್ಪಷ್ಟಪಡಿಸಿ ನಿರ್ದೇಶನ ನೀಡಿದೆ.

ಮಾನವ ಜೀವಹಾನಿ ಸಂಭವಿಸಿದ ಸಂದರ್ಭ ಹಾಗೂ ವನ್ಯಪ್ರಾಣಿಗಳ ರಕ್ಷಣಾ ಮತ್ತು ಪುನರ್ವಸತಿ ಕಾರ್ಯಾಚರಣೆಗಳಲ್ಲಿ ಅರಣ್ಯ, ಕಂದಾಯ, ಪೊಲೀಸ್, ಆರೋಗ್ಯ, ಪಶುವೈದ್ಯಕೀಯ ಇಲಾಖೆ, ಪಂಚಾಯತ್ ರಾಜ್ ಹಾಗೂ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಸೂಚಿಸಿದ್ದಾರೆ.

ಈ ಸಂಬಂಧ ಕರ್ನಾಟಕ ಸರ್ಕಾರದ ಸಚಿವಾಲಯದಿಂದ ಹೊರಡಿಸಿರುವ ಸುತ್ತೋಲೆಯಲ್ಲಿ, ಮಾನವ ವನ್ಯಜೀವಿ ಸಂಘರ್ಷ ಪ್ರಕರಣಗಳ ನಿರ್ವಹಣೆಯಲ್ಲಿ ಏಕರೂಪತೆ ಹಾಗೂ ಅಧಿಕಾರಿಗಳ ಜವಾಬ್ದಾರಿಗಳನ್ನು ಸ್ಪಷ್ಟವಾಗಿ ನಿಗದಿಪಡಿಸುವ ಅಗತ್ಯವನ್ನು ಒತ್ತಿ ಹೇಳಲಾಗಿದೆ. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ ಸೇರಿದಂತೆ ರಾಜ್ಯದ ವಿವಿಧೆಡೆ ನಡೆದ ಮಾನವ ವನ್ಯಜೀವಿ ಸಂಘರ್ಷ ಘಟನೆಗಳ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

ಸುತ್ತೋಲೆಯಲ್ಲಿ, ಮಾನವ ಸಾವಿನ ಪ್ರಕರಣಗಳಲ್ಲಿ ಕಂದಾಯ ಇಲಾಖೆ ಸ್ಥಳದಲ್ಲೇ ಹಾಜರಿದ್ದು ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಲಾಗಿದೆ. ತಹಶೀಲ್ದಾರ್ ಮತ್ತು ಸಹಾಯಕ ಆಯುಕ್ತರು ತಮ ವ್ಯಾಪ್ತಿಯ ಅಧಿಕಾರವನ್ನು ಬಳಸಿಕೊಂಡು ಅಗತ್ಯ ಆದೇಶಗಳನ್ನು ಹೊರಡಿಸಬೇಕು. ಮೃತರ ಕಾನೂನು ಬದ್ಧ ವಾರಸುದಾರರನ್ನು ಗುರುತಿಸಿ, ಅರಣ್ಯ ಇಲಾಖೆಯಿಂದ ನೀಡಲಾಗುವ ಪರಿಹಾರಧನವನ್ನು ಅವರಿಗೆ ತಲುಪಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶಿಸಲಾಗಿದೆ.

ಮಾನವ ಸಾವಿನ ಪ್ರಕರಣಗಳಲ್ಲಿ ಪೊಲೀಸರು ಎಫ್ಐಆರ್ ಅಥವಾ ಯುಡಿಆರ್ ದಾಖಲಿಸಿ, ವಶಕ್ಕೆ ಪಡೆದು ಮರಣೋತ್ತರ ಪರೀಕ್ಷೆಗೆ ಆಸ್ಪತ್ರೆಗೆ ಸಾಗಿಸಬೇಕು. ಸ್ಥಳದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು, ಜನಸಂದಣಿ ನಿಯಂತ್ರಿಸುವುದು ಹಾಗೂ ಸರ್ಕಾರಿ ಅಧಿಕಾರಿಗಳ ಕರ್ತವ್ಯಕ್ಕೆ ಯಾವುದೇ ಅಡ್ಡಿಯಾಗದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಲಾಗಿದೆ.



ವನ್ಯಜೀವಿಗಳ ದಾಳಿಗೆ ಸಂಬಂಧಿಸಿದ ಸಾಕ್ಷ್ಯಗಳನ್ನು ಸಂರಕ್ಷಿಸಲು ಅರಣ್ಯ ಇಲಾಖೆ ಮತ್ತು ವಿಧಿವಿಜ್ಞಾನ ಅಧಿಕಾರಿಗಳಿಗೆ ಪೊಲೀಸರು . ಮೃತದೇಹ ಹಾಗೂ ಘಟನಾ ಸ್ಥಳದ ಸಾಕ್ಷ್ಯಗಳನ್ನು ಸುರಕ್ಷಿತವಾಗಿ ಸಂಗ್ರಹಿಸುವ ವ್ಯವಸ್ಥೆ ಮಾಡಬೇಕು ಎಂದು ತಿಳಿಸಲಾಗಿದೆ. ವನ್ಯಪ್ರಾಣಿಗಳ ರಕ್ಷಣಾ ಕಾರ್ಯಾಚರಣೆಯಲ್ಲಿ ಅರಣ್ಯ ಇಲಾಖೆಯೇ ಕಾರ್ಯಾಚರಣೆಯನ್ನು ಮುನ್ನಡೆಸಬೇಕು. ರಕ್ಷಿಸಲಾದ ಪ್ರಾಣಿಯನ್ನು ಸಾಗಿಸಲು ಅಗತ್ಯ ವಾಹನದ ವ್ಯವಸ್ಥೆ ಮಾಡಬೇಕು. ಕಾರ್ಯಾಚರಣೆಯ ವೇಳೆ ಸಾರ್ವಜನಿಕರ ಸುರಕ್ಷತೆಗಾಗಿ 'ನೋ–ಗೋ ಝೋನ್'ಗಳನ್ನು ಗುರುತಿಸಿ, ಅವುಗಳ ಕುರಿತು ಪೊಲೀಸ್ ಇಲಾಖೆಗೆ ಮಾಹಿತಿ ನೀಡಬೇಕು ಎಂದು ನಿರ್ದೇಶಿಸಲಾಗಿದೆ.

ವನ್ಯಪ್ರಾಣಿ ರಕ್ಷಣಾ ಕಾರ್ಯಾಚರಣೆಯ ಸಂದರ್ಭದಲ್ಲಿ ಅರಣ್ಯ ಇಲಾಖೆ ಗುರುತಿಸುವ ನೋ–ಗೋ ಝೋನ್'ಗಳಿಗೆ ಸಾರ್ವಜನಿಕರು ಪ್ರವೇಶಿಸದಂತೆ ಪೊಲೀಸರು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಜನಸಂದಣಿ ನಿಯಂತ್ರಿಸುವುದರ ಜತೆಗೆ, ರಕ್ಷಿಸಲಾದ ವನ್ಯಪ್ರಾಣಿ, ಆಂಬ್ಯುಲೆನ್ಸ್ ಹಾಗೂ ಅಧಿಕೃತ ವಾಹನಗಳ ಸಂಚಾರಕ್ಕೆ ಯಾವುದೇ ಅಡ್ಡಿಯಾಗದಂತೆ ಮಾರ್ಗವನ್ನು ತೆರವುಗೊಳಿಸಬೇಕು ಎಂದು ಸೂಚಿಸಲಾಗಿದೆ.

ಪುಂಡಾನೆ ಹಿಡಿದು ಸ್ಥಳಾಂತರಕ್ಕೆ ಅನುಮತಿ

ಹಾಸನ ವಿಭಾಗದಲ್ಲಿ ಕಾಡಾನೆಗಳ ಸಮಸ್ಯೆ ತೀವ್ರಗೊಂಡಿದ್ದು, ಅಲ್ಲಿರುವ 10 ಪುಂಡಾನೆಗಳನ್ನು ಸೆರೆಹಿಡಿದು ಬೇರೆಡೆ ಸ್ಥಳಾಂತರಿಸಲು ಅನುಮತಿ ನೀಡಲಾಗಿದೆ. ಪ್ರಧಾನ ಅರಣ್ಯ ಸಂರಕ್ಷಣಾಧಿಕಾರಿಗಳು ಈ ಸಂಬಂಧ ಆದೇಶ ಹೊರಡಿಸಿದ್ದು, ಆನೆಗಳ ಸುರಕ್ಷತೆ, ಆನೆಗಳಿಂದ ಉಂಟಾಗಬಹುದಾದ ಮಾನವ ಗಾಯ, ಪ್ರಾಣಹಾನಿ, ಇನ್ನಿತರ ದಾಳಿಗಳನ್ನು ತಪ್ಪಿಸಲು ಕ್ರಮ ತೆಗೆದುಕೊಳ್ಳಬೇಕು. 10 ಗಂಡಾನೆಗಳಸೆರೆ ಹಿಡಿದು ಸೂಕ್ತ ಆವಾಸ ಸ್ಥಾನಕ್ಕೆ ಸ್ಥಳಾಂತರಿಸಬೇಕು. ಇದಕ್ಕಾಗಿ ಸಾಕಾನೆಗಳ ತಂಡ ಎ ಮತ್ತು ಸಿನಲ್ಲಿ ಕುಮ್ಕಿ ಆನೆಗಳನ್ನು ಉಪಯೋಗಿಸಿಕೊಳ್ಳುವಂತೆ ಸೂಚಿಸಲಾಗಿದೆ. ಆನೆಗಳ ಸ್ಥಳಾಂತರ ಸಂದರ್ಭದಲ್ಲಿ ಅರಣ್ಯ ಸಿಬ್ಬಂದಿ ಮತ್ತು ಸ್ಥಳೀಯ ಜನರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಬೆಲೆ ಏರಿಕೆ ವಿರೋಧಿಸಿ ನ.25ರಿಂದ ರಾಜ್ಯಾದ್ಯಂತ ಮೂರು ದಿನ ಬಿಜೆಪಿ ಪ್ರತಿಭಟನೆ: ರವಿಕುಮಾರ್

ಬೆಂಗಳೂರು,ನ.16: ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಟೀಕೆ ಮಾಡುವ, ಪೋಸ್ಟ್ ಹಾಕುವವರ ಮೇಲೆಯೇ ಪ್ರಕರಣ ದಾಖಲಿಸಲಾಗುತ್ತಿದೆ. ಇದನ್ನು ಖಂಡಿಸಿ ಪೊಲೀಸ್ ಮಹಾನಿರ್ದೇಶಕರಿಗೆ ದೂರು ಸಲ್ಲಿಸಿ ಪ್ರತಿಭಟನೆ ದಾಖಲಿಸಲಾಗಿದೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಎನ್. ರವಿಕುಮಾರ್ ಅವರು ತಿಳಿಸಿದ್ದಾರೆ.

ಸ್ವದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿನ ನಮ್ಮ ಸಾಮಾಜಿಕ ಮಾಧ್ಯಮಗಳಲ್ಲಿ ಸಕ್ರಿಯವಾಗಿರುವ ಕಾರ್ಯಕರ್ತರು, ಹಿಂದೂ ಕಾರ್ಯಕರ್ತರು, ಸರ್ಕಾರದ ವಿರುದ್ಧ ಟೀಕೆ ಮಾಡಿದರೆ, ಸರ್ಕಾರದ ವಿರುದ್ಧ ಪೋಸ್ಟ್ ಹಾಕಿದರೆ ಪ್ರಕರಣ ದಾಖಲಿಸುತ್ತಾರೆ. ಅಲ್ಲದೇ, ಬೆಲೆ ಏರಿಕೆ, ಜನವಿರೋಧಿ ಸೇರಿದಂತೆ ಸರ್ಕಾರದ ನೀತಿಗಳ ವಿರುದ್ಧ ಪೋಸ್ಟ್ ಹಾಕಿದರೆ ಪ್ರಕರಣ ದಾಖಲಿಸುವ ಪ್ರಜಾಪ್ರಭುತ್ವ ವಿರೋಧ ಧೋರಣೆಯನ್ನು ರಾಜ್ಯ ಸರ್ಕಾರ ಅನುಸರಿಸುತ್ತಿದೆ ಎಂದು ದೂರಿದರು.

ಎಸ್ಪಿ, ಡಿಸಿಪಿ ಸೇರಿದಂತೆ ಇತರ ಪೊಲೀಸ್ ಅಧಿಕಾರಿಗಳ ಗಮನಕ್ಕೆ ತಂದು ಕಾರ್ಯಕರ್ತರಿಂದ ಒಂದು ಲಕ್ಷ, ಎರಡು ಲಕ್ಷದ ಬಾಂಡ್ ಬರೆಸಿಕೊಳ್ಳಲಾಗುತ್ತಿದೆ. ಸರ್ಕಾರದ ವಿರುದ್ಧ ಟೀಕೆ ಮಾಡಲ್ಲ ಎಂದು ಮುಚ್ಚಳಿಕೆ ಬರೆಸಿಕೊಳ್ಳಲಾಗುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.



ಧಮ್ಕಿ ಹಾಕಿ, ಹೆದರಿಸಿ ಪ್ರಜಾಪ್ರಭುತ್ವ ವಿರೋಧಿ ನಡೆ ಅನುಸರಿಸಲಾಗುತ್ತಿದೆ. ಈಗಾಗಲೇ ನೋಟಿಸ್ ನೀಡಿದ್ದಾರೆ. ರಾಜ್ಯದ ಹಲವು ಭಾಗದಲ್ಲಿ ಇದು ನಡೆಯುತ್ತಾ ಇದೆ ಎಂದು ಟೀಕಿಸಿದರು.

ಬೆಲೆ ಏರಿಕೆ ವಿರುದ್ಧ ಇದೇ 23ರಿಂದ 25 ರವರೆಗೆ ಮೂರು ದಿನ ರಾಜ್ಯದಾದ್ಯಂತ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರತಿಭಟನೆ ನಡೆಸಲಾಗುವುದು. ಇದಕ್ಕಾಗಿ ಜಿಲ್ಲೆಗಳಲ್ಲಿ ತಯಾರಿ ಸಭೆ ಮಾಡಲಾಗುವುದು.

ತಹಶೀಲ್ದಾರ್ ಕಚೇರಿಗೆ ತೆರಳಿ ಮನವಿ ನೀಡಲಾಗುವುದು. ಸರ್ಕಾರ ಬಿಜೆಪಿ ಕಾರ್ಯಕರ್ತರ ಮೇಲೆ ಇದೇ ರೀತಿ ದೂರು ದಾಖಲಿಸುವುದನ್ನು ಮುಂದುವರಿಸಿದರೆ ಮುಂದಿನ ಚಳಿಗಾಲದ ಅಧಿವೇಶನದಲ್ಲಿ ಪ್ರಸ್ತಾಪ ಮಾಡಿ ಪ್ರತಿಭಟನೆ ಮಾಡುತ್ತೇವೆ ಎಂದು ಎಚ್ಚರಿಸಿದರು.

ರಾಹುಲ್‌ಗಾಂಧಿ ಜನರ ಕ್ಷಮೆಯಾಚಿಸಲಿ

ಕೇಂದ್ರದಲ್ಲಿ ರಾಹುಲ್ ಗಾಂಧಿ ಪಪ್ಪು ಒನ್ ಆದರೆ ರಾಜ್ಯದಲ್ಲಿ ಪ್ರಿಯಾಂಕ್ ಖರ್ಗೆ ಪಪ್ಪು 2. ಫೋನ್ ಕದ್ದಾಲಿಕೆ ಬಗ್ಗೆ ಪ್ರಿಯಾಂಕ್ ಆರೋಪಿಸುತ್ತಿದ್ದಾರೆ. ಯಾರು ಕದ್ದಾಲಿಕೆ ಮಾಡುತ್ತಿದ್ದಾರೆ ಎಂಬುದನ್ನು ಬಿಡುಗಡೆ ಮಾಡಲಿ. ಇವರಿಗೆ ಮಾತನಾಡುವ ವಿಷಯದ ಬಗ್ಗೆಯೇ ಪರಿಜ್ಞಾನವೇ ಇಲ್ಲ. ರಾಹುಲ್ ಗಾಂಧಿ ಅವರು ಮೋದಿ ಅವರ ವಿರುದ್ಧ ಕದ್ದಾಲಿಕೆ ಆರೋಪ ಮಾಡ್ತಾ ಇದ್ದಾರೆ. ಇದನ್ನು ಹೇಳಲು ನಾಚಿಕೆಯಾಗಬೇಕು. ಪ್ರಧಾನಿ ಸ್ಥಾನ, ಆಡಳಿತದ ಬಗ್ಗೆ ತಿಳಿಯಬೇಕು. ರಾಹುಲ್ ಗಾಂಧಿ ಅವರು ದೇಶದ ಜನರ ಕ್ಷಮೆ ಯಾಚಿಸಬೇಕು ಎಂದು ರವಿಕುಮಾರ್ ಆಗ್ರಹಿಸಿದರು.



ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರು ಸೋಮವಾರ ಬೆಂಗಳೂರಿನಲ್ಲಿರುವ ತಮ್ಮ ನೂತನ ಅಧಿಕೃತ ನಿವಾಸ 'ಗಂಗಾ'ದಲ್ಲಿ ವಿಶೇಷ ಪೂಜೆ ಮತ್ತು ಹೋಮ ನೆರವೇರಿಸಿದರು. ಕುಮಾರಕೃಪ ರಸ್ತೆಯಲ್ಲಿರುವ ಕುಮಾರಕೃಪ ಅತಿಥಿ ಗೃಹದ ಹಳೆಯ ಕಟ್ಟಡವನ್ನು 'ಗಂಗಾ' ಎಂದು ಮರುನಾಮಕರಣ ಮಾಡಿ, ಅದನ್ನು ಮುಖ್ಯಮಂತ್ರಿಯವರ ಅಧಿಕೃತ ನಿವಾಸ ಹಾಗೂ ಗೃಹ ಕಚೇರಿಯನ್ನಾಗಿ ಸರ್ಕಾರ ಘೋಷಿಸಿದೆ..

ಫ್ಲೈ ಓವರ್‌ನಲ್ಲಿ ನಂಬರ್ ಪ್ಲೇಟ್ ಇಲ್ಲದ ಬೈಕ್‌ಗಳಲ್ಲಿ ವ್ಹೀಲಿಂಗ್: ಸಾರ್ವಜನಿಕರ ಆಕ್ರೋಶ

ಬೆಂಗಳೂರು, ನ.16: ವಾರಾಂತ್ಯದ ದಿನಗಳಲ್ಲಿ ಪೊಲೀಸರ ಭಯವಿಲ್ಲದೆ ಪುಂಡರ ಗುಂಪೊಂದು ವ್ಹೀಲಿಂಗ್ ಮಾಡಿ ಹುಚ್ಚಾಟ ಮೆರೆದಿದೆ. ಪೊಲೀಸರು ಹದ್ದಿನ ಕಣ್ಣಿಟ್ಟಿದ್ದರೂ ಅವರ ಭಯವಿಲ್ಲದೆ ಯುವಕರ ಗುಂಪು ರಸ್ತೆಮಧ್ಯೆ ರಾಜಾರೋಷವಾಗಿ ವ್ಹೀಲಿಂಗ್ ಮಾಡಿದ್ದಾರೆ. ಚಿಕ್ಕಬಿದರಕಲ್ಲು ಫ್ಲೈಓವರ್ ಮೇಲೆ ನಂಬರ್ ಪ್ಲೇಟ್ ಇಲ್ಲದ ಬೈಕ್‌ಗಳನ್ನು ತೆಗೆದುಕೊಂಡು ಬಂದು ವ್ಹೀಲಿಂಗ್ ಮಾಡಿರುವುದು ಕಂಡುಬಂದಿದೆ.

ಬೆಂಗಳೂರು–ತುಮಕೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ರಾಜಾರೋಷವಾಗಿ ಗುಂಪೊಂದು ರಾತ್ರಿಯಿಡೀ ವ್ಹೀಲಿಂಗ್ ಮಾಡಿ ಹುಚ್ಚಾಟ ಮೆರೆದಿದ್ದಾರೆ.ಹೈವೇಯಲ್ಲಿ ಸಂಚರಿಸುತ್ತಿದ್ದ 20ಕ್ಕೂ ಹೆಚ್ಚು ಬೈಕ್‌ಗಳು, ಸ್ಕೂಟರ್ ಹಾಗೂ ಒಂದು ಕಾರನ್ನು ನಿಲ್ಲಿಸಿ ಮಧ್ಯರಾತ್ರಿ 12 ಗಂಟೆಯಿಂದ ಬೆಳಗಿನ ಜಾವ 3 ಗಂಟೆಯವರೆಗೂ ವ್ಹೀಲಿಂಗ್ ಮಾಡಿರುವ ಪುಂಡರ ವರ್ತನೆಗೆ ಸಾರ್ವಜನಿಕ ವಲಯದಲ್ಲಿ ಆಕ್ರೋಶ ವ್ಯಕ್ತವಾಗಿದೆ.



21 ಜಿಲ್ಲೆಗಳಿಗೆ ಸಂಪರ್ಕ ಕಲ್ಪಿಸುವ ಮುಖ್ಯರಸ್ತೆಯಲ್ಲಿ ತಮ ಪ್ರಾಣದ ಹಂಗನ್ನು ಲೆಕ್ಕಿಸದೆ ಹಾಗೂ ಇತರರ ಪ್ರಾಣಕ್ಕೆ ಸಂಚಕಾರವೆಂಬಂತೆ ವ್ಹೀಲಿಂಗ್ ಮಾಡಿರುವುದು ಕಂಡುಬಂದಿದೆ.

ಸ್ಕೂಟರ್ ಮತ್ತು ಬೈಕ್‌ಗಳಲ್ಲಿ ಸೈಲೆನ್ಸರ್ ಸಂಪರ್ಕ ತೆಗೆದುಕೊಂಡು ಬಂದು ವ್ಹೀಲಿಂಗ್‌ಗೆ ಬಳಸಿಕೊಂಡಿದ್ದಾರೆ. ಈ ರಸ್ತೆಯಲ್ಲಿ ಸಂಚರಿಸುವ ವಾಹನಗಳ ಸವಾರರು ಈ ಬಗ್ಗೆ ಆಕ್ರೋಶ ವ್ಯಕ್ತಪಡಿಸಿ ವ್ಹೀಲಿಂಗ್‌ಗೆ ಸಂಪೂರ್ಣ ಕಡಿವಾಣ ಹಾಕಬೇಕೆಂಬ ಒತ್ತಾಯ ಕೇಳಿ ಬಂದಿದೆ.

ಇ–ಹರಾಜಿನ ಮೂಲಕವೇ 60 ಅಡಿ, ಹೆಚ್ಚಿನ ಅಗಲದ ರಸ್ತೆಗಳಲ್ಲಿನ ಖಾಲಿ ನಿವೇಶನ ವಿಲೇವಾರಿ

ಬೆಂಗಳೂರು, ನ.16: ಬಿಡಿಎ ಅಭಿವೃದ್ಧಿಪಡಿಸಿರುವ ಬಡಾವಣೆಗಳಲ್ಲಿನ ಬೆಲೆಬಾಳುವ ಖಾಲಿ ನಿವೇಶನಗಳ ವಿಲೇವಾರಿಗೆ ಹೊಸ ನಿಯಮ ಜಾರಿಗೆ ತರಲಾಗಿದೆ. 60 ಅಡಿ ಮತ್ತು ಅದಕ್ಕಿಂತ ಹೆಚ್ಚಿನ ಅಗಲದ ರಸ್ತೆಗಳಿಗೆ ಹೊಂದಿಕೊಂಡಿರುವ ಎಲ್ಲಾ ಖಾಲಿ ನಿವೇಶನಗಳನ್ನು ಇನ್ನು ಮುಂದೆ ಸಾರ್ವಜನಿಕ ಇ–ಹರಾಜಿನ ಮೂಲಕವೇ ವಿಲೇವಾರಿ ಮಾಡಬೇಕು ಎಂದು ಬಿಡಿಎ ನಿರ್ದೇಶನ ನೀಡಿದೆ.

ಈ ಮೂಲಕ ವಿವೇಚನಾಧಿಕಾರದಡಿ ನಿವೇಶನ ಹಂಚಿಕೆ ಮಾಡುವುದಕ್ಕೆ ಕಡಿವಾಣ ಹಾಕುವುದರ ಜತೆಗೆ ಪ್ರಾಧಿಕಾರದ ಆದಾಯ ಹೆಚ್ಚಿಸಲು ಇಂತಹ ತೀರ್ಮಾನ ಕೈಗೊಳ್ಳಲಾಗಿದೆ. ಈ ಸಂಬಂಧ ಸುತ್ತೋಲೆ ಹೊರಡಿಸಿರುವ ಬಿಡಿಎ ಆಯುಕ್ತ ಪಿ. ಮಣಿವಣ್ಣನ್ ಅವರು, ಪ್ರಾಧಿಕಾರ ಅಭಿವೃದ್ಧಿ ಪಡಿಸಿರುವ ಬಡಾವಣೆಗಳಲ್ಲಿನ ಖಾಲಿ ನಿವೇಶನಗಳನ್ನು ಸಾರ್ವಜನಿಕ ಹರಾಜಿನ ಮೂಲಕವೇ ವಿಲೇವಾರಿ ಮಾಡುವಂತೆ ಅಧಿಕಾರಿಗಳು ಮತ್ತು ಎಂಜಿನಿಯರ್‌ಗಳಿಗೆ ಸೂಚಿಸಿದ್ದಾರೆ. ಇದರಲ್ಲಿ ಮೂಲೆ ನಿವೇಶನಗಳು, ಮಧ್ಯಂತರ ನಿವೇಶನಗಳು ಹಾಗೂ ವಾಣಿಜ್ಯ ನಿವೇಶನಗಳೂ ಸೇರಿವೆ.

ಬೆಲೆಬಾಳುವ ನಿವೇಶನಗಳ ಮೇಲೆ ಕಣ್ಣು: 60 ಅಡಿ ಹಾಗೂ ಅದಕ್ಕಿಂತ ಹೆಚ್ಚಿನ ಅಗಲದ ರಸ್ತೆಗಳ ಪಕ್ಕದಲ್ಲಿರುವ ನಿವೇಶನಗಳು ಸಾಮಾನ್ಯವಾಗಿ ಹೆಚ್ಚಿನ ಮಾರುಕಟ್ಟೆ ಮೌಲ್ಯ ಹೊಂದಿರುತ್ತವೆ. ಇಂತಹ ನಿವೇಶನಗಳನ್ನು ನೇರವಾಗಿ ಹಂಚಿಕೆ ಮಾಡುವ ಬದಲು ಸಾರ್ವಜನಿಕ ಹರಾಜಿಗೆ ಒಳಪಡಿಸುವುದರ ರಿಂದ ಸ್ಪರ್ಧಾತ್ಮಕ ಬಿಡ್‌ಗಳು ಲಭ್ಯವಾಗಲಿದ್ದು, ಬಿಡಿಎಗೆ ಹೆಚ್ಚಿನ ಆದಾಯ ಸಂಗ್ರಹಿಸಲು ಸಾಧ್ಯವಾಗಲಿದೆ ಎಂಬ ನಿರೀಕ್ಷೆಯಿದೆ. ಉಳಿದ ನಿವೇಶನಗಳನ್ನು ಬಿಡಿಎ ನಿವೇಶನ ಹಂಚಿಕೆ ನಿಯಮಗಳು ಹಾಗೂ ಜಾರಿಯಲ್ಲಿರುವ ಇತರ ನೀತಿಗಳ ಪ್ರಕಾರ ಸಾಮಾನ್ಯ ವರ್ಗದಡಿ ಹಂಚಿಕೆ ಮಾಡಲಾಗುತ್ತದೆ. ಹೊಸ ನಿರ್ದೇಶನವು ಪ್ರಮುಖ ನಿವೇಶನಗಳ ವಿಲೇವಾರಿಯಲ್ಲಿ ಪಾರದರ್ಶಕತೆ ಹೆಚ್ಚಿಸುವ ಉದ್ದೇಶ ಹೊಂದಿದೆ.

ಪರಿಹಾರ ನಿವೇಶನ ಹಂಚಿಕೆಯಲ್ಲಿ ಅಕ್ರಮದ ಆರೋಪ: ಭೂಸ್ವಾಧೀನಕ್ಕೆ ಒಳಗಾದ ಮಾಲೀಕರಿಗೆ ಪರಿಹಾರ ನಿವೇಶನಗಳನ್ನು ಹಂಚಿಕೆ ಮಾಡುವ ವಿಚಾರದಲ್ಲಿ ನಿಯಮ ಉಲ್ಲಂಘನೆ ನಡೆದಿರುವ ಆರೋಪಗಳ ನಡುವೆಯೇ ಬಿಡಿಎ ಈ ಕ್ರಮ ಕೈಗೊಂಡಿದೆ. ಹಿರಿಯ ಅಧಿಕಾರಿಗಳ ಗಮನಕ್ಕೆ ಬಾರದಂತೆ ಕೆಲವು ಎಂಜಿನಿಯರ್‌ಗಳು ಮತ್ತು ಮಧ್ಯವರ್ತಿಗಳ ನೆರವಿನಿಂದ ಪ್ರಮುಖ ಸ್ಥಳಗಳಲ್ಲಿನ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಎಂಬ ಆರೋಪಗಳೂ ಕೇಳಿಬಂದಿವೆ.

ನಾಡಪ್ರಭು ಕೆಂಪೇಗೌಡ ಬಡಾವಣೆ ಹಾಗೂ ಡಾ. ಶಿವರಾಮ ಕಾರಂತ ಬಡಾವಣೆಗಳಲ್ಲಿ ಭೂಸ್ವಾಧೀನಕ್ಕೆ ಒಳಗಾದ ಹಲವು ಮಾಲೀಕರು ಇನ್ನೂ ಪರಿಹಾರ ನಿವೇಶನಗಳಿಗಾಗಿ ಕಾಯುತ್ತಿದ್ದಾರೆ. ನಿಯಮಗಳ ಪ್ರಕಾರ ಅರ್ಹ ಭೂಮಾಲೀಕರಿಗೆ ಪರಿಹಾರ ನಿವೇಶನಗಳನ್ನು ಒದಗಿಸಬೇಕಿರುವ ಹಿನ್ನೆಲೆಯಲ್ಲಿ, ಬೆಲೆಬಾಳುವ ನಿವೇಶನಗಳ ವಿಲೇವಾರಿಯಲ್ಲಿ ಪಾರದರ್ಶಕತೆ ಕಾಪಾಡುವುದು ಪ್ರಾಧಿಕಾರಕ್ಕೆ ಸವಾಲಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಬಿಡಿಎ ಅಧ್ಯಕ್ಷ ಎನ್.ಎ. ಹ್ಯಾರಿಸ್ ಅವರೊಂದಿಗೆ ನಡೆದ ಚರ್ಚೆಯ ಬಳಿಕ ಈ ನಿರ್ದೇಶನ ಹೊರಡಿಸಲಾಗಿದೆ ಎಂದು ಬಿಡಿಎ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪ್ರಮುಖ ನಿವೇಶನಗಳ ವಿಲೇವಾರಿಯಲ್ಲಿ ಪಾರದರ್ಶಕ ವ್ಯವಸ್ಥೆ ರೂಪಿಸುವುದರ ಜತೆಗೆ ಪ್ರಾಧಿಕಾರಕ್ಕೆ ಹೆಚ್ಚುವರಿ ಆದಾಯ ತರುವ ಉದ್ದೇಶವೂ ಇದಾಗಿದೆ ಎಂದು ಅವರು ಹೇಳಿದ್ದಾರೆ.

ಎನ್‌ಪಿಕೆಎಲ್‌ನ 101 ನಿವೇಶನಗಳ ಇ–ಹರಾಜು: ಇದೇ ವೇಳೆ, ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ 101 ವಸತಿ ಮತ್ತು ವಾಣಿಜ್ಯ ಮೂಲೆ ಹಾಗೂ ಮಧ್ಯಂತರ ನಿವೇಶನಗಳ ಇ–ಹರಾಜನ್ನು ಬಿಡಿಎ ಪ್ರಕಟಿಸಿದೆ. ಪ್ರತಿ ಚದರ ಮೀಟರ್‌ಗೆ 80,000 ರೂ.ಗಳ ಏಕರೂಪದ ಮೂಲ ಬೆಲೆ ನಿಗದಿಪಡಿಸಲಾಗಿದ್ದು, ಪ್ರತಿ ಚದರ ಮೀಟರ್‌ಗೆ ಕನಿಷ್ಠ 500ರ ರೂ.ಗಳ ಹೆಚ್ಚಳದ ಹಂತಗಳಲ್ಲಿ ಬಿಡ್ ಸಲ್ಲಿಸಬೇಕು. ಅಂತಿಮ ಬಿಡ್ ಮೂಲ ಬೆಲೆಗಿಂತ ಕನಿಷ್ಠ ಶೇ.10ರಷ್ಟು ಹೆಚ್ಚಿರಬೇಕು ಎಂಬ ಷರತ್ತನ್ನೂ ವಿಧಿಸಲಾಗಿದೆ.

ಐದು ವರ್ಷಗಳಲ್ಲಿ ತಗ್ಗಿದ ಸಾವಿನ ಸಂಖ್ಯೆ, ಶೇ.20ರಷ್ಟು ಹೆಚ್ಚಾ

ಗುಮಟೆ ಪದಗಳಲ್ಲಿ ಜ್ಞಾನದ ನಿಧಿ ಅಡಕ: ಜಯಂತ ಕಾಯ್ಕಿಣಿ ಅಭಿಮಾತ

ಅಂಕೋಲಾ, ನ.16– : ಜನಪದ ಹಾಡುಗಳಲ್ಲಿ ಒಂದು ಸಮುದಾಯದ ಸಂಸ್ಕೃತಿ, ಸಂಪ್ರದಾಯ ಹಾಗೂ ಬದುಕಿನ ಕ್ರಮ ಅಡಕವಾಗಿರುತ್ತದೆ. ತಲೆಮಾರಿನಿಂದ ತಲೆಮಾರಿಗೆ ಹರಿದುಬಂದಿರುವ ಇಂತಹ ಜನಪದ ಹಾಡುಗಳು ಜ್ಞಾನದ ನಿಧಿಯಾಗಿವೆ ಎಂದು ಸಾಹಿತಿ ಜಯಂತ ಕಾಯ್ಕಿಣಿ ಹೇಳಿದರು.



ಮನುಷ್ಯರನ್ನು ಒಂದೆಡೆ ಸೇರಿಸುವ ಸಂಗತಿಗಳೇ ಸಂಸ್ಕೃತಿಯ ಭಾಗವಾಗುತ್ತವೆ. ಜನಪದ ಹಾಡುಗಳಲ್ಲಿ ಮಣ್ಣಿನ ಪರಿಸರ ಹಾಗೂ ಸಮುದಾಯದ ಬದುಕಿನ ಅನುಭವಗಳು ಅಡಕವಾಗಿರುತ್ತವೆ. ಇಂತಹ ಜನಪದ ಹಾಡುಗಳನ್ನು ಸಂಗ್ರಹಿಸಿ ಮುಂದಿನ ಪೀಳಿಗೆಗೆ ತಲುಪಿಸುವ ರಾಮಚಂದ್ರ ಗೌಡ ಅವರ ಪ್ರಯತ್ನ ಅಭಿನಂದನಾರ್ಹ ವಾದದ್ದು ಎಂದು ಜಯಂತ ಕಾಯ್ಕಿಣಿ ವಿವರಿಸಿದರು.

ಅಧ್ಯಕ್ಷತೆ ವಹಿಸಿದ ಸಾಹಿತಿ ಶಾಂತರಾಮ ನಾಯಕ ಹಿಚಕಡ ಮಾತನಾಡಿ, ಹಾಲಕ್ಕಿ ಜನಾಂಗದವರು ಸಂಸ್ಕೃತಿಯ ವಾರಸುದಾರರು ಎನ್ನುವ ಮಾತು ಅಕ್ಷರಶಃ ಸತ್ಯ. ತಮ್ಮದೇ ಆದ ವಿಶಿಷ್ಟ ಆಚಾರ–ವಿಚಾರ, ಹಾಡು, ಕುಣಿತ ಹಾಗೂ ಸಂಪ್ರದಾಯಗಳ ಮೂಲಕ ಹಾಲಕ್ಕಿ ಸಮುದಾಯ ತನ್ನ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿಕೊಂಡು ಬಂದಿದೆ ಎಂದರು.

ಕಲಬುರಗಿಯಲ್ಲಿ ಪ್ರತಿವರ್ಷ ಕ್ರೀಡಾಹಬ್ಬ ಆಯೋಜನೆ: ಖರ್ಗೆ

ಕಲಬುರಗಿ, ನ. 16: ಪ್ರತಿವರ್ಷ ನಿಗದಿತ ತಿಂಗಳಲ್ಲಿ ಸ್ಪೋರ್ಟ್ಸ್ ಹಬ್ಬ ಆಯೋಜಿಸಲು ತೀರ್ಮಾನ ಕೈಗೊಳ್ಳಲಾ ಗುವುದು. ಇದರಿಂದ ಕ್ರೀಡಾಪಟುಗಳು ತರಬೇತಿ ಪಡೆಯಲು ಮತ್ತು ಭಾಗವಹಿ ಸಲು ಅನುಕೂಲ ಆಗುತ್ತದೆ. ಕ್ರೀಡಾಪಟು ಗಳಿಗೆ ಪ್ರೋತ್ಸಾಹ ದೊರೆತಂತಾಗುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.



ಕಲಬುರಗಿ ನಗರದ ಡಾ.ಎಸ್.ಎಂ. ಪಂಡಿತ್ ಜಿಲ್ಲಾ ರಂಗಮಂದಿರದಲ್ಲಿ ಕಲಬುರಗಿ ನೆಕ್ಟ್ ಫೌಂಡೇಷನ್ ಪ್ರಾಯೋಜಕತ್ವದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸ್ಪೆನ್ಜೋ ಸಂಸ್ಥೆ ಆಯೋಜಿಸಿದ್ದ 'ಕಲಬುರಗಿ ಸ್ಪೋರ್ಟ್ಸ್ ಹಬ್ಬ' ಸಮಾರೋಪ ಸಮಾರಂಭದಲ್ಲಿ ಜಿಲ್ಲಾ ಉಸ್ತುವರಿ ಸಚಿವ ಪ್ರಿಯಾಂಕ್ ಖರ್ಗೆ ಅವರು, ವಿವಿಧ ಕ್ರೀಡೆಗಳಲ್ಲಿ ವಿಜೇತ ಕ್ರೀಡಾಪಟುಗಳು ಮತ್ತು ತಂಡಗಳಿಗೆ ಟ್ರೋಫಿ, ಪದಕ ಮತ್ತು ಪ್ರಮಾಣಪತ್ರ ವಿತರಿಸಿದರು.

ನೀಲಿ ನಕ್ಷೆ ಕೊಟ್ಟರೆ, ಆ ತರಬೇತಿ ಕೇಂದ್ರಗಳನ್ನು ಸೃಷ್ಟಿ ಮಾಡುವ ಜವಾಬ್ದಾರಿ ನನ್ನದು ಎಂದರು.

ಸ್ಪೋರ್ಟ್ಸ್ ಹಬ್ಬದ ಮೂಲಕ ಕ್ರೀಡಾಕ್ರಾಂತಿಗೆ ನಾವು ಬುನಾದಿ ಹಾಕಿದ್ದೇವೆ. 20 ಬಗೆಯ ಕ್ರೀಡೆಗಳಲ್ಲಿ 2,000 ಕ್ರೀಡಾಪಟುಗಳು ಭಾಗ ವಹಿಸಿದ್ದರು. ಈ ಕ್ರೀಡಾಹಬ್ಬದಿಂದ ಕ್ರೀಡಾಪಟುಗಳಿಗೆ ಬಹುಮಾನ ಅಷ್ಟೇ ಅಲ್ಲ, ಆತ್ಮಸ್ಥೈರ್ಯವನ್ನೂ ಬಂದಿದೆ. ಇಂದಿನ ಕ್ರೀಡಾ ಹಬ್ಬ ಮುಕ್ತಾಯದ ಗೆರೆ ಅಲ್ಲ; ಇದು ಕ್ರೀಡಾ ಬೆಳವಣಿಗೆಯ ಆರಂಭದ ಗೆರೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಮಾತನಾಡಿ, ಎರಡನೇ ಬಾರಿ ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಹೂಡಿಕೆದಾರರಿಂದ ಜಿಲ್ಲೆಗೆ ಸಾವಿರಾರು ಕೋಟಿ ಬಂಡವಾಳ ತರುತ್ತಿದ್ದಾರೆ. ಕ್ರೀಡಾಹಬ್ಬದ ಮೂಲಕ ಕ್ರೀಡಾಪಟುಗಳು ಮತ್ತು ಕ್ರೀಡೆಗಳಿಗೆ ಶಕ್ತಿ ಕೊಟ್ಟಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಅವರಂತೆ ಪ್ರಿಯಾಂಕ್ ಖರ್ಗೆ ಅವರ ಅಭಿವೃದ್ಧಿ ಯೋಜನೆಗಳು ರಾಜ್ಯಕ್ಕೆ ಮಾದರಿ ಯಾಗಿವೆ. ಇವರಿಂದ ಮಾತ್ರ ವಿದ್ಯಾರ್ಥಿಗಳ ಭವಿಷ್ಯ ಉಜ್ವಲ ಸಾಧ್ಯ ಎಂದರು.

ಕಾರಂಜಾ ರೈತ ಸಂತ್ರಸ್ತರಿಗೆ ಪರಿಹಾರ ಬಿಡುಗಡೆಗೆ ಕಾಲಮಿತಿ ನಿಗದಿಪಡಿಸಿ: ಲಕ್ಷ್ಮಣ ದಸ್ತಿ



ಬೀದರ್, ನ. 16: ರಾಜ್ಯ ಸರ್ಕಾರ ಕಾರಂಜಾ ಜಲಾಶಯದ ಸಂತ್ರಸ್ಥ ರೈತರಿಗೆ ಪರಿಹಾರ ನೀಡುವ ಕುರಿತು ಹಲವು ಬಾರಿ ಭರವಸೆ ನೀಡಿದ್ದರೂ, ಇದುವರೆಗೆ ಪರಿಹಾರ ಬಿಡುಗಡೆಯಾಗಿಲ್ಲ ಎಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಲಕ್ಷ್ಮಣ ದಸ್ತಿ ಹೇಳಿದರು.

ಕಾರಂಜಾ ರೈತ ಸಂತ್ರಸ್ತರ ಪರಿಹಾರ ಬಿಡುಗಡೆಗೆ ಸಂಬಂಧಿಸಿದಂತೆ ಮುಂದಿನ ಹೋರಾಟದ ರೂಪುರೇಷ ಗಳನ್ನು ರೂಪಿಸಲು ಲಕ್ಷ್ಮಣ ದಸ್ತಿ ಅವರೊಂದಿಗೆ ನಗರದಲ್ಲಿ ರೈತ ಸಂತ್ರಸ್ತರ ಮುಖಂಡರು ಸಮಾ ಲೋಚನಾ ಸಭೆ ನಡೆಸಿದರು.

ಸಭೆಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಯವರು ಸಂತ್ರಸ್ತರನ್ನು ವಿಶೇಷವಾಗಿ ಭೇಟಿ ಮಾಡಿ, ಕಾಲಮಿತಿಯಲ್ಲಿ ಪರಿಹಾರ ಒದಗಿಸುವ ಭರವಸೆ ನೀಡಿರುವ ಹಿನ್ನೆಲೆಯಲ್ಲಿ, ಸರ್ಕಾರ ಮಾನವೀಯ ದೃಷ್ಟಿಕೋನದಿಂದ ಏಕರೂಪ ಪರಿಹಾರ ಸೂತ್ರ ಅನುಸರಿಸಿ ತಕ್ಷಣ ಪರಿಹಾರ ಹಣ ಬಿಡುಗಡೆಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಬೀದರ್ ಜಿಲ್ಲೆಯ ಜ್ವಲಂತ ಸಮಸ್ಯೆಯಾಗಿರುವ ಕಾರಂಜಾ ರೈತ ಸಂತ್ರಸ್ತರ ಪರಿಹಾರ ವಿಚಾರದಲ್ಲಿ ಜಿಲ್ಲೆಯ ಸಚಿವರು ಹಾಗೂ ಶಾಸಕರು ಸಕಾರಾತ್ಮಕವಾಗಿ ಸ್ಪಂದಿಸಿರುವುದು ಆಶಾದಾಯಕ ಬೆಳವಣಿಗೆ. ಈ ಸಮಸ್ಯೆಯನ್ನು ಸವಾಲಾಗಿ ಸ್ವೀಕರಿಸಿ, ನಿಗದಿತ ಕಾಲಮಿತಿಯಲ್ಲಿ ರೈತರಿಗೆ ಪರಿಹಾರ ದೊರಕಿಸಿಕೊಡುವ ನಿಟ್ಟಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು ಹಾಗೂ ಶಾಸಕರು ರಾಜಕೀಯ ಇಚ್ಛಾಶಕ್ತಿ ಪ್ರದರ್ಶಿಸಬೇಕು ಎಂದು ಒತ್ತಾಯಿಸಿದರು.

ಈ ಸಮಸ್ಯೆಯ ಪರಿಹಾರಕ್ಕಾಗಿ ಆದಷ್ಟು ಶೀಘ್ರದಲ್ಲಿ ಜಿಲ್ಲೆಯ ಸಚಿವರು ಹಾಗೂ ಶಾಸಕರನ್ನು ಭೇಟಿಯಾಗಿ, ಸಂತ್ರಸ್ತರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಬೇಡ ಶಾಸಕ ತುರ್ವಿಹಾಳ ಕಿವಿಮಾತು

ರಾಯಚೂರು, ನ. 16: ಆರೋಗ್ಯವೇ ಮಹಾಭಾಗ್ಯ ಎನ್ನುವ ನಾಣ್ನುಡಿಯಿದೆ. ಆರೋಗ್ಯಕ್ಕಿಂತ ಮಿಗಿಲಾದದ್ದು, ಜೀವನದಲ್ಲಿ ಯಾವ ಭಾಗ್ಯವು ಇಲ್ಲ. ಇದನ್ನು ಗಮನದಲ್ಲಿಟ್ಟು ಕೊಂಡು ಸಾರ್ವಜನಿಕರು ರೋಗ ಬರುವ ಮುಂಚೆಯೇ ಜಾಗೃತ ರಾಗಿರಬೇಕು. ರೋಗದ ಲಕ್ಷಣಗಳು ಸಣ್ಣ ಪ್ರಮಾಣದಲ್ಲಿ ಗೋಚರಿಸಿದರೂ ನಿರ್ಲಕ್ಷ್ಯ ವಹಿಸದೆ ವೈದ್ಯರನ್ನು ಸಂಪರ್ಕಿಸಿ ಸೂಕ್ತ ಚಿಕಿತ್ಸೆ ಪಡೆಯಬೇಕು ಎಂದು ಮಸ್ಕಿ ಶಾಸಕ ಬಸನಗೌಡ ತುರ್ವಿಹಾಳ ಹೇಳಿದರು.

ಸಿಂಧನೂರ ತಾಲ್ಲೂಕಿನ ತುರ್ವಿಹಾಳ ಪಟ್ಟಣದ ಶಂಕರ ಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾ ಲಯ, ತುರ್ವಿಹಾಳ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಸಿಂಧ ನೂರಿನ ಸುಗುಣ ಆಸ್ಪತ್ರೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.



ಕೊಪ್ಪಳ ಸಂಸದ ಕೆ. ರಾಜಶೇಖರ ಹಿಟ್ನಾಳ ಮಾತನಾಡಿ, ಜನಸಾಮಾನ್ಯರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸುವಲ್ಲಿ ಇಂತಹ ಶಿಬಿರಗಳು ಮಹತ್ವದ ಪಾತ್ರವಹಿಸುತ್ತವೆ. ಪ್ರತಿಯೊಬ್ಬರೂ ಆರೋಗ್ಯ ತಪಾಸಣೆಗೆ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಗರ್ಭಕಂಠದ ಕ್ಯಾನ್ಸರ್ ತಡೆಗೆ ಎಚ್‌ಪಿವಿ ಲಸಿಕೆ ಅಗತ್ಯ

ವಿದ್ಯಾರ್ಥಿನಿಯರೊಂದಿಗೆ ಕುಳಿತು ಧೈರ್ಯ ತುಂಬಿದ ಸಂಸದೆ ಪ್ರಭಾ ಮಲ್ಲಿಕಾರ್ಜುನ್

ದಾವಣಗೆರೆ, ನ.16: ಹೆಣ್ಣುಮಕ್ಕಳ ಆರೋಗ್ಯ ರಕ್ಷಣೆ ಹಾಗೂ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವ ನಿಟ್ಟಿನಲ್ಲಿ ಹೆಚ್ ಪಿವಿ ಲಸಿಕೆಯು ಮಹತ್ವದ ಪಾತ್ರ ವಹಿಸುತ್ತದೆ. ಈ ಕುರಿತು ಪೋಷಕರು ಜಾಗೃತಿ ಹೊಂದಿ, ಅರ್ಹ ಹೆಣ್ಣುಮಕ್ಕಳಿಗೆ ಲಸಿಕೆ ಹಾಕಿಸಲು ಮುಂದಾಗಬೇಕು ಎಂದು ದಾವಣಗೆರೆ ಸಂಸದೆ ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಹೊನ್ನಾಳಿ ತಾಲ್ಲೂಕಿನ ಅರಬಗಟ್ಟ ಗ್ರಾಮದಲ್ಲಿ ಸರ್ಕಾರದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಉಚಿತ ಹೆಚ್ ಪಿವಿ ಲಸಿಕಾ ಕಾರ್ಯಕ್ರಮದಲ್ಲಿ ಭಾಗವಹಿಸಿ, ಶಾಲಾ ವಿದ್ಯಾರ್ಥಿನಿಯರಿಗೆ ಲಸಿಕೆ ನೀಡುವ ಪ್ರಕ್ರಿಯೆಯನ್ನು ವೀಕ್ಷಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿ ಯರೊಂದಿಗೆ ಕುಳಿತು ಆತ್ಮೀಯವಾಗಿ ಮಾತುಕತೆ ನಡೆಸಿದ ಸಂಸದರು,



ಲಸಿಕೆ ಪಡೆಯುವ ಮಕ್ಕಳಿಗೆ ಧೈರ್ಯ ತುಂಬಿದರು. ಆರೋಗ್ಯ ಸಿಬ್ಬಂದಿಯಿಂದ ವಿದ್ಯಾರ್ಥಿನಿಯರಿಗೆ ಲಸಿಕೆ ಹಾಕಿಸುವ ಸಂದರ್ಭದಲ್ಲಿ ಅವರೊಂದಿಗೆ ಇದ್ದು, ಮಕ್ಕಳಲ್ಲಿ ಆತ್ಮವಿಶ್ವಾಸ ಮೂಡಿಸಿದರು.

ಗರ್ಭಕಂಠದ ಕ್ಯಾನ್ಸರ್ ಮಹಿಳೆಯರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಕಾಯಿಲೆಗಳಲ್ಲಿ ಒಂದಾಗಿದೆ. ಹೆಚ್ ಪಿವಿ ಲಸಿಕೆಯ ಮೂಲಕ ಈ ಕ್ಯಾನ್ಸರ್‌ನ ಅಪಾಯವನ್ನು ಗಣನೀಯವಾಗಿ ಕಡಿಮೆ ಮಾಡ ಬಹುದಾಗಿದೆ. ಆದ್ದರಿಂದ ಹೆಣ್ಣು ಮಕ್ಕಳಿಗೆ ಸೂಕ್ತ ವಯಸ್ಸಿನಲ್ಲಿ ಲಸಿಕೆ ದೊರೆಯುವಂತೆ ನೋಡಿ ಕೊಳ್ಳುವುದು ಅತ್ಯಂತ ಅಗತ್ಯ ಎಂದು ತಿಳಿಸಿದರು.

ಹೆಣ್ಣುಮಕ್ಕಳ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ಕೇವಲ ಕುಟುಂಬದ ಜವಾಬ್ದಾರಿಯಲ್ಲ, ಸಮಾಜದ ಒಟ್ಟಾರೆ ಹೊಣೆಗಾರಿಕೆ ಯಾಗಿದೆ. ಕಾಯಿಲೆ ಬಂದ ನಂತರ ಚಿಕಿತ್ಸೆ ಪಡೆಯುವುದ ಕ್ಕಿಂತ ಮುನ್ನೆಚ್ಚರಿಕಾ ಕ್ರಮಗಳ ಮೂಲಕ ಆರೋಗ್ಯ ಕಾಪಾಡಿ ಕೊಳ್ಳುವುದು ಮುಖ್ಯ. ಈ ನಿಟ್ಟಿನಲ್ಲಿ ಸರ್ಕಾರದ ಉಚಿತ ಲಸಿಕಾ ಕಾರ್ಯಕ್ರಮಗಳ ಕುರಿತು ಗ್ರಾಮೀಣ ಭಾಗದಲ್ಲಿಯೂ ಹೆಚ್ಚಿನ ಅರಿವು ಮೂಡಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.

ಕಸದತೊಟ್ಟಿಯಲ್ಲಿ ಕಂದಾಯ ಇಲಾಖೆ ಕಡತಗಳು ಪತ್ತೆ ಪ್ರಕರಣ: ಗ್ರೇಡ್–2 ತಹಶೀಲ್ದಾರ್ ಅಮಾನತು

ಮಂಡ್ಯ, ನ.16: ನಾಗಮಂಗಲ ತಾಲ್ಲೂಕು ಕಚೇರಿಯ ಕಸದ ತೊಟ್ಟಿಯಲ್ಲಿ ಕಂದಾಯ ಇಲಾಖೆಯ ಮಹತ್ವದ ಕಡತಗಳು ಪತ್ತೆಯಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೊಬ್ಬ ಅಧಿಕಾರಿಯ ತಲೆದಂಡವಾಗಿದೆ. ಕರ್ತವ್ಯ ಲೋಪದಡಿ ನಾಗಮಂಗಲ ಅಭಿಲೇಖಾಲಯದ ಗ್ರೇಡ್–2 ತಹಶೀಲ್ದಾರ್ (ಉಪ ತಹಶೀಲ್ದಾರ್) ಎಂ. ಮಂಜುನಾಥ್ ಅವರನ್ನು ಕಂದಾಯ ಇಲಾಖೆ ಅಮಾನತುಗೊಳಿಸಿದೆ.



ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ನೀಡಿದ ವರದಿಯ ಆಧಾರದ ಮೇಲೆ, ಕಂದಾಯ ಇಲಾಖೆಯ ಅಧೀನ ಕಾರ್ಯದರ್ಶಿ ನರಸಿಂಹಮೂರ್ತಿ ಅವರು ಕಂದಾಯ ಇಲಾಖೆ ಅಧಿನಿಯಮದ ಅಡಿಯಲ್ಲಿ ಎಂ. ಮಂಜುನಾಥ್ ಅವರನ್ನು ಸೇವೆಯಿಂದ ಅಮಾನತುಗೊಳಿಸಿದ್ದಾರೆ. ಈ ಹಿಂದೆ ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ದ್ವಿತೀಯ ದರ್ಜೆ ಸಹಾಯಕ ಎಂ. ಅಶೋಕ್ ಕುಮಾರ್ ಅವರನ್ನು ಜಿಲ್ಲಾಧಿಕಾರಿಗಳು ಅಮಾನತುಗೊಳಿಸಿದ್ದರು.

ಘಟನೆಯ ಹಿನ್ನೆಲೆ:

ಕಳೆದ ಸೆಪ್ಟೆಂಬರ್ 15ರಂದು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕು ಕಚೇರಿ ಪಕ್ಕದ ಕಸದ ತೊಟ್ಟಿಯಲ್ಲಿ ರೈತರ ಜಮೀನಿಗೆ ಸಂಬಂಧಿಸಿದ ಅಮೂಲ್ಯ ದಾಖಲೆಗಳು ಪತ್ತೆಯಾಗಿದ್ದವು.

ತಾಲ್ಲೂಕು ಕಚೇರಿಯ ಅಭಿಲೇಖಾಲಯದಲ್ಲಿ (ರೆಕಾರ್ಡ್ ರೂಂ) ಸುರಕ್ಷಿತವಾಗಿ ಸಂರಕ್ಷಿಸಿ ಇಡಬೇಕಾಗಿದ್ದ ರೈತರ ಮೂಲ ಜಮೀನಿನ ಪಹಣಿ ಮ್ಯುಟೇಶನ್ ಇಂಡೆಕ್ಸ್ ಸೇರಿದಂತೆ ಹಲವು ಪ್ರಮುಖ ಕಡತಗಳನ್ನು ಸಿಬ್ಬಂದಿ ಕಸದ ಬುಟ್ಟಿಗೆ ಎಸೆದಿದ್ದರು.

ಸರ್ಕಾರಿ ಕಡತಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡದೆ ನಿರ್ಲಕ್ಷ್ಯ ವಹಿಸಿದ್ದಲ್ಲದೆ, ಹಳೆಯ ದಾಖಲೆಗಳನ್ನು ಕಸಕ್ಕೆ ಎಸೆದಿರುವುದು ಹಲವು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿತ್ತು. ಕಂದಾಯ ಇಲಾಖೆ ಯಲ್ಲಿನ ಭ್ರಷ್ಟಾಚಾರ ಬಯಲಿಗೆ ಬರುತ್ತದೆ ಎಂಬ ಭಯದಿಂದಲೇ ಉದ್ದೇಶ ಪೂರ್ವಕವಾಗಿ ದಾಖಲೆ ಗಳನ್ನು ನಾಶಪಡಿಸಲು ಕಸದ ತೊಟ್ಟಿಗೆ ಎಸೆಯಲಾಗಿದೆ ಎಂಬ ಗಂಭೀರ ಆರೋಪ ಸಾರ್ವಜನಿಕ ವಲಯದಿಂದ ಕೇಳಿ ಬಂದಿತ್ತು.

ಅಲ್ಲದೆ, ಅಮಾನತುಗೊಂಡಿರುವ ಉಪತಹಶೀಲ್ದಾರ್ ಎಂ. ಮಂಜುನಾಥ್ ವಿರುದ್ಧವೂ ಸಾರ್ವಜನಿಕವಾಗಿ ಸಾಕಷ್ಟು ಆರೋಪಗಳಿದ್ದವು. ರೈತರ ಜೀವನಾಡಿಯಂತಿರುವ ಜಮೀನು ದಾಖಲೆಗಳ ವಿಚಾರದಲ್ಲಿ ಅಸಡ್ಡೆ ತೋರಿದ ಅಧಿಕಾರಿಗಳ ವಿರುದ್ಧ ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿ, ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಬೇಕೆಂದು ಒತ್ತಾಯಿಸಿದ್ದರು. ಇದೀಗ ಕಂದಾಯ ಇಲಾಖೆಯು ಕರ್ತವ್ಯ ಲೋಪ ಎಸಗಿದ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಮೂಲಕ ಬಿಸಿ ಮುಟ್ಟಿಸಿದೆ.

ಬಳ್ಳಾರಿ: ಉದ್ಯಮಿ ಕೆ.ಜೆ. ರಘುಗೆ ಉದ್ಯಮಿ ರತ್ನ ಪ್ರಶಸ್ತಿ ಪ್ರದಾನ

ಬಳ್ಳಾರಿ, ನ. 16: ಬಿಡಿಸಿಸಿಐನ ಸದಸ್ಯರು, ಕಾಟನ್ ಜಿನ್ನಿಂಗ್ ಅಂಡ್ ಪ್ರೆಸ್ಸಿಂಗ್ ಕೈಗಾರಿಕೆಯವರಾದ ಕೆ.ಜೆ. ರಘು ಅವರಿಗೆ ಉತ್ತರ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘವು ನೀಡುವ 2026ನೇ ಸಾಲಿನ ಪ್ರತಿಷ್ಠಿತ ಉದ್ಯಮಿ ರತ್ನ ಪ್ರಶಸ್ತಿಯನ್ನು ಪ್ರದಾನ ಮಾಡಿದೆ.



ಕಾಟನ್ ಜಿನ್ನಿಂಗ್ ಮತ್ತು ಪ್ರೆಸ್ಸಿಂಗ್ ಉದ್ಯಮ ಕ್ಷೇತ್ರದಲ್ಲಿ ಕೆ.ಜೆ. ರಘು ಅವರು ಸಲ್ಲಿಸಿರುವ ಗಣನೀಯ ಸೇವೆ, ಉದ್ಯಮಶೀಲತೆ ಹಾಗೂ ಸಾಧನೆಯನ್ನು ಗುರುತಿಸಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಿರುವುದು ಬಳ್ಳಾರಿ ಜಿಲ್ಲೆಯ ಉದ್ಯಮ ವಲಯಕ್ಕೆ ಹೆಮ್ಮೆಯ ವಿಷಯವಾಗಿದೆ.

ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷರಾದ ಎಸ್. ದೊಡ್ಡನಗೌಡ, ಜಂಟಿ ಕಾರ್ಯದರ್ಶಿಗಳಾದ ವಿ. ರಾಮಚಂದ್ರ ಹಾಗೂ ವಿಶೇಷ ಆಹ್ವಾನಿತರಾಗಿ ಬಿ.ವಿ. ಬದರಿ ನಾರಾಯಣ ಅವರು ಉಪಸ್ಥಿತರಿದ್ದರು

ಮಕ್ಕಳು ದೇಶದ ಅಮೂಲ್ಯ ಸಂಪತ್ತು: ಸುಭಾಷ್ ಗಂಗಾ

ಬೀದರ, ನ. 16: ಮಕ್ಕಳು ದೇಶದ ಅಮೂಲ್ಯ ಸಂಪತ್ತು. ಪ್ರಾಥಮಿಕ ಹಂತದಲ್ಲಿಯೇ ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜತೆಗೆ ಉತ್ತಮ ಸಂಸ್ಕಾರ, ನೈತಿಕ ಮೌಲ್ಯಗಳನ್ನು ಕಲಿಸಿ ಸುಸಂಸತ ನಾಗರಿಕರನ್ನಾಗಿ ರೂಪಿಸಲು ಪ್ರತಿಯೊಬ್ಬರೂ ವಿಶೇಷ ಕಾಳಜಿ ವಹಿಸಬೇಕು ಎಂದು ದುಬಲಗುಂಡಿ ಸಂಗಮೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಸುಭಾಷ ಗಂಗಾ ಹೇಳಿದರು.



ಜಿಲ್ಲೆಯ ದುಬಲಗುಂಡಿ ಗ್ರಾಮದ ಸಂಗಮೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಶನಿವಾರ ಹಮ್ಮಿಕೊಂಡಿದ್ದ 62ನೇ ರಾಷ್ಟ್ರೀಯ ಮಕ್ಕಳ ದಿನಾಚರಣೆ, ಪರಿಸರ ಸಂರಕ್ಷಣೆಯಲ್ಲಿ ವಿದ್ಯಾರ್ಥಿಗಳ ಪಾತ್ರ ಹಾಗೂ ಮೊಬೈಲ್ ಬಿಡಿ, ಪುಸ್ತಕ ಹಿಡಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಸಂಗಮೇಶ್ವರ ಶಿಕ್ಷಣ ಸಂಸ್ಥೆ ನಿರಂತರವಾಗಿ ಶ್ರಮಿಸುತ್ತಿದೆ. ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಹೊಣೆಗಾರಿಕೆ ಯಾಗಿದ್ದು, ಎಲ್ಲರೂ ಗಿಡಗಳನ್ನು ಬೆ

ವಿಕಸಿತ ಭಾರತ 2047 ನಿರ್ಮಾಣಕ್ಕೆ ಸಂಕಲ್ಪ

ಯುವಜನರಿಗೆ: ರಾಜ್ಯಪಾಲೆ ಡಾ.ಸುಧಾ ಯಾದವ್ ಕರೆ



ಬಳ್ಳಾರಿ, ನ.16. ರತವು ಸ್ವಾತಂತ್ರ್ಯದ 100 ವರ್ಷಗಳನ್ನು ಪೂರೈಸುವ 2047ರ ವೇಳೆಗೆ, ಯುವ ಜನತೆ ದೇಶವನ್ನು ವಿಕಸಿತ ಭಾರತವನ್ನಾಗಿ ನಿರ್ಮಿಸುವ ಮಹಾಸಂಕಲ್ಪದಲ್ಲಿ ಪಾಲ್ಗೊಳ್ಳಬೇಕು ಎಂದು ಕರ್ನಾಟಕ ರಾಜ್ಯದ ರಾಜ್ಯಪಾಲೆ ಡಾ. ಸುಧಾ ಯಾದವ್ ಕರೆ ನೀಡಿದರು.

ವಿಜಯನಗರ ಶ್ರೀ ಕೃಷ್ಣ ದೇವರಾಯ ವಿಶ್ವವಿದ್ಯಾಲಯದ ಬಯಲು ರಂಗಮಂದಿರ ಆವರಣದಲ್ಲಿ ಸೋಮವಾರ ಏರ್ಪಡಿಸಿದ್ದ 2024–25ನೇ ಸಾಲಿನ 14ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಈ ವಿಶ್ವವಿದ್ಯಾಲಯವು ಕೇವಲ ಇಟ್ಟಿಗೆ ಮತ್ತು ಕಲ್ಲುಗಳಿಂದ ನಿರ್ಮಿತವಾದ ಕಟ್ಟಡವಲ್ಲ, ಬದಲಿಗೆ ಮಹಾನ್ ಸಾಮ್ರಾಟ್ ರಾಜ ಕೃಷ್ಣದೇವರಾಯರು ಕಲೆ, ಸಾಹಿತ್ಯ, ವಾಸ್ತುಶಿಲ್ಪ ಹಾಗೂ ಲೋಕಕಲ್ಯಾಣದ ಸ್ವರ್ಣಯುಗವನ್ನು ಸೃಷ್ಟಿಸಿದ ಐತಿಹಾಸಿಕ ಮತ್ತು ಗೌರವಶಾಲಿ ನೆಲದಲ್ಲಿದೆ. 2010ರಲ್ಲಿ ತನ್ನ ಸ್ಥಾಪನೆ ಯಾದಾಗಿನಿಂದ ಈ ವಿಶ್ವವಿದ್ಯಾಲಯವು ಕಡಿಮೆ ಸಮಯದಲ್ಲಿ ಉನ್ನತ ಸಾಧನೆಗಳನ್ನು ಮಾಡಿದೆ ಎಂದು ಹೇಳಿದರು.

ಲೋಕಭವನ ಕರ್ನಾಟಕದ ಯತ್ನದ ಮೇರೆಗೆ ಕೆ.ಕೆ.ಆರ್.ಡಿ.ಬಿ. ಯಿಂದ ಹಂಚಿಕೆ ಮಾಡಲಾದ 42 ಕೋಟಿ ರೂ. ಅನುದಾನದೊಂದಿಗೆ ಡಿಜಿಟಲ್ ಆಧಾರಭೂತ ರಾಜ್ಯದ ವಿಸ್ತರಣೆ ಕಾರ್ಯ ನಡೆಯುತ್ತಿದೆ. ಗ್ರೀನ್ ಕ್ಯಾಂಪಸ್, ಕೃತಕ ಬುದ್ಧಿಮತ್ತೆಯಂತಹ ಆಧುನಿಕ ಪಠ್ಯಕ್ರಮಗಳನ್ನು ಅಳವಡಿಸಿ ಕೊಳ್ಳಲಾಗಿದೆ. ತೃತೀಯ ಲಿಂಗಿಗಳ ಸಮುದಾಯ ಹಾಗೂ ಸ್ವಚ್ಛತಾ ಕಾರ್ಮಿಕರ ಮಕ್ಕಳಿಗಾಗಿ ಉಚಿತ ಶಿಕ್ಷಣ ಮತ್ತು ವಿದ್ಯಾರ್ಥಿವೇತನ ನೀಡುವ ಮೂಲಕ ವಿಶ್ವವಿದ್ಯಾಲಯವು 'ಸಬ್ ಕಾ ಸಾಥ್, ಸಬ್ ಕಾ ವಿಕಾಸ್' ನೈಜ ನಿದರ್ಶನವಾಗಿದೆ ಎಂದರು.

ವಿದ್ಯಾರ್ಥಿಗಳ ಕೈಯಲ್ಲಿರುವ ಡಿಗ್ರಿ ಕೇವಲ ಕಾಗದದ ತುಂಡಲ್ಲ, ಅದು ಅವರ ಪರಿಶ್ರಮದ ಪ್ರಮಾಣ ಹಾಗೂ ಸಮಾಜದ ಮೇಲಿನ ಜವಾಬ್ದಾರಿಯ ಪಾಸ್‌ಪೋರ್ಟ್ ಆಗಿದೆ. ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಮಾತುಗಳಂತೆ, ಶಿಕ್ಷಣದ ಮೂಲಕ ಮಾತ್ರ ಮನುಷ್ಯನ ಮೆದುಳಿನ ಸದುಪಯೋಗ ಮಾಡಲು ಸಾಧ್ಯ. ಸ್ವಾಮಿ ವಿವೇಕಾನಂದರ ಸ್ಪಷ್ಟ ಸಂದೇಶದಂತೆ ಚರಿತ್ರೆ, ಮಾನಸಿಕ ವಿಕಾಸ, ಮತ್ತು ಬುದ್ಧಿಯ ವಿಕಾಸವನ್ನುಂಟು ಮಾಡುವ ಶಿಕ್ಷಣ ನಮಗೆ ಅಗತ್ಯವಿದೆ.

ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರು ಯುವಕರಿಗೆ "ಕನಸುಗಳು ಎಂದರೆ ರಾತ್ರಿ ಮಲಗಿದಾಗ ಕಾಣುವುದಲ್ಲ, ಅವು ನಮಗೆ ನಿದ್ರೆಯನ್ನೇ ಮಾಡದಂತೆ ಮಾಡುವುದು" ಎಂದು ಬೋಧಿಸಿದ್ದಾರೆ ಎಂದರು.

ಛಲವಾದಿ ನಾರಾಯಣಸ್ವಾಮಿ ಮನೆಗೆ, ಚಾಕು, ಚೂರಿ ಪಾರ್ಸಲ್ ಪ್ರಕರಣ ಖಂಡಿಸಿ ಬಿಜೆಪಿ ಪ್ರತಿಭಟನೆ

ಕಲಬುರಗಿ, ನ. 16: ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ನಿವಾಸಕ್ಕೆ ಕೊರಿಯರ್ ಮೂಲಕ ಚಾಕು, ಚೂರಿಯಂತಹ ಮಾರಕ ಆಯುಧ ಕಳುಹಿಸಿ ಬೆದರಿಕೆ ಹಾಕಿದವರನ್ನು ಬಂಧಿಸಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿ ಬಿಜೆಪಿ ಜಿಲ್ಲಾ ಎಸ್‌ಸಿ ಮೋರ್ಚಾ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು. ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ನಡೆಸಿ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಶಾಸಕ ಬಸವರಾಜ ಮತ್ತಿಮಡು ಅವರು, ಸಾಂವಿಧಾನಿಕ ಹುದ್ದೆಯಲ್ಲಿರುವ ವಿಪಕ್ಷ ನಾಯಕನನ್ನೇ ಬೆದರಿಸಿರುವುದು ಗಂಭೀರ ವಿಚಾರ. ನಾರಾಯಣಸ್ವಾಮಿ ನಿವಾಸಕ್ಕೆ ಆಯುಧ ಕಳುಹಿಸಿದ್ದು ಸಹಿಸಲಾಗದು. ಸಣ್ಣಪುಟ್ಟ ವಿಷಯದಲ್ಲೂ ತಕ್ಷಣ ಕ್ರಮ ಕೈಗೊಳ್ಳುವ ಸರ್ಕಾರ ಇಂತಹ ಗಂಭೀರ ಪ್ರಕರಣದ ಆರೋಪಿಗಳನ್ನು ಬಂಧಿಸಿಲ್ಲ. ಕೂಡಲೇ ಬಂಧನ ಮಾಡದಿದ್ದರೆ ರಾಜ್ಯಾದ್ಯಂತ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು. ಮಾಜಿ ಸಂಸದ ಡಾ.ಉಮೇಶ ಜಾಧವ್, ಛಲವಾದಿ ನಾರಾಯಣಸ್ವಾಮಿ ನಿವಾಸಕ್ಕೆ ಚಾಕು ಕಳುಹಿಸಿದ್ದು ಖಂಡನೀಯ. ಪ್ರಜಾಪ್ರಭುತ್ವಕ್ಕೆ ಮಾರಕವಾದ ಕೃತ್ಯ. ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳ ರಕ್ಷಣೆಗಾಗಿ ಬಿಜೆಪಿ ಹೋರಾಟ ಮುಂದುವರಿಸಲಿದೆ ಎಂದು ಹೇಳಿದರು.



ನಾರಾಯಣಸ್ವಾಮಿ ಅವರನ್ನು ಹತ್ತಿಕ್ಕಲು ಕಾಂಗ್ರೆಸ್ ನಡೆಸುತ್ತಿರುವ ಷಡ್ಯಂತ್ರ ಖಂಡನೀಯ. ದಲಿತ, ಹಿಂದುಳಿದವರು ಹಾಗೂ ರೈತರ ಪರ ಧ್ವನಿ ಎತ್ತಿದ್ದರಿಂದ ಬೆದರಿಸಲಾಗುತ್ತಿದೆ. ಇಂತಹ ಗೂಂಡಾ ಸರ್ಕಾರದ ಬೆದರಿಕೆಗೆ ಬಿಜೆಪಿ ಜಗ್ಗುವುದಿಲ್ಲ. ನಾರಾಯಣಸ್ವಾಮಿ ಪರ ನಿಲ್ಲಲಿದೆ.
– ಅಂಬಾರಾಯ ಅಷ್ಟಗಿ, ಬಿಜೆಪಿ ಮುಖಂಡ ಛಲವಾದಿ

ಡಿಸಿ ಬಾರದಿದ್ದಕ್ಕೆ ಸಂಚಾರ ತಡೆ: ಮನವಿ ಸ್ವೀಕರಿಸಲು ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಆಗಮಿಸದ ಹಿನ್ನೆಲೆಯಲ್ಲಿ ಸಿಡಿದೆದ್ದ ಬಿಜೆಪಿ ಮುಖಂಡರು ರಸ್ತೆ ಸಂಚಾರ ತಡೆ ನಡೆಸಿದರು.

ಡಿಸಿ ಬರಲೇಬೇಕು ಎಂದು ಪಟ್ಟು ಹಿಡಿದು ಒಂದು ಗಂಟೆ ಕಾಲ ಪ್ರತಿಭಟನೆ ನಡೆಸಿದ್ದರಿಂದ ಸಂಚಾರ ದಟ್ಟಣೆ ಉಂಟಾಗಿ ಪ್ರಯಾಣಿಕರು ಪರದಾಡಿದರು. ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಆಗಮಿಸಿ ಮನವಿ ಸ್ವೀಕರಿಸಿದ ನಂತರ ಪ್ರತಿಭಟನೆ ಅಂತ್ಯಗೊಂಡಿತು.

ಕಾಂಗ್ರೆಸ್ ಸರ್ಕಾರ ಗೂಂಡಾಗಿರಿ ಪ್ರದರ್ಶಿಸುತ್ತಿದೆ. ವಿಧಾನ ಪರಿಷತ್? ವಿಪ ನಾಯಕರನ್ನೇ ಚಾಕು, ಚೂರಿಯಿಂದ ಬೆದರಿಸುವ ಹೀನ ಮಟ್ಟಕ್ಕೆ ಇಳಿದಿದೆ. ಇದು ಬೆಂಗಳೂರಿನ ಹಳೆಯ ರೌಡಿ ಕೋತ್ವಾಲ್ ನೀತಿ ನೆನಪಿಸುತ್ತಿದೆ. ಇಂತಹ ದಬ್ಬಾಳಿಕೆಗೆ ಬಿಜೆಪಿ ತಕ್ಕ ಉತ್ತರ ನೀಡಲಿದೆ.
– ಬಸವರಾಜ ಬೆಣ್ಣೂರ
ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ

ಆರೋಗ್ಯ ಸೇವೆಗಳ ಗುಣಮಟ್ಟ ಸುಧಾರಣೆಗೆ ಆದ್ಯತೆ: ಶಶೀಲ್ ನಮೋಶಿ



ಕಲಬುರಗಿ, ನ. 16: ದೇಶದಲ್ಲಿ ವೈದ್ಯಕೀಯ ಶಿಕ್ಷಣದ ಅವಕಾಶ ಹೆಚ್ಚಿಸುವುದರ ಜತೆ ವಿಸ್ತರಣೆ, ಆರೋಗ್ಯ ಸೇವೆಗಳ ಗುಣಮಟ್ಟ ಸುಧಾರಣೆಗೂ ಕೇಂದ್ರ ಸರ್ಕಾರ ಆದ್ಯತೆ ನೀಡುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯರೂ ಆದ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶಶೀಲ್ ನಮೋಶಿ ಹೇಳಿದರು.

ನಗರದ ಹೈದರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಎಂಆರ್‌ಎಂಸಿ ಸ್ಯಾಕ್ ಸಭಾಂಗಣದಲ್ಲಿ ಡಾ.ಮಾಲಕರೆಡ್ಡಿ ಹೋಮಿಯೋಪಥಿಕ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಆಯೋಜಿಸಿದ್ದ ಪದವಿ ಪ್ರದಾನ ಸಮಾರಂಭ ಮತ್ತು ವಾರ್ಷಿಕ ಸಮ್ಮೇಳನದಲ್ಲಿ ಅಧ್ಯಕ್ಷತೆ ವಹಿಸಿದ್ದ ಅವರು, 2029ರ ವೇಳೆಗೆ ದೇಶದಲ್ಲಿ 75 ಸಾವಿರಕ್ಕೂ ಹೆಚ್ಚು ಎಂಬಿಬಿಎಸ್ ಸೀಟು, 2030ರ ವೇಳೆಗೆ ವೈದ್ಯಕೀಯ ಕಾಲೇಜುಗಳ ಸಂಖ್ಯೆ 2 ಸಾವಿರಕ್ಕೆ ಹೆಚ್ಚಿಸುವ ಉದ್ದೇಶವಿದೆ ಎಂದರು.

2014ರಲ್ಲಿ ದೇಶದಲ್ಲಿ 370 ವೈದ್ಯಕೀಯ ಕಾಲೇಜುಗಳಿದ್ದವು. ಕಳೆದ ಒಂದು ದಶಕದಲ್ಲಿ ವೈದ್ಯಕೀಯ ಶಿಕ್ಷಣ ಕ್ಷೇತ್ರದ ವಿಸ್ತರಣೆಗೆ ಒತ್ತು ನೀಡಿದ್ದರಿಂದ ಪ್ರಸ್ತುತ ವೈದ್ಯಕೀಯ ಕಾಲೇಜುಗಳ ಸಂಖ್ಯೆ 850ಕ್ಕೆ ಏರಿಕೆಯಾಗಿದೆ. ಇದರಿಂದ ವೈದ್ಯಕೀಯ ಶಿಣಣ ಪಡೆಯಲು ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶಗಳು ಸಿಗುವಂತಾಗಿದೆ ಎಂದರು.

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಅಧ್ಯಕ್ಷ ಪೊ.ಎ.ಎಚ್. ರಾಜಾಸಾಬ್ ಮಾತನಾಡಿ, ದೇಶದಲ್ಲಿ ಆಯುರ್ವೇದ, ಹೋಮಿಯೋಪಥಿ, ಯುನಾನಿ ಸೇರಿ ಹಲವು ವೈದ್ಯಕೀಯ ಪದ್ಧತಿಗಳು ಜನರಿಗೆ ಸೇವೆ ನೀಡುತ್ತಿವೆ. ವಿವಿಧ ಚಿಕಿತ್ಸಾ ಪದ್ಧತಿಗಳಲ್ಲಿರುವ ಉತ್ತಮ ಅಂಶಗಳನ್ನು ವೈಜ್ಞಾನಿಕವಾಗಿ ಬಳಸಿಕೊಳ್ಳುವ ಮೂಲಕ ಆರೋಗ್ಯ ಸೇವೆಯನ್ನು ಮತ್ತಷ್ಟು ಪರಿಣಾಮಕಾರಿ ಆಗಿಸಬೇಕು ಎಂದು ಸಲಹೆ ನೀಡಿದರು.

ರಾಜೀವಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಕುಲಸಚಿವ (ಮೌಲ್ಯಮಾಪನ) ಡಾ.ಸಂದೀಪ್ ಹರ್ಷಂಗಿ ಮಾತನಾಡಿದರು. ಸಂಸ್ಥೆ ಉಪಾಧ್ಯಕ್ಷ ರಾಜಾ ಭೀಮಳ್ಳಿ, ಕಾರ್ಯದರ್ಶಿ ಉದಯಕುಮಾರ ಚಿಂಚೋಳಿ, ಆಡಳಿತ ಮಂಡಳಿ ಸದಸ್ಯ ಅರುಣಕುಮಾರ ಪಾಟೀಲ್, ಡಾ.ಎಸ್.ಆರ್. ಹೊಟ್ಟಿ, ಡಾ.ನಾಗೇಂದ್ರ ಮಂಠಾಳೆ, ಕಾಲೇಜಿನ ಪ್ರಾಚಾರ್ಯ ಡಾ.ಸತೀಶ ಕಲಶೆಟ್ಟಿ, ಉಪ ಪ್ರಾಚಾರ್ಯೆ ಡಾ.ವೀಣಾ ಟಿ.ಎನ್., ಉಪ ವೈದ್ಯಕೀಯ ಅಧೀಕ್ಷಕ ಡಾ.ಸಾಗರ್ ಇತರರಿದ್ದರು. ಹೋಮಿಯೋಪಥಿ ವೈದ್ಯಕೀಯ ಪದವಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣಪತ್ರ ವಿತರಿಸಲಾಯಿತು.

ವೈದ್ಯರು ರೋಗದ ಲಕ್ಷಣಗಳಿಗೆ ಮಾತ್ರ ಚಿಕಿತ್ಸೆ ನೀಡುವ ಬದಲಿಗೆ ರೋಗಿಯ ಸಂಪೂರ್ಣ ಆರೋಗ್ಯದ ಬಗ್ಗೆ ಗಮನಹರಿಸಬೇಕು. ರೋಗಿಯ ದೈಹಿಕ ಸ್ಥಿತಿ ಜತೆ ಮಾನಸಿಕ ಆರೋಗ್ಯ, ಜೀವನಶೈಲಿ ಹಾಗೂ ಪರಿಸರದ ಅಂಶಗಳನ್ನೂ ಪರಿಗಣಿಸುವ ಅಗತ್ಯವಿದೆ.
– ಡಾ.ಎ.ಎಚ್.ರಾಜಾಸಾಬ್,
ಅಧ್ಯಕ್ಷರು, ಕರ್ನಾಟಕ ವಿಜ್ಞಾನ–ತಂತ್ರಜ್ಞಾನ ಅಕಾಡೆಮಿ.



ಬೆಂಗಳೂರಿನ ಜಿಕೆವಿಕೆ ಆವರಣದಲ್ಲಿ ಸೋಮವಾರ ಕೃಷಿಮೇಳ ವೀಕ್ಷಿಸಲು ವಿದ್ಯಾರ್ಥಿಗಳು ಆಗಮಿಸಿದ್ದರು.

ಕೃಷ್ಣಾ ಗೃಹ ನಿರ್ಮಾಣಗಳಿಗೆ ಸಾಲ ಸೌಲಭ್ಯದ ನೆರವು ಅಗತ್ಯ: ಸಾಗರ್ ಖಂಡ್ರೆ ಪ್ರತಿಪಾದನೆ



ಬೀದರ್, ನ. 16: ಕೃಷಿ, ಶಿಕ್ಷಣ ಮತ್ತು ಮನೆ ನಿರ್ಮಾಣಕ್ಕೆ ಆದ್ಯತೆ ಮೇರೆಗೆ ಸಾಲ ಸೌಲಭ್ಯ ಕೊಟ್ಟು ಜನರಿಗೆ ನೆರವಾಗಬೇಕು ಎಂದು ಸಂಸದ ಸಾಗರ್ ಖಂಡ್ರೆ ಅವರು ಬ್ಯಾಂಕ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಸಲಹಾ ಸಮಿತಿ ಹಾಗೂ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಸರ್ಕಾರಿ ಯೋಜನೆಗಳು ಸಾರ್ವಜನಿಕರಿಗೆ ಸಮರ್ಪಕವಾಗಿ ದೊರೆಯಬೇಕು. ಇದಕ್ಕಾಗಿ ಅವರಿಗೆ ಸಾಲ ಸೌಲಭ್ಯ ಸಿಗಬೇಕು. ಜಿಲ್ಲೆಯಲ್ಲಿ ಬರ ಆವರಿಸಿಕೊಂಡಿದೆ. ಇಂತಹ ಸಂದರ್ಭದಲ್ಲಿ ರೈತರಿಗೆ ನೆರವಾಗುವುದು ಎಲ್ಲರ ಕರ್ತವ್ಯ. ಕರ್ನಾಟಕ ಬ್ಯಾಂಕ್ ರೈತರಿಗೆ ಸಾಲ ನೀಡುವ ವಿಚಾರದಲ್ಲಿ ಹಿಂದೆ ಬಿದ್ದಿದೆ. ಮುಂದಿನ ದಿನಗಳಲ್ಲಿ ನಿಗದಿಪಡಿಸಿದ ಸಾಧನೆ ಮಾಡಬೇಕು ಎಂದು ಸೂಚಿಸಿದರು.

ಬಡ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸಾಲ ನೀಡಬೇಕು. ವಿದ್ಯಾರ್ಥಿಗಳಲ್ಲಿ ಸಾಲ ಹೇಗೆ ಪಡೆಯಬೇಕು ಎಂಬುದರ ಕುರಿತು ವಿವರ ಪ್ರಚಾರ ಕೈಗೊಳ್ಳಬೇಕು. ಸಾಲ ಬಯಸುವ ಯಾವುದೇ ವಿದ್ಯಾರ್ಥಿ ಶಿಕ್ಷಣದಿಂದ ವಂಚಿತರಾಗಬಾರದು. ವಿದ್ಯಾರ್ಥಿಗಳಿಗಾಗಿ ವಿದ್ಯಾಲಕ್ಷ್ಮಿ ಯೋಜನೆ ಬಹಳ ಉಪಯುಕ್ತವಾಗಿದ್ದು, ಈ ಯೋಜನೆಯ ಲಾಭ ವಿದ್ಯಾರ್ಥಿಗಳಿಗೆ ಸಿಗಬೇಕು ಎಂದರು.

ವಿವಿಧ ವಸತಿ ಯೋಜನೆಗಳು ಜಾರಿಯಲ್ಲಿವೆ. ಅರ್ಹ ಫಲಾನುಭವಿಗಳಿಗೆ ವಸತಿ ಯೋಜನೆಯಡಿ ಮನೆಗಳು ಸಿಗುವಂತೆ ನೋಡಿಕೊಳ್ಳಬೇಕು. ಅದಕ್ಕೆ ಬೇಕಾಗುವ ಅಗತ್ಯ ದಾಖಲೆಗಳ ಕುರಿತು ಫಲಾನುಭವಿಗಳಿಗೆ ಪರಿಪೂರ್ಣ ಮಾಹಿತಿ ಒದಗಿಸಬೇಕು. ಫಲಾನುಭವಿಗಳು ಅಲೆದಾಡುವಂತಾಗಬಾರದು. ಬೆಳೆಸಾಲ, ಶಿಕ್ಷಣ ಹಾಗೂ ವಸತಿ ನಿರ್ಮಾಣಗಳ ಸಾಲವನ್ನು ಹೆಚ್ಚಿಸಲು ಕ್ರಮ ವಹಿಸಬೇಕು. ಈ ಕುರಿತು ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಚರ್ಚಿಸಿ ಮುಂದಿನ ಕ್ರಮದ ಕುರಿತು ವಿವರ ನೀಡಬೇಕು ಎಂದು ಹೇಳಿದರು.

ಸಣ್ಣ ಉದ್ದಿಮೆ ಸ್ಥಾಪನೆ: ಸಣ್ಣ ಉದ್ದಿಮೆಗಳನ್ನು ಸ್ಥಾಪಿಸಲು ಜನ ಮುಂದೆ ಬಂದಾಗ ಅರ್ಜಿಗಳನ್ನು ಸ್ವೀಕರಿಸಿ, ಯೋಜನೆಗಳಿಂದ ವಂಚಿತರಾಗದಂತೆ ಕ್ರಮ ವಹಿಸಬೇಕು. ಇಲಾಖೆಯ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳು ಸಮನ್ವಯ ಸಾಧಿಸಬೇಕು. ಮುದ್ರಾ ಯೋಜನೆಯಡಿ ಶಿಶುಸಾಲ ನೀಡುವುದರಲ್ಲಿ ಬಹಳ ಕಡಿಮೆ ಸಾಧನೆ ಆಗಿದೆ. ಮುಂದಿನ ದಿನಗಳಲ್ಲಿ ಇದನ್ನು ಶೇ 50 ರಷ್ಟು ಹೆಚ್ಚಿಸಬೇಕು ಎಂದು ಸಲಹೆ ಮಾಡಿದರು.

ಹಾಸನ: ಕಾಡಾನೆ ದಾಳಿಗೆ ತೋಟದ ಕಾರ್ಮಿಕನ ಬಲಿ



ಹಾಸನ, ನ.16: ಹಾಸನ ಜಿಲ್ಲೆಯ ಬೇಲೂರು ತಾಲೂಕಿನಲ್ಲಿ ಇಂದು ಬೆಳಿಗ್ಗೆ ತೋಟವೊಂದರಲ್ಲಿ ಕೆಲಸ ಮಾಡುತ್ತಿದ್ದ 64 ವರ್ಷದ ವೃದ್ಧನೊಬ್ಬ ಕಾಡಾನೆ ದಾಳಿಯಿಂದ ಮೃತಪಟ್ಟಿದ್ದಾರೆ. ಕಳೆದ ಎರಡು ದಿನಗಳಲ್ಲಿ ಸಂಭವಿಸಿದ ಎರಡನೇ ಕಾಡಾನೆ ದಾಳಿಯ ಸಾವು ಇದಾಗಿದೆ. ಮೃತನನ್ನು ಹಫೀಜ್ ಉರ್ ರೆಹಮಾನ್ ಎಂದು ಗುರುತಿಸಲಾಗಿದೆ. ಪತ್ನಿ ಮತ್ತು ಇಬ್ಬರು ಪುತ್ರರನ್ನು ಅಗಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಇದಕ್ಕೂ ಕೇವಲ ಎರಡು ದಿನಗಳ ಹಿಂದೆ, ಬೇಲೂರಿನ ಪಾಳುಬಿದ್ದ ಕೃಷಿ ಜಮೀನಿನಲ್ಲಿ ಜಾನುವಾರುಗಳನ್ನು ಮೇಯಿಸುತ್ತಿದ್ದ 65 ವರ್ಷದ ಜಯಮ್ಮ ಎಂಬುವರು ಕಾಡಾನೆ ದಾಳಿಯಿಂದ ಮೃತಪಟ್ಟಿದ್ದರು.

ಈ ಘಟನೆಯ ನಂತರ ಸ್ಥಳೀಯರು ಪ್ರತಿಭಟನೆ ನಡೆಸಿದ್ದು ಅರಣ್ಯ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು.ನಂತರ ಕಾಡಾನೆಗಳನ್ನು ಓಡಿಸಲು ಕ್ರಮಕೈಗೊಳ್ಳುವುದಾಗಿ ಅರಣ್ಯ ಇಲಾಖೆ ಭರವಸೆ ನೀಡಿದ ನಂತರವಷ್ಟೇ ಪ್ರತಿಭಟನೆ ಹಿಂಪಡೆಯಲಾಗಿತ್ತು. ಇದಾದ ಬೆನ್ನಲ್ಲೇ ವಾರ ಎರಡನೇ ಮಾರಣಾಂತಿಕ ಆನೆ ದಾಳಿ ಸಂಭವಿಸಿದೆ.

ಸೋಮವಾರ ಬೆಳಿಗ್ಗೆ 9.30ರ ಸುಮಾರಿಗೆ ನಾಗೇನಹಳ್ಳಿಯ ತೋಟವೊಂದರಲ್ಲಿ ಕೆಲಸ ಮಾಡುತ್ತಿದ್ದ ರೆಹಮಾನ್ ಅವರು ಕಾಡಾನೆಯೊಂದು ತುಳಿದು ಕೊಂದಿದೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ.

ಎರಡು ದಿನಗಳ ಅಂತರದಲ್ಲಿ ಸಂಭವಿಸಿದ ಈ ಎರಡನೇ ಸಾವಿನಿಂದಾಗಿ ಸ್ಥಳೀಯರು ಮತ್ತೆ ಪ್ರತಿಭಟನೆಗೆ ನಡೆಸುತ್ತಿದ್ದಾರೆ. ಈ ಪ್ರದೇಶದಲ್ಲಿ ಹೆಚ್ಚುತ್ತಿರುವ ಮಾನವ–ಪ್ರಾಣಿ ಸಂಘರ್ಷವನ್ನು ತಡೆಯುವಲ್ಲಿ ಅರಣ್ಯ ಇಲಾಖೆಯು "ನಿರ್ಲಕ್ಷ್ಯ ವಹಿಸಿದೆ ಮತ್ತು ವಿಫಲವಾಗಿದೆ" ಎಂದು ಆರೋಪಿಸಿದ್ದಾರೆ.

ಪ್ರತಿಭಟನಾಕಾರರನ್ನು ಸಮಾಧಾನಪಡಿಸಲು ಮತ್ತು ಪರಿಸ್ಥಿತಿಯನ್ನು ನಿಯಂತ್ರಿಸಲು ಪೊಲೀಸರು ಪ್ರಯತ್ನಿಸಿದರು. ಇನ್ನು ಶನಿವಾರ ಬೆಳಿಗ್ಗೆಯಿಂದಲೇ ಆ ಪ್ರದೇಶದಲ್ಲಿ ಆನೆಗಳ ಓಡಾಟದ ಬಗ್ಗೆ ಗ್ರಾಮಸ್ಥರಿಗೆ ಎಚ್ಚರಿಕೆ ನೀಡಲಾಗಿತ್ತು ಎಂದು ಅರಣ್ಯ ಇಲಾಖೆ ತಿಳಿಸಿದೆ.

ರಾಯಚೂರಿಗೆ ಏಮ್ಸ್ ಬರಲೇಬೇಕು, ರೈತರ ಬದುಕು ಹಸನಗೊಳಿಸಲು ನವಲಿ ಜಲಾಶಯ ಅಗತ್ಯ: ರಾಮಣ್ಣ ಹವಳೆ



ರಾಯಚೂರು, ನ. 16: ಕನ್ನಡ ಭಾಷೆಯ ಉಳಿವು, ಏಮ್ಸ್ ಸ್ಥಾಪನೆ, ತುಂಗಭದ್ರಾ ನದಿ ನೀರಿನ ಸಮರ್ಪಕ ಬಳಕೆ, ಕೈಗಾರಿಕೆಗಳ ಸ್ಥಾಪನೆ ಹಾಗೂ ನಿರುದ್ಯೋಗ ಸಮಸ್ಯೆ ನಿವಾರಣೆ ಈ ಭಾಗದ ಪ್ರಮುಖ ಆದ್ಯತೆಗಳಾಗಬೇಕು ಎಂದು ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷ ರಾಮಣ್ಣ ಹವಳೆ ಪ್ರತಿಪಾದಿಸಿದರು.

12ನೇ ಜಿಲ್ಲ

ಶಿವಸೇನೆ ಪಕ್ಷಾಂತರ ವದಂತಿ ಅಮಿತ್ ಶಾ-ಶಿಂದೆ ಮಾತುಕತೆ





ಪುಣೆ, ನ.16: ಶಿವಸೇನೆಯಲ್ಲಿನ (ಉದ್ಧವ್ ಬಣ) ಪಕ್ಷಾಂತರದ ವದಂತಿಗಳು ತೀವ್ರಗೊಂಡಿರುವ ಬೆನ್ನಲ್ಲೇ, ಮಹಾರಾಷ್ಟ್ರ ಉಪಮುಖ್ಯಮಂತ್ರಿ ಏಕನಾಥ್ ಶಿಂದೆ ಅವರು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಪುಣೆಯಲ್ಲಿ ಭೇಟಿ ಮಾಡಿ ಮಹತ್ವದ ಮಾತುಕತೆ ನಡೆಸಿದ್ದಾರೆ ಎಂದು ವರದಿಯಾಗಿದೆ.

ಎರಡು ದಿನಗಳ ಪುಣೆ ಪ್ರವಾಸದಲ್ಲಿರುವ ಅಮಿತ್ ಶಾ ಅವರು ಸೇನಾಪತಿ ಬಾಪಟ್ ರಸ್ತೆಯಲ್ಲಿರುವ ಜೆಡಬ್ಲ್ಯೂ ಮ್ಯಾರಿಯಟ್ ಹೋಟೆಲ್‌ನಲ್ಲಿ ತಂಗಿದ್ದು, ಅಲ್ಲಿಗೆ ಭೇಟಿ ನೀಡಿದ ಏಕನಾಥ್ ಶಿಂದೆ ಪ್ರಸ್ತುತ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚಿಸಿದ್ದಾರೆ. ಈ ಸಭೆಯಲ್ಲಿ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಉಪಮುಖ್ಯಮಂತ್ರಿ ಸುನೇತ್ರಾ ಪವಾರ್ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ರವೀಂದ್ರ ಚವಾಣ್ ಕೂಡ ಉಪಸ್ಥಿತರಿದ್ದರು.

ಉದ್ಧವ್ ಠಾಕ್ರೆ ಬಣದಿಂದ ಬಂಡಾಯವೆದ್ದು ಶಿಂದೆ ಬಣ ಸೇರಿರುವ ಸಂಸದರ ಪೈಕಿ ಓಮರಾಜೆ ನಿಂಬಾಳ್ಕರ್ ಕೂಡ ಈ ಭೇಟಿಯ ವೇಳೆ ಹಾಜರಿದ್ದು, ಶಿವಸೇನೆಗೆ ಕೇಂದ್ರ ಸಚಿವ ಸಂಪುಟದಲ್ಲಿ ಸ್ಥಾನ ನೀಡುವ ಕುರಿತು ಅಮಿತ್ ಶಾ ಮತ್ತು ಶಿಂದೆ ನಡುವೆ ಗಂಭೀರ ಚರ್ಚೆ ನಡೆದಿದೆ. ಮುಂಬರುವ ದಿನಗಳಲ್ಲಿ ಶಿವಸೇನೆಗೆ ಕೇಂದ್ರದಲ್ಲಿ ಒಂದು ಸಚಿವ ಸ್ಥಾನ ಸಿಗುವ ಸಾಧ್ಯತೆಯಿದ್ದು, ಆಕಾಂಕ್ಷಿಗಳ ಪಟ್ಟಿಯಲ್ಲಿ ನಿಂಬಾಳ್ಕರ್ ಹೆಸರು ಮುಂಚೂಣಿಯಲ್ಲಿದೆ ಎನ್ನಲಾಗಿದೆ.

ಮತ್ತೊಂದೆಡೆ, ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮತ್ತು ಉಪಮುಖ್ಯಮಂತ್ರಿ ಏಕನಾಥ್ ಶಿಂದೆ ನಡುವೆ ಭಿನ್ನಾಭಿಪ್ರಾಯವಿದೆ ಎಂಬ ವದಂತಿಗಳ ನಡುವೆಯೇ, ಪುಣೆಯಲ್ಲಿ ಅಮಿತ್ ಶಾ ಅವರ ಸ್ವಾಗತಕ್ಕಾಗಿ ಶಿಂದೆ ಬಣದ ಶಿವಸೇನೆ ಬ್ಯಾನರ್‌ಗಳನ್ನು ಹಾಕಿದೆ. ಅಮಿತ್ ಶಾ ತಂಗಿರುವ ಹೋಟೆಲ್ ಮಾರ್ಗದಲ್ಲಿ ಬಿಜೆಪಿ ನಾಯಕರಿಗಿಂತಲೂ ಏಕನಾಥ್ ಶಿಂದೆ ಅವರ ಬ್ಯಾನರ್‌ಗಳೇ ಹೆಚ್ಚು ರಾರಾಜಿಸುತ್ತಿರುವುದು ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಇದಕ್ಕೂ ಮುನ್ನ ಪುಣೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಏಕನಾಥ ಶಿಂದೆ, ಅಸಾಧ್ಯವಾದುದನ್ನು ಸಾಧ್ಯವಾಗಿಸುವ ಅಮಿತ್‌ಶಾ ಅವರಿಗೆ ನನ್ನ ನಮನಗಳು. ಸಹಕಾರಿ ಕ್ಷೇತ್ರಕ್ಕೆ ಅವರು ಹೊಸ ರೂಪ ನೀಡಿದ್ದಾರೆ ಎಂದು ಶ್ಲಾಘಿಸಿದ್ದರು.


ಅಕ್ವನ್ ಸೈಕ್ಲೋನ್ ಭೀತಿ: ದೇಶದ ನಾಲ್ಕು ರಾಜ್ಯಗಳಲ್ಲಿ ಹೈ ಅಲರ್ಟ್

ಬೆಂಗಳೂರು, ನ.16: ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತ ತೀವ್ರಗೊಂಡಿದ್ದು, ಅಕ್ವನ್ ಚಂಡಮಾರುತವಾಗಿ ಬದಲಾಗುವ ಭೀತಿ ಎದುರಾಗಿದೆ. ಇದರ ಪರಿಣಾಮವಾಗಿ ದಕ್ಷಿಣ ಮತ್ತು ಪೂರ್ವ ಕರಾವಳಿ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ ಹಾಗೂ ಒಡಿಶಾದಲ್ಲಿ ಮುಂದಿನ ದಿನಗಳಲ್ಲಿ ಭಾರಿ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದೆ.

ಹವಾಮಾನ ವರದಿಯ ಪ್ರಕಾರ, ನವೆಂಬರ್ 17ರಿಂದ 20ರವರೆಗೆ ತಮಿಳುನಾಡು ಹಾಗೂ ಪುದುಚೇರಿಯಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ.ಅದೇ ರೀತಿ, ಆಂಧ್ರಪ್ರದೇಶದಲ್ಲಿ ನವೆಂಬರ್ 18 ರಿಂದ 20 ರವರೆಗೆ ಮತ್ತು ಒಡಿಶಾದಲ್ಲಿ ನವೆಂಬರ್ 18 ರಿಂದ 21 ರವರೆಗೆ ವ್ಯಾಪಕವಾಗಿ ಭಾರಿ ಮಳೆ ಸುರಿಯುವ ಎಚ್ಚರಿಕೆ ನೀಡಲಾಗಿದೆ.

ಸಂಭವನೀಯ ಚಂಡಮಾರುತ ಮತ್ತು ಭಾರಿ ಮಳೆಯಿಂದ ಉಂಟಾಗಬಹುದಾದ ಪ್ರವಾಹ ಹಾಗೂ ಅನಾಹುತಗಳನ್ನು ತಡೆಗಟ್ಟಲು ಮೂರೂ ರಾಜ್ಯಗಳ ಕರಾವಳಿ ಜಿಲ್ಲೆಗಳಲ್ಲಿ ಹೈಅಲರ್ಟ್ ಘೋಷಿಸಲಾಗಿದೆ. ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗುವ ಸಾಧ್ಯತೆ ಇರುವುದರಿಂದ ಸ್ಥಳೀಯ ಆಡಳಿತಗಳು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಹಾಗೂ ರಕ್ಷಣಾ ಪಡೆಗಳನ್ನು ಸನ್ನದ್ಧವಾಗಿರಿಸುವಂತೆ ಹವಾಮಾನ ಇಲಾಖೆ ಮತ್ತು ವಿಪತ್ತು ನಿರ್ವಹಣಾ ಪ್ರಾಧಿಕಾರಗಳು ಸೂಚನೆ ನೀಡಿವೆ.

ಚಂಡಮಾರುತವು ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆ ಕರಾವಳಿ ತೀರಗಳಲ್ಲಿ ಗಂಟೆಗೆ 120 ರಿಂದ 145 ಕಿಲೋಮೀಟರ್ ವೇಗದಲ್ಲಿ ಬಿರುಗಾಳಿ ಬೀಸುವ ಸಾಧ್ಯತೆಯಿದೆ. ಬಿರುಗಾಳಿಯ ಪರಿಣಾಮ ಸಮುದ್ರದಲ್ಲಿ ಅಲೆಗಳ ಅಬ್ಬರ ತೀವ್ರವಾಗಿ ಹೆಚ್ಚಾಗಲಿದ್ದು, ಕಡಲು ಪ್ರಕ್ಷುಬ್ಧವಾಗಿರಲಿದೆ. ಹೀಗಾಗಿ, ಈಗಾಗಲೇ ಆಳ ಸಮುದ್ರಕ್ಕೆ ತೆರಳಿರುವ ಮೀನುಗಾರರು ತಕ್ಷಣವೇ ಸುರಕ್ಷಿತವಾಗಿ ದಡಕ್ಕೆ ಮರಳುವಂತೆ ಮತ್ತು ಮುಂದಿನ ಸೂಚನೆ ಬರುವವರೆಗೂ ಯಾರೂ ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.



ದಕ್ಷಿಣ ಮತ್ತು ಪೂರ್ವ ಕರಾವಳಿ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ ಹಾಗೂ ಒಡಿಶಾದಲ್ಲಿ ಭಾರಿ ಮಳೆಯಾಗಲಿದೆ

ಕರ್ನಾಟಕದಲ್ಲೂ ಭಾರಿ ಮಳೆ ಸಾಧ್ಯತೆ

ಇನ್ನು ಬಂಗಾಳಕೊಲ್ಲಿಯಲ್ಲಿ ಹೊಸ ಹವಾಮಾನ ವೈಪರೀತ್ಯದ ಪರಿಣಾಮ ನವೆಂಬರ್ 18 ಮತ್ತು 19ರಂದು ಕರ್ನಾಟಕದಲ್ಲಿಯೂ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಬಂಗಾಳಕೊಲ್ಲಿ ಮತ್ತು ಅಂಡಮಾನ್ ಸಮುದ್ರದಲ್ಲಿ ವಾಯುಭಾರ ಕುಸಿತ ಉಂಟಾಗಿದೆ. ಇದು ನವೆಂಬರ್ 16ರ ವೇಳೆಗೆ ಚಂಡಮಾರುತವಾಗಿ ಬದಲಾಗಿ ಭಾರತದ ಪೂರ್ವ ಕರಾವಳಿಯ ಕಡೆಗೆ ಚಲಿಸುವ ನಿರೀಕ್ಷೆಯಿದೆ. ಎರಡು ದಿನಗಳ ನಂತರ ಕರ್ನಾಟಕದ ಹಲವಾರು ಭಾಗಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಮಂಡ್ಯ, ಮೈಸೂರು, ಚಾಮರಾಜನಗರ, ಕೊಡಗು, ಹಾಸನ, ಚಿಕ್ಕಮಗಳೂರು, ಶಿವಮೊಗ್ಗ, ದಕ್ಷಿಣ ಕನ್ನಡ, ಉಡುಪಿ ಮತ್ತು ಧಾರವಾಡ ಜಿಲ್ಲೆಗಳಲ್ಲಿ ನವೆಂಬರ್ 19 ರವರೆಗೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಟ್ರಂಪ್-ಪುಟಿನ್ ಭೇಟಿ ಬೆನ್ನಲ್ಲೇ ತ್ರಿಪಕ್ಷೀಯ ಮಾತುಕತೆಗೆ ಮುಂದಾದ ಟ್ರಂಪ್



ವಾಷಿಂಗ್ಟನ್, ನ.16: ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೋಮವಾರ ಏಷ್ಯಾಕ್ಕೆ ತೆರಳಲು ಸಿದ್ಧತೆ ನಡೆಸಿದ್ದು, ಆರ್ಥಿಕ ಒಪ್ಪಂದಗಳು ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗೆ ಐತಿಹಾಸಿಕ ತ್ರಿಪಕ್ಷೀಯ ಪರಮಾಣು ಮಾತುಕತೆಯತ್ತ ಗಮನ ಹರಿಸಿದ್ದಾರೆ.

ಚೀನಾದಲ್ಲಿ ಚೀನಾದ ಅಧ್ಯಕ್ಷ ಕ್ಸಿ ಜಿನ್ಪಿಂಗ್ ಮತ್ತು ರಷ್ಯಾದ ನಾಯಕ ವ್ಲಾಡಿಮಿರ್ ಪುಟಿನ್ ಅವರೊಂದಿಗಿನ ಬಹು ನಿರೀಕ್ಷಿತ ಸಭೆಯಲ್ಲಿ ಉಕ್ರೇನ್‌ನಲ್ಲಿ ರಷ್ಯಾದ 5 ವರ್ಷಗಳ ಯುದ್ಧದ ಬಗ್ಗೆ ಮಾತನಾಡಲು ತಾನು ಯೋಜಿಸುತ್ತಿದ್ದೇನೆ ಎಂದು ಟ್ರಂಪ್ ಹೇಳಿದರು.

ಉತ್ತರ ಕೊರಿಯಾವನ್ನು ತನ್ನ ಪರಮಾಣು ಕಾರ್ಯಕ್ರಮದಲ್ಲಿ ಮರು ತೊಡಗಿಸಿಕೊಳ್ಳಲು ಅಮೆರಿಕ ನೋಡುತ್ತಿರುವಾಗ ಅವರು ಚೀನಾದಲ್ಲಿದ್ದಾಗ ಕಿಮ್ ಜಾಂಗ್ ಉನ್ ಅವರನ್ನು ಭೇಟಿಯಾಗಬಹುದು ಎಂದು ಅವರು ಹೇಳಿದರು. ಡೆಮೋಕ್ರಾಟ್‌ಗಳು ಹೌಸ್ ಆಫ್ ಕಾಮನ್ಸ್ ಮತ್ತು ಸೆನೆಟ್ ನಿಯಂತ್ರಣವನ್ನು ವಶಪಡಿಸಿಕೊಂಡಿದ್ದರಿಂದ ಮಧ್ಯಂತರ ಚುನಾವಣೆಯಲ್ಲಿ ಇತ್ತೀಚಿನ ಹಿನ್ನಡೆಯ ನಂತರ ದೇಶೀಯ ಟೀಕೆಗಳನ್ನು ಎದುರಿಸುತ್ತಿರುವ ಟ್ರಂಪ್ಗೆ ಈ ಭೇಟಿಯು ರಾಜಕೀಯವಾಗಿ ಸವಾಲಿನ ಕ್ಷಣದಲ್ಲಿ ಬಂದಿದೆ.

ಚೀನಾದ ತಂತ್ರಜ್ಞಾನ ಕೇಂದ್ರವಾದ ಶೆನ್ಜೆನ್‌ಗೆ ಪ್ರಯಾಣಿಸುವ ಮೊದಲು ಟ್ರಂಪ್ ಮನಿಲಾದಲ್ಲಿ ತಮ್ಮ ಪ್ರಯಾಣವನ್ನು ಪ್ರಾರಂಭಿಸುತ್ತಾರೆ. ಪ್ರವಾಸವು ಅವರಿಗೆ ವಿದೇಶಾಂಗ ನೀತಿಯತ್ತ ಗಮನ ಹರಿಸಲು ಅವಕಾಶವನ್ನು ನೀಡುತ್ತದೆ ಮತ್ತು ಮನೆಯಲ್ಲಿನ ರಾಜಕೀಯ ತೊಂದರೆಗಳು ಪ್ರಮುಖ ವಿಶ್ವ ಶಕ್ತಿಗಳೊಂದಿಗೆ ತೊಡಗಿಸಿಕೊಳ್ಳುವ ಅವರ ಸಾಮರ್ಥ್ಯವನ್ನು ದುರ್ಬಲಗೊಳಿಸಿಲ್ಲ ಎಂದು ಪ್ರದರ್ಶಿಸುತ್ತದೆ.

ವಿಶ್ವಸಂಸ್ಥೆ ಪರಿಶೀಲನೆಗೆ ಅವಕಾಶ ನೀಡಲ್ಲ

ಯುದ್ಧವು ಶಾಶ್ವತವಾಗಿ ಕೊನೆಗೊಳ್ಳುವ"ವರೆಗೂ ಹಾನಿಗೊಳಗಾದ ಪರಮಾಣು ತಾಣಗಳಲ್ಲಿ ವಿಶ್ವಸಂಸ್ಥೆಯ ಪರಿಶೀಲನೆಗೆ ಅವಕಾಶ ನೀಡುವುದಿಲ್ಲ ಎಂದು ಇರಾನ್ ಹೇಳಿದೆ. ಯುದ್ಧವು "ಶಾಶ್ವತವಾಗಿ ಕೊನೆಗೊಳ್ಳುವವರೆಗೂ, ಹಾನಿಗೊಳಗಾದ ಪರಮಾಣು ಸೌಲಭ್ಯಗಳನ್ನು ಪರಿಶೀಲಿಸಲು ಪರಮಾಣು ಶಕ್ತಿ ಸಂಸ್ಥೆ ಪರಿಶೀಲ ಅಂತರರಾಷ್ಟ್ರೀಯರಿಗೆ ಅವಕಾಶ ನೀಡುವುದಿಲ್ಲ ಎಂದು ಇರಾನ್‌ನ ಹಿರಿಯ ಅಧಿಕಾರಿಯೊಬ್ಬರು. ಸೆಪ್ಟೆಂಬರ್‌ನಲ್ಲಿ ಪರಿಶೀಲಕರು ಇರಾನ್‌ನ ಬುಶೆಹರ್ ಪರಮಾಣು ಸ್ಥಾವರಕ್ಕೆ ಭೇಟಿ ನೀಡಿದ್ದರು; ಆದರೆ ಯುದ್ಧ ಪ್ರಾರಂಭವಾದಾಗಿನಿಂದ ಅಮೆರಿಕದ ದಾಳಿಗೆ ಗುರಿಯಾದ ಇತರ ತಾಣಗಳಿಗೆ ಪ್ರವೇಶ ಪಡೆಯಲು ಅವರಿಗೆ ಸಾಧ್ಯವಾಗಿಲ್ಲ.

ಮಧ್ಯಪ್ರಾಚ್ಯಕ್ಕೆ ಅಮೆರಿಕದ ಮೂರನೇ ವಿಮಾನವಾಹಕ ನೌಕೆ ಆಗಮನ

ವಾಷಿಂಗ್ಟನ್, ನ.16: ಇರಾನ್‌ನೊಂದಿಗಿನ ಉದ್ವಿಗ್ನತೆಗಳು ವ್ಯಾಪಕ ಯುದ್ಧಕ್ಕೆ ತಿರುಗುವ ಬೆದರಿಕೆಯನ್ನು ಒಡ್ಡುತ್ತಿರುವುದರಿಂದ ಅಮೆರಿಕ ಮೂರು ವಿಮಾನವಾಹಕ ನೌಕೆಗಳನ್ನು ಮಧ್ಯಪ್ರಾಚ್ಯಕ್ಕೆ ಕರೆತಂದಿದೆ. ಯುಎಸ್ಎಸ್ ಥಿಯೋಡರ್ ರೂಸ್‌ವೆಲ್ಟ್‌ನ ಆಗಮನವು ಈ ಪ್ರದೇಶದಲ್ಲಿ ವಾಷಿಂಗ್ಟನ್‌ನ ಮಿಲಿಟರಿ ಉಪಸ್ಥಿತಿಗೆ ಸಾವಿರಾರು ಸೈನಿಕರು ಮತ್ತು ನೂರಾರು ಯುದ್ಧ ವಿಮಾನಗಳನ್ನು ಸೇರಿಸುತ್ತದೆ.

ಇರಾನಿನ ಗುರಿಗಳ ಮೇಲೆ ಹೊಸ ಯುಎಸ್ ದಾಳಿಗಳು, ಹಾರ್ಮುಜ್ ಜಲಸಂಧಿಯಲ್ಲಿ ತೈಲ ಟ್ಯಾಂಕರ್‌ಗಳ ಮೇಲಿನ ದಾಳಿಗಳು ಮತ್ತು ಅಂತರರಾಷ್ಟ್ರೀಯ ಪರಮಾಣು ತಪಾಸಣೆಗಳನ್ನು ಅನುಮತಿಸಲು ಟೆಹ್ರಾನ್ ನಿರಾಕರಿಸಿದ ನಡುವೆ ಈ ಬೆಳವಣಿಗೆ ನಡೆದಿದೆ.

ಯುಎಸ್ ಅಧಿಕಾರಿಯ ಪ್ರಕಾರ, ಯುಎಸ್ಎಸ್ ಥಿಯೋಡರ್ ರೂಸ್‌ವೆಲ್ಟ್ ನ.15ರಂದು ಸೆಂಟ್‌ಕಾಮ್ ಜವಾಬ್ದಾರಿಯ ಪ್ರದೇಶವನ್ನು ಪ್ರವೇಶಿಸಿತು. ಇದರ ಆಗಮನವು ಯುಎಸ್ಎಸ್ ಜಾರ್ಜ್ ಎಚ್‌ಡಬ್ಲ್ಯೂ ಬುಷ್ ಮತ್ತು ಯುಎಸ್ಎಸ್ ಜಾರ್ಜ್ ವಾಷಿಂಗ್ಟನ್ ಜೊತೆಗೆ ಈ ಪ್ರದೇಶದಲ್ಲಿ ಅಮೇರಿಕನ್ ವಿಮಾನವಾಹಕ ನೌಕೆಗಳ ಸಂಖ್ಯೆ ಮೂರಕ್ಕೆ ಏರಿದಂತಾಗಿದೆ.

ರೂಸ್‌ವೆಲ್ಟ್ ಆರಂಭದಲ್ಲಿ ಈ ಪ್ರದೇಶದಲ್ಲಿ ಈಗಾಗಲೇ ನಿಯೋಜಿಸಲಾದ ವಾಹಕಗಳಲ್ಲಿ ಒಂದನ್ನು ಬದಲಾಯಿಸುವ ನಿರೀಕ್ಷೆಯಿತ್ತು. ಆದಾಗ್ಯೂ, ಯುಎಸ್ಎಸ್ ಜಾರ್ಜ್ ವಾಷಿಂಗ್ಟನ್ ಸೆಂಟ್ಕಾಮ್ ಪ್ರದೇಶದಲ್ಲಿಯೇ ಉಳಿದುಕೊಂಡಿತು, ಮೂರು ವಾಹಕ ಮುಷ್ಕರ ಗುಂಪುಗಳು ಅಲ್ಲಿ ಏಕಕಾಲದಲ್ಲಿ ಕಾರ್ಯನಿರ್ವಹಿಸಲು ಅವಕಾಶ ಮಾಡಿಕೊಟ್ಟವು.

ಸೋಮವಾರ, ಯುಎಸ್ಎಸ್ ಥಿಯೋಡರ್ ರೂಸ್ವೆಲ್ಟ್ ಮಧ್ಯಪ್ರಾಚ್ಯಕ್ಕೆ ಆಗಮಿಸಿದೆ ಎಂದು ಯುಎಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಈ ವಿಮಾನವಾಹಕ ನೌಕೆಯು ಯುಎಸ್ ಸೆಂಟ್ರಲ್ ಕಮಾಂಡ್ ಜವಾಬ್ದಾರಿಯ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಇತರ ಎರಡು ವಿಮಾನವಾಹಕ ನೌಕೆಗಳನ್ನು ಸೇರುತ್ತದೆ.



ಡಿಲಿಮಿಟ್ ಆದ ಮತದಾರರ ಸೇರ್ಪಡೆಗೆ ಫಾರಂ 6: ಇಸಿಐ

ನವದೆಹಲಿ, ನ.16: ದೆಹಲಿಯಲ್ಲಿ ನಡೆದ 'ವಿಶೇಷ ತೀವ್ರ ಪರಿಷ್ಕರಣೆ'ಯ ನಂತರ, ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದಿದ್ದರೆ ಮತದಾರರು ಹೆಸರು ಮರು ಸೇರ್ಪಡೆಗೆ 'ನಮೂನೆ 6' (ಫಾರಂ 6) ಅನ್ನು ಬಳಸಬಹುದು ಎಂದು ಭಾರತೀಯ ಚುನಾವಣಾ ಆಯೋಗವು ಸುಪ್ರೀಂ ಕೋರ್ಟ್‌ಗೆ ತಿಳಿಸಿದೆ. ಈ ನಮೂನೆಯು ಮೂಲತಃ ಮೊದಲ ಬಾರಿಗೆ ನೋಂದಾಯಿಸಿಕೊಳ್ಳುವವರಿಗಾಗಿ ಮಾತ್ರ ಉದ್ದೇಶಿಸಲಾಗಿದ್ದರೂ, ಅದನ್ನು ಬಳಸಿದ ಕಾರಣಕ್ಕಾಗಿ ಮತದಾರರ ವಿರುದ್ಧ ಯಾವುದೇ ಕಾನೂನು ಕ್ರಮ ಜರುಗಿಸಲಾಗುವುದಿಲ್ಲ ಎಂದು ಆಯೋಗ ಸ್ಪಷ್ಟಪಡಿಸಿದೆ. ಅ.28ರಂದು ನಡೆದ ವಿಚಾರಣೆಯ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್‌ಗೆ ತಿಳಿಸಿರುವ ಆಯೋಗ, ಉಪಚುನಾವಣಾ ಆಯುಕ್ತ ಭಾನುಪ್ರಕಾಶ್ ಅವರು ನ.14ರಂದು ಸಲ್ಲಿಸಿದ ಅಫಿಡವಿಟ್‌ನಲ್ಲಿ ಈ ಸ್ಪಷ್ಟನೆಯನ್ನು ನೀಡಿದ್ದಾರೆ.

ಈಗಾಗಲೇ ಮತದಾರರ ಪಟ್ಟಿಯಲ್ಲಿ ಹೆಸರಿರುವ ವ್ಯಕ್ತಿಯೊಬ್ಬರು, ಕೇವಲ ಮೊದಲ ಬಾರಿಗೆ ಮತದಾರರಾಗುವವರಿಗಾಗಿ ಇರುವ 'ನಮೂನೆ 6' ಅನ್ನು ಏಕೆ ಸಲ್ಲಿಸಬೇಕು ಎಂದು ನ್ಯಾಯಾಲಯವು ಪ್ರಶ್ನಿಸಿತ್ತು. ಅಲ್ಲದೆ, ಕರಡು ಪಟ್ಟಿಯಿಂದ ಕೈಬಿಡಲ್ಪಟ್ಟ ಮತದಾರರನ್ನು ಸಂಪರ್ಕಿಸುವಂತೆ ಆಯೋಗಕ್ಕೆ ಸಲಹೆ ನೀಡಿತ್ತು. ಈ ಹಿನ್ನೆಲೆಯಲ್ಲಿ, ನ.3ರಂದು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾ ಅಧಿಕಾರಿಗಳಿಗೆ ಕಳುಹಿಸಲಾದ ಪತ್ರವನ್ನು ಚುನಾವಣಾ ಆಯೋಗವು ನ್ಯಾಯಾಲಯದ ದಾಖಲೆಗೆ ಸಲ್ಲಿಸಿದೆ. ಆದಾಗ್ಯೂ, ಈ ರಕ್ಷಣೆಯು ಅನ್ವಯವಾಗಬೇಕಾದರೆ, ಆ ಮತದಾರರು ಈಗಾಗಲೇ ಬೇರೆ ಯಾವುದೇ ಸಂಸದೀಯ ಅಥವಾ ವಿಧಾನಸಭಾ ಕ್ಷೇತ್ರಗಳಲ್ಲಿ ನೋಂದಾಯಿತರಾಗಿರಬಾರದು ಮತ್ತು ಅರ್ಜಿಯೊಂದಿಗೆ ಸಲ್ಲಿಸಲಾದ ಘೋಷಣೆಯು ಕಾನೂನಿಗೆ ಅನುಗುಣವಾಗಿರಬೇಕು.

ಮುಂಬೈ-ಗೋವಾ ಹೆದ್ದಾರಿ ಕಾಮಗಾರಿ ವಿಳಂಬ: 2,000 ಕೋಟಿ ಹೊರೆ

ಮುಂಬೈ, ನ.16: ಕರಾವಳಿ ಭಾಗದ ಆರ್ಥಿಕ ಚಟುವಟಿಕೆಗಳಿಗೆ ವೇಗ ನೀಡುವ ನಿರೀಕ್ಷೆಯೊಂದಿಗೆ ಆರಂಭವಾದ 592 ಕಿ.ಮೀ ಉದ್ದದ ಮಹತ್ವಾಕಾಂಕ್ಷಿ ಮುಂಬೈ-ಗೋವಾ ಹೆದ್ದಾರಿ (ರಾಹೆ-66) ಯೋಜನೆ ದಶಕಗಳು ಕಳೆದರೂ ಇನ್ನೂ ಪೂರ್ಣಗೊಂಡಿಲ್ಲ. ವಿಶೇಷವಾಗಿ ಮಹಾರಾಷ್ಟ್ರ ವ್ಯಾಪ್ತಿಯ 472 ಕಿ.ಮೀ ಮಾರ್ಗದಲ್ಲಿ ಇನ್ನೂ ಸುಮಾರು 8 ಕಿ.ಮೀ ಕಾಮಗಾರಿ ಬಾಕಿ ಉಳಿದಿದ್ದು, ಇದರಿಂದ ಯೋಜನೆಯ ವೆಚ್ಚ 2,000 ಕೋಟಿಗೂ ಅಧಿಕ ಪ್ರಮಾಣದಲ್ಲಿ ಏರಿಕೆಯಾಗಿದೆ. ಈ ವಿಳಂಬದ ಹಿಂದೆ ರಾಜಕೀಯ ಪ್ರಭಾವಿಗಳು, ಸಾಲ ಮರುಪಾವತಿಸದವರು ಹಾಗೂ ತನಿಖಾ ಸಂಸ್ಥೆಗಳ ಕಣ್ಣಿಗೆ ಬಿದ್ದಿರುವ ಉದ್ಯಮಿಗಳ ಕಂಪನಿಗಳು ಭಾಗಿಯಾಗಿರುವುದು ದಾಖಲೆಗಳಿಂದ ಬಹಿರಂಗವಾಗಿದೆ.

2006ರಲ್ಲಿ ರೂಪುಗೊಂಡ ಈ ಯೋಜನೆಯ ಕಾಮಗಾರಿ 2007ರಲ್ಲಿ ಆರಂಭವಾಗಿತ್ತು. 2018ಕ್ಕೆ ಮುಗಿಯಬೇಕಿದ್ದ ಕಾಮಗಾರಿ ಹಲವು ಬಾರಿ ಗಡುವು ವಿಸ್ತರಣೆಯಾಗಿ 2026ರ ಅಂತ್ಯಕ್ಕೆ ಬಂದು ನಿಂತಿದೆ. ಆರಂಭದಲ್ಲಿ ಮಹಾರಾಷ್ಟ್ರ ವಿಭಾಗಕ್ಕೆ 12,532 ಕೋಟಿ ಅಂದಾಜು ಮಾಡಲಾಗಿತ್ತು. ಆದರೆ ಭೂಸ್ವಾಧೀನ ವಿಳಂಬ, ಸ್ಥಳೀಯರ ಬೇಡಿಕೆಯಂತೆ ಹೆಚ್ಚುವರಿ ಅಂಡರ್‌ಪಾಸ್‌ಗಳ ನಿರ್ಮಾಣ ಮತ್ತು ಕಾಮಗಾರಿಯ ಸ್ವರೂಪ ಬದಲಾವಣೆಯಿಂದಾಗಿ ಒಟ್ಟು ವೆಚ್ಚ ಶೇ. 44ರಷ್ಟು ಹೆಚ್ಚಾಗಿ 18,100 ಕೋಟಿ ದಾಟಿದೆ.

ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದ ಕಾರ್ಯದರ್ಶಿ ವಿ. ಉಮಾಶಂಕರ್ ಪ್ರಕಾರ, ಕಳೆದ ಎರಡು ವರ್ಷಗಳಲ್ಲಿ ಸ್ಥಗಿತಗೊಂಡಿದ್ದ ಕಾಮಗಾರಿಗಳಿಗೆ ವೇಗ ನೀಡಲಾಗಿದ್ದು, ಶೇ. 99ರಷ್ಟು ಕೆಲಸ ಪೂರ್ಣಗೊಂಡಿದೆ. ಬಾಕಿ ಕೆಲಸ ಮುಂದಿನ ಏಪ್ರ